27 February 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

info.varthaman@gmail.com

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 107 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

**ಭಾವನಾಂತರಂಗ**

ಒಳ್ಳೆಯವರು ಸನ್ಮಾರ್ಗವನ್ನು ತೋರಿಸಿ ಕೊಡುತ್ತಾರೆ, ಕೆಟ್ಟವರು ಹೇಗೆ ವರ್ತಿಸಬೇಕು ಎಂದು ಹೇಳಿ ಕೊಡುತ್ತಾರೆ

-ಸ್ನೇಹಾ ಆನಂದ್



ಎಸ್‌ಎಸ್‌ಎಲ್‌ಸಿ ಪರೀಕ್ಷೆ: ರಾಮನಗರದಲ್ಲಿ 7453 ವಿದ್ಯಾರ್ಥಿಗಳ ನೋಂದಣಿ ಪುಟ ಸಂ. 2



ಲಂಬಾಣಿ ಸಮುದಾಯ ಸಮಾಜದ ಮುಖ್ಯವಾಹಿನಿಗೆ ಬರಲಿ: ಶಾಂತರಾಜು ಪುಟ ಸಂ. 3



ಹಾಸ್ಟೆಲ್‌ಗಳಲ್ಲಿ ಮೂಲಸೌಕರ್ಯ ಒದಗಿಸಿ: ವಿನೋತ್ ಪ್ರಿಯಾ ಸೂಚನೆ ಪುಟ ಸಂ. 4

# ಸತ್ತವರ ಖಾತೆಗಳಿಗೂ 79 ಕೋಟಿ ರೂ. ಗೃಹಲಕ್ಷ್ಮಿ ಹಣ ಪಾವತಿ!

ಬೆಂಗಳೂರು: ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳು ಹೊರೆ ಆಗಿರುವ ಬಗ್ಗೆ ಚರ್ಚೆ ನಡೆಯುತ್ತಿರುವ ಬೆನ್ನಲ್ಲಿಯೇ ಸತ್ತವರ ಖಾತೆಗಳಿಗೂ ಗೃಹಲಕ್ಷ್ಮಿ ಹಣ ಸಂದಾಯವಾಗುತ್ತಿರುವ ವಿಚಾರ ಬೆಳಕಿಗೆ ಬಂದಿದೆ. ಮೃತಪಟ್ಟವರ ಬ್ಯಾಂಕ್ ಖಾತೆಗಳಿಗೆ 79 ಕೋಟಿ ರೂ. ಗೃಹಲಕ್ಷ್ಮಿ ಹಣ ಪಾವತಿ ಆಗಿರುವುದು ಬಯಲಾಗಿದೆ.

ಇದುವರೆಗೆ 2.30 ಲಕ್ಷ ಗೃಹಲಕ್ಷ್ಮಿ ಫಲಾನುಭವಿಗಳು ಮರಣ ಹೊಂದಿದ್ದಾರೆ. ಆದರೆ, ಅವರ ಖಾತೆಗಳಿಗೆ ಕೂಡ ಹಣ ಸಂದಾಯವಾಗಿದೆ. 79 ಕೋಟಿ ಹಣ ವಾಪಸ್ ಪಡೆಯಲು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಮುಂದಾಗಿದೆ. ಇದುವರೆಗೆ ಕೇವಲ 2.30 ಕೋಟಿ ರಿಕವರಿ ಮಾಡಿಕೊಂಡಿದೆ.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಮೇಲೆ ಜಾರಿಯಾದ ಗ್ಯಾರಂಟಿಗಳನ್ನು ಸ್ವಪಕ್ಷದ ಶಾಸಕರು, ಜನಪ್ರತಿನಿಧಿಗಳೇ ಬಹಿರಂಗವಾಗಿ ವಿರೋಧಿಸಿ ಮಾತನಾಡಿದ್ದರು. ಗ್ಯಾರಂಟಿಗಳಿಂದ ಅಭಿವೃದ್ಧಿಗಳು ಆಗ್ತಿಲ್ಲ. ಅನುದಾನಕ್ಕೆ ಕೊಕ್ಕೆ ಬಿದ್ದಿದೆ. ಕ್ಷೇತ್ರದಲ್ಲಿ ಯಾವ ಕೆಲಸ ಆಗ್ತಿಲ್ಲ ಎಂದು ಓಪನ್ನಾಗಿ ಹೇಳಿಕೆ ಕೊಟ್ಟಿದ್ದರು. ಸರ್ಕಾರದ ವಿರುದ್ಧವೇ ಅಸಮಾಧಾನ ಹೊರ ಹಾಕಿದ್ದರು.

ಸುಪ್ರೀಂ ಕೋರ್ಟ್ ಕೂಡ ಗ್ಯಾರಂಟಿ, ಉಚಿತ ಯೋಜನೆಗಳ ವಿರುದ್ಧ ಅಸಮಾಧಾನ ಹೊರಹಾಕಿತ್ತು. ದೇಶದ ಅಭಿವೃದ್ಧಿ, ಆರ್ಥಿಕತೆಗೆ ಮಾರಕ ಎಂದು ಹೇಳಿತ್ತು. ಈ ಬೆನ್ನಲ್ಲೇ ಇದೀಗ ರಾಜ್ಯ ಸರ್ಕಾರದ ಡಿಸಿಎಂ ಡಿಕೆ ಶಿವಕುಮಾರ್, ಗ್ಯಾರೆಂಟಿ ಯೋಜನೆಗಳು ಸರ್ಕಾರಕ್ಕೆ ಹೊರೆ ಎಂದಿದ್ದರು. ಸಿಎಂ ಸಿದ್ದರಾಮಯ್ಯ ಕೂಡ ವರ್ಷಕ್ಕೆ 52,000 ಕೋಟಿಗಿಂತ ಜಾಸ್ತಿ ಹಣ ಬೇಕು ಎಂದಿದ್ದಾರೆ. ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳು ರಾಜ್ಯಕ್ಕೆ ಆರ್ಥಿಕ ಹೊರೆಯಾಗಿದೆ ಎಂಬುದನ್ನು ಸಿಎಂ, ಡಿಸಿಎಂ, ಸಚಿವರು ಆಡಿರುವ ಮಾತುಗಳು ಬಹಿರಂಗವಾಗಿ ಒಪ್ಪಿಕೊಂಡಂತಾಗಿದೆ.






## 2.30 ಕೋಟಿ ವಾಪಸ್: ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್

ಬೆಂಗಳೂರು: ಸತ್ತವರ ಖಾತೆಗಳಿಗೆ ಪಾವತಿ ಆಗಿರುವ ಗೃಹಲಕ್ಷ್ಮಿ ಹಣವನ್ನು ವಾಪಸ್ ಪಡೆಯುವಂತೆ ಆದೇಶಿಲಾಗಿದೆ. ಅಲ್ಲದೆ, ಈಗಾಗಲೇ 2.30 ಕೋಟಿಯನ್ನು ವಾಪಸ್ ಪಡೆಯಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದರು.



ಸತ್ತವರ ಖಾತೆಗಳಿಗೂ ಗೃಹಲಕ್ಷ್ಮಿ ಹಣ ಸಂದಾಯವಾಗುತ್ತಿರುವ ಬಗ್ಗೆ ಮಾಧ್ಯಮಗಳ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಅವರು, ಇದುವರೆಗೆ ಪಾವತಿ ಆಗಿರುವ ಹಣ ವಾಪಸ್ ಪಡೆಯಲಾಗುವುದು. ಅಲ್ಲದೆ, ಸತ್ತವರ ಖಾತೆಗಳನ್ನು ನಿಷ್ಕ್ರಿಯ ಮಾಡಲು ಸೂಚಿಸಲಾಗಿದೆ. ಇನ್ಮುಂದೆ ಸತ್ತವರ ಖಾತೆಗೆ ಹಣ ಪಾವತಿ ಆದರೆ ಸಂಬಂಧಿಸಿದ ಅಧಿಕಾರಿಯನ್ನು ಹೊಣೆ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

## ವಿಪಕ್ಷ ನಾಯಕರ ಆಕ್ರೋಶ

ಬೆಂಗಳೂರು: ಬೊಕ್ಕಸಕ್ಕೆ ಗ್ಯಾರಂಟಿ ಹೊರೆ ಎಂದ ಸರ್ಕಾರದ ವಿರುದ್ಧ ಬಿಜೆಪಿ ನಾಯಕರು ವಾಗ್ದಾಳಿ ಮಾಡಿದ್ದಾರೆ. ಶಾಸಕ ಅಶ್ವಥ್ ನಾರಾಯಣ್, ಸಿಟಿ ರವಿ ಸಿಟ್ಟು ಹೊರಹಾಕಿದ್ದಾರೆ. ಕೇಂದ್ರ ಸಚಿವ ಕುಮಾರಸ್ವಾಮಿ, ಗ್ಯಾರಂಟಿಗಳ ಭರವಸೆ ನೀಡಿ ಕಾಂಗ್ರೆಸ್ ಅಧಿಕಾರಕ್ಕೆ ಬಂತು. ಆದರೆ ಅಧಿಕಾರಕ್ಕೆ ಬಂದ ನಂತರ ನಾಡಿನ ಅಭಿವೃದ್ಧಿಗೆ ಪೂರಕವಾದ ಕಾರ್ಯಕ್ರಮ ಕಾಣುತ್ತಿಲ್ಲ. ಜನರಿಂದ ಸಂಗ್ರಹಿಸಿದ ತೆರಿಗೆ ಹಣ ಜನಪರ ಯೋಜನೆಗಳಿಗೆ ಬಳಕೆಯಾಗ್ತಿಲ್ಲ ಅದರ ಪ್ರತಿಫಲವೇ ಇಂದಿನ ಸ್ಥಿತಿ ಎಂದು ಟೀಕಿಸಿದ್ದಾರೆ.

## ಮೋದಿಗೆ 10 ಕೋಟಿ ಫಾಲೋವರ್ಸ್

### ಜಾಗತಿಕ ನಾಯಕರ ಹಿಂದಿಕ್ಕಿದ ಪ್ರಧಾನಿ

ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಅವರು ಡಿಜಿಟಲ್ ಕ್ಷೇತ್ರದಲ್ಲಿ ಹೊಸ ಮೈಲಿಗಲ್ಲು ನಿರ್ಮಿಸಿದ್ದಾರೆ. ಇನ್‌ಸ್ಟಾಗ್ರಾಮ್‌ನಲ್ಲಿ 100 ಮಿಲಿಯನ್ (10 ಕೋಟಿ) ಫಾಲೋವರ್ಸ್ ಹೊಂದುವ ಮೂಲಕ ವಿಶೇಷ ಸಾಧನೆ ಮಾಡಿದ್ದಾರೆ.

ಈ ಮೂಲಕ ದೇಶವನ್ನು ಮುನ್ನಡೆಸುವ ಜಾಗತಿಕ ನಾಯಕರ ಪಟ್ಟಿಯಲ್ಲಿ ಮೊದಲ ವಿಶ್ವನಾಯಕ ಎಂಬ ಹೆಗ್ಗಳಿಕೆಗೆ ಮೋದಿ ಪಾತ್ರವಾಗಿದ್ದಾರೆ. 2014ರಲ್ಲಿ ಪ್ರಧಾನಿ ಹುದ್ದೆಗೇರಿದ ಬಳಿಕ ಇನ್‌ಸ್ಟಾಗ್ರಾಮ್ ಪ್ರವೇಶಿಸಿದ್ದ ಮೋದಿ ಅವರು ಗಮನಾರ್ಹ ಬೆಳವಣಿಗೆ ಸಾಧಿಸಿದ್ದಾರೆ.



ಜಾಗತಿಕ ನಾಯಕರ ಪಟ್ಟಿಯಲ್ಲಿ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಇಂಡೋನೇಷ್ಯಾ, ಬ್ರೆಜಿಲ್ ಅಧ್ಯಕ್ಷ ಹಾಗೂ ಭಾರತದ ಯೋಗಿ ಆದಿತ್ಯನಾಥ್ ಮತ್ತು ರಾಹುಲ್ ಗಾಂಧಿ ಅವರಿಗೆ ಹೋಲಿಸಿದರೆ ಮೋದಿ ಫಾಲೋವರ್ಸ್‌ಗಳ ಸಂಖ್ಯೆ ಹಲವು ಪಟ್ಟು ಹೆಚ್ಚಿದೆ. ಭಾರತದ ರಾಜಕೀಯ ನಾಯಕರ ಪಟ್ಟಿಯಲ್ಲಿ ಯುಪಿ ಸಿಎಂ ಯೋಗಿ ಆದಿತ್ಯನಾಥ್ 1.61 ಕೋಟಿ ಮತ್ತು ರಾಹುಲ್ ಗಾಂಧಿ 1.26 ಕೋಟಿ ಫಾಲೋವರ್ಸ್‌ಗಳನ್ನ ಹೊಂದುವ ಮೂಲಕ 2 ಮತ್ತು 3ನೇ ಸ್ಥಾನದಲ್ಲಿದ್ದಾರೆ. 2024ರಲ್ಲಿ ಮೋದಿ ಅವರು ಎಕ್ಸ್‌ನಲ್ಲಿ 100 ಮಿಲಿಯನ್ ಫಾಲೋವರ್ಸ್ ಹೊಂದಿದ್ದ ಸಾಧನೆ ಮಾಡಿದ್ದರು.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ 4.32 ಕೋಟಿ, ಇಂಡೋನೇಷ್ಯಾ ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ 1.5 ಕೋಟಿ, ಬ್ರೆಜಿಲ್ ಅಧ್ಯಕ್ಷ

ಪುಟ 2ಕ್ಕೆ

# ರಾಜ್ಯದಲ್ಲಿ ಅಭಿವೃದ್ಧಿ ಶೂನ್ಯ

## ಗ್ಯಾರಂಟಿಗಳಿಂದ ತೆರಿಗೆ ಹೊರೆಯೂ ಹೆಚ್ಚಳ — ಎಚ್‌ಡಿಕೆ ವಾಗ್ದಾಳಿ

**ಚಾಮರಾಜನಗರ/ಗುಂಡ್ಲುಪೇಟೆ:** ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳನ್ನು ಹೊರತುಪಡಿಸಿ ಅಭಿವೃದ್ಧಿ ಕಾಣುತ್ತಿಲ್ಲ ಎಂದು ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ವಾಗ್ದಾಳಿ ನಡೆಸಿದರು.

ಗುಂಡ್ಲುಪೇಟೆ ತಾಲ್ಲೂಕಿನ ಕಡಬೂರಿನಲ್ಲಿ ಶಿವ ಗಣಪತಿ ದೇಗುಲ ಉದ್ಘಾಟಿಸಿದ ಬಳಿಕ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ರಾಜ್ಯದಲ್ಲಿ ಅಭಿವೃದ್ಧಿ ಶೂನ್ಯವಾಗಿದೆ. ಅಲ್ಲದೆ, ಗ್ಯಾರಂಟಿ ಕಾರಣದಿಂದ ಜನರಿಗೆ ತೆರಿಗೆಯ ಹೊರೆಯೂ ಹೆಚ್ಚಾಗಿದೆ. ಆಶ್ವಾಸನೆ ಕೊಟ್ಟು ಅಧಿಕಾರಕ್ಕೆ ಬಂದ ಕಾಂಗ್ರೆಸ್ ನವರು ಈಗ ಗ್ಯಾರಂಟಿ ಹೊರೆ ಎನ್ನುತ್ತಿದ್ದಾರೆ. ಸರ್ಕಾರಕ್ಕೆ ಸರಿಯಾದ ನಿಲುವಿದ್ದರೆ ಅಭಿವೃದ್ಧಿ ಮಾಡಬಹುದಾಗಿತ್ತು ಎಂದು ಟೀಕಿಸಿದರು.

ಬಿಜೆಪಿ ವಿರುದ್ಧ 40 ಪರ್ಸೆಂಟ್ ಕಮಿಷನ್ ಎಂದು ಅಪಪ್ರಚಾರ ಮಾಡಿ ಅಧಿಕಾರಕ್ಕೆ ಬಂದರು. ಈಗ ಕಾಂಗ್ರೆಸ್ ಸರ್ಕಾರ ಮಾಡುತ್ತಿರುವುದು ಏನು? ಗುತ್ತಿಗೆದಾರರು ಬದುಕಲು ಸಾಧ್ಯವಾಗುತ್ತಿಲ್ಲ. ಆತ್ಮಹತ್ಯೆ ಮಾಡಿಕೊಳ್ಳುವ ಹಂತಕ್ಕೆ ತಲುಪಿದ್ದಾರೆ ಎಂದು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ನಿಖಿಲ್ ರಾಮನಗರದಿಂದ ಸ್ಪರ್ಧೆ ಬಗ್ಗೆ ಮಾತನಾಡಿ, ಈಗ ಜನರಿಗೆ ಯಾರ ನಡವಳಿಕೆ ಏನು ಎಂಬುದು ಮನವರಿಕೆಯಾಗಿದೆ. ರಾಮನಗರ ಜಿಲ್ಲೆಯನ್ನು ಒಳಗೊಂಡಂತೆ

ವಿವರ ಪುಟ 3ಕ್ಕೆ



### ಉದ್ಯೋಗ ನೀಡುವುದು ಸರ್ಕಾರದ ಜವಾಬ್ದಾರಿ

ಖಾಲಿ ಹುದ್ದೆಗಳನ್ನು ಭರ್ತಿ ಮಾಡಲಾಗದೇ ರಾಜ್ಯ ಸರ್ಕಾರ ಎಡವಿದೆ ಉದ್ಯೋಗ ಆಕಾಂಕ್ಷಿಗಳು ಸರ್ಕಾರದ ವಿರುದ್ಧ ತಿರುಗಿ ಬಿದ್ದಿದ್ದಾರೆ. ಈಗ ಸಂಪುಟದಲ್ಲಿ ಚರ್ಚೆ ಮಾಡುತ್ತೇವೆ ಎನ್ನುತ್ತಿದ್ದಾರೆ. ಉದ್ಯೋಗ ನೀಡುವುದು ಸರ್ಕಾರದ ಜವಾಬ್ದಾರಿ. ಕೇಂದ್ರ ಸರ್ಕಾರ ಉದ್ಯೋಗ ಕೊಟ್ಟಿಲ್ಲ ಏಕೆ ಎಂದು ಪ್ರಶ್ನಿಸಲು ಸಾಧ್ಯವಿಲ್ಲ. ಅವರು ಕೊಡಲಿಲ್ಲ. ಅದಕ್ಕಾಗಿ ನಾನೂ ಕೊಡಲ್ಲಾ ಎನ್ನಲಾಗುತ್ತದೆಯೇ? ಎಂದು ಅವರು ಪ್ರಶ್ನಿಸಿದರು.

### ಜೊತೆಗಿರಲು ಮೈತ್ರಿ ಅಗತ್ಯ

ರಾಜ್ಯದಲ್ಲಿರುವ ಕೆಟ್ಟ ಸರ್ಕಾರವನ್ನು ಕಿತ್ತೆಸೆದು ಒಳ್ಳೆಯ ಸರ್ಕಾರ ನೀಡಲು ಚುನಾವಣೆಯಲ್ಲಿ ನನ್ನ ಪಾತ್ರವನ್ನು ನಾನು ನಿರ್ವಹಿಸುತ್ತೇನೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದರು. ಸ್ಥಳೀಯ ಚುನಾವಣೆಯಲ್ಲೂ ಬಿಜೆಪಿ-ಜೆಡಿಎಸ್ ಮೈತ್ರಿ ಇರಲಿದೆಯೇ ಎಂಬ ಬಗ್ಗೆ ಮಾತನಾಡಿ, ಜೊತೆ ಇರುವ ಉದ್ದೇಶದಿಂದಲೇ ಮೈತ್ರಿ ಮಾಡಿಕೊಂಡಿದ್ದೇವೆ. ಜೊತೆಗೆ ಇದ್ದೇವೆ. ಮುಂದಿನ ಚುನಾವಣೆಯಲ್ಲಿ ನಮ್ಮ ಮೈತ್ರಿ ಸರ್ಕಾರಕ್ಕೆ ಜನರು ಬೆಂಬಲ ನೀಡಲಿದ್ದಾರೆ ಎಂದರು.

## ವಿರೋಧಿ ಬಣಕ್ಕೆ ಸಿಎಂ ಸಿದ್ದರಾಮಯ್ಯ ಸಂದೇಶ?

### ಸಿಎಂ ಅಧಿಕೃತ ನಿವಾಸ ಕಾವೇರಿ ನವೀಕರಣಕ್ಕೆ ಚಾಲನೆ

ಬೆಂಗಳೂರು: ಅಧಿಕಾರ ಹಂಚಿಕೆ ಚರ್ಚೆ ನಡೆಯುತ್ತಿರುವಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕೃತ ಕಾವೇರಿ ನಿವಾಸದ ನವೀಕರಣಕ್ಕೆ ಮುಂದಾಗಿದ್ದಾರೆ.

ಕಾವೇರಿ ನಿವಾಸದ ಗ್ರೌಂಡ್ ಫ್ಲೋರ್ ನವೀಕರಣದ ಕೆಲಸ ಭರದಿಂದ ಸಾಗಿದೆ. ಅಧಿಕಾರದಲ್ಲಿ ಮುಂದುವರೆಯುತ್ತಿದ್ದಾಗ ನವೀಕರಣ ಮಾಡುವುದು ಸಾಮಾನ್ಯ. ಆದರೆ ಈಗ ಪವರ್ ಫೈಟ್ ಹೊತ್ತಿನಲ್ಲೇ ನವೀಕರಣ ಯಾಕೆ ಎಂಬ ಪ್ರಶ್ನೆ ಎದ್ದಿದೆ. ಸಿದ್ದರಾಮಯ್ಯ ಅವರು ಸಿಎಂ ಆಗಿ ಅಧಿಕಾರ ಸ್ವೀಕರಿಸಿದ ಬಳಿಕ ನವೀಕರಣ ಮಾಡಿಸಿದ್ದರು. ಆದರೆ ಈಗ ಮತ್ತೆ ನವೀಕರಣಕ್ಕೆ ಕೈಹಾಕುವ ಮೂಲಕ ಸಿಎಂ ಕುರ್ಚಿ ಬಿಡಲ್ಲ ಎಂದು ವಿರೋಧಿಗಳಿಗೆ ಸಂದೇಶ ರವಾನಿಸಿದ್ದಾರೆ ಎನ್ನಲಾಗಿದೆ.



ನನ್ನ ಮತ್ತು ಸಿದ್ದರಾಮಯ್ಯ ಮಧ್ಯೆ ಒಪ್ಪಂದ ನಡೆದಿದೆ. ನಾವಿಬ್ಬರೂ ಮಾತನಾಡಿಕೊಂಡಿದ್ದೇವೆ. ಅದರಂತೆ ನಡೆದುಕೊಳ್ಳುತ್ತೇವೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿಕೆ ನೀಡಿದ್ದರು. ಸಿದ್ದರಾಮಯ್ಯ ಅವರ ಈ ನಿರ್ಧಾರದಿಂದ ಡಿಸಿಎಂ ಡಿಕೆಶಿ ಟೀಂ ಗೊಂದಲಗೊಂಡಿದೆ. ನವೀಕರಣ ರಾಜಕಾರಣದ ಮೂಲಕ ಸಿದ್ದರಾಮಯ್ಯನವರು ಸದ್ಯಕ್ಕೆ ನಾನು ಯಾವುದಕ್ಕೂ ಜಗ್ಗುವುದಿಲ್ಲ ಎಂಬ ಸಂದೇಶ ಕಳುಹಿಸಿದಾರೆಯೇ ಎಂಬ ಪ್ರಶ್ನೆ ಎದ್ದಿದೆ.

## ಏ.1ರಿಂದ ಆರ್‌ಒಎನ್ 95 ಪೆಟ್ರೋಲ್ ಕಡ್ಡಾಯ

ನವದೆಹಲಿ: ದೇಶದಲ್ಲಿರುವ ಎಲ್ಲಾ ಪೆಟ್ರೋಲ್ ಬಂಕ್‌ಗಳು ಏಪ್ರಿಲ್ 1ರಿಂದ ಕಡ್ಡಾಯವಾಗಿ ಶೇ. 20ರಷ್ಟು ಎಥೆನಾಲ್ ಮಿಶ್ರಿತ ಪೆಟ್ರೋಲ್ ಮಾರಾಟ ಮಾಡಬೇಕೆಂದು ಕೇಂದ್ರ ಸರ್ಕಾರ ಆದೇಶಿಸಿದೆ.

ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಬ್ಯೂರೋ ಆಫ್ ಇಂಡಿಯನ್ ಸ್ಟ್ಯಾಂಡರ್ಡ್ಸ್ ವಿಶೇಷಣಗಳ ಪ್ರಕಾರ ಮತ್ತು ರಿಸರ್ಚ್ ಆಕ್ಟೇನ್ ನಂಬರ್ 95ನ್ನು ಹೊಂದಿರುವ ಶೇ.20 ಎಥೆನಾಲ್ ಮಿಶ್ರಿತ ಪೆಟ್ರೋಲ್ ಮಾರಾಟ ಮಾಡಬೇಕೆಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ಅಧಿಸೂಚನೆಯಲ್ಲಿ ಉಲ್ಲೇಖಿಸಿದೆ.




ಎಥೆನಾಲ್ ಮಿಶ್ರಿತ ಇಂಧನಗಳಲ್ಲಿ ಎಂಜಿನ್ ಕಾರ್ಯಕ್ಷಮತೆ ಅಳೆಯುವ ಪ್ರಮುಖ ಮಾನದಂಡವಾಗಿದೆ. ಎಥೆನಾಲ್ ಅನ್ನು ಪೆಟ್ರೋಲ್‌ಗೆ ಮಿಶ್ರಣ ಮಾಡಿದರೆ ಭವಿಷ್ಯದಲ್ಲಿ ಎಂಜಿನ್‌ಗೆ ಸಮಸ್ಯೆಯಾಗುವ ಸಾಧ್ಯತೆಯಿದೆ. ಈ ಕಾರಣಕ್ಕೆ ಕೇಂದ್ರ ಸರ್ಕಾರ ಆರ್‌ಒಎನ್ 95 ಹೊಂದಿರುವ 20 ಎಥೆನಾಲ್ ಮಿಶ್ರಿತ ಪೆಟ್ರೋಲ್ ಮಾರಾಟಕ್ಕೆ ಅನುಮತಿ ನೀಡಿದೆ.

ಸಾಮಾನ್ಯವಾಗಿ ಆಧುನಿಕ ಉನ್ನತ-ಕಾರ್ಯಕ್ಷಮತೆಯ ಎಂಜಿನ್‌ಗಳಿಗೆ ಆರ್‌ಒಎನ್ 95 ಪೆಟ್ರೋಲ್ ಅನ್ನು ಉತ್ತವುವೆಂದು ಪರಿಗಣಿಸಲಾಗುತ್ತದೆ. ಇದು ಹೆಚ್ಚು ಸ್ವಚ್ಛವಾಗಿ ಉರಿಯುತ್ತವೆ, ಇಂಗಾಲದ ಮಾನಾಕ್ಸೈಡ್ ಮತ್ತು ಹೈಡ್ರೋಕಾರ್ಬನ್ ಹೊರಸೂಸುವಿಕೆಯನ್ನು 30-44 ವರೆಗೆ ಕಡಿಮೆ ಮಾಡುತ್ತದೆ. ಆದರೆ ಹಳೆಯ ವಾಹನಗಳಿಗೆ ಇದು ಸಮಸ್ಯೆ ಆಗಲಿದೆ ಎನ್ನಲಾಗಿದೆ.

## ಕೋತಿ ರಕ್ಷಿಸಲು ಹೋಗಿ ಆಟೋ ಚಾಲಕ ಸಾವು

ತುಮಕೂರು: ರಸ್ತೆ ದಾಟುತ್ತಿದ್ದ ಕೋತಿ ರಕ್ಷಿಸಲು ಹೋಗಿ ಆಟೋ ಚಾಲಕ ಮೃತಪಟ್ಟ ಘಟನೆ ಕೊರಟಗೆರೆ ಜಂಪೇನಹಳ್ಳಿ ಬಳಿ ನಡೆದಿದೆ. ಸೋಂಪುರ ನಿವಾಸಿ ಮಹೇಂದ್ರಕುಮಾರ್ ಸಾವನಪ್ಪಿದ ಚಾಲಕ.



ಕೊರಟಗೆರೆಯಿಂದ ತುಮಕೂರು ಕಡೆಗೆ ಹೋಗುತ್ತಿದ್ದಾಗ ಜಂಪೇನಹಳ್ಳಿ ಬಳಿ ಕೋತಿಯೊಂದು ಅಡ್ಡ ಬಂದಿದೆ. ಕೋತಿಯನ್ನು ಬಚಾವ್ ಮಾಡಲು ಹೋಗಿ ಚಾಲಕ ಮಹೇಂದ್ರ ಕುಮಾರ್ ಸಡನ್ ಬ್ರೇಕ್ ಹಾಕಿದ ಪರಿಣಾಮ ಆಟೋ ಪಲ್ಟಿಯಾಗಿದೆ. ಪಲ್ಟಿಯಾದ ಆಟೋಗೆ ತುಮಕೂರು ಕಡೆಯಿಂದ ಬರುತ್ತಿದ್ದ ಇನ್ನೋವಾ ಕಾರು ಡಿಕ್ಕಿ ಹೊಡೆದಿದೆ. ಕಾರು ಡಿಕ್ಕಿಯಿಂದ ಗಂಭೀರವಾಗಿ ಗಾಯಗೊಂಡಿದ್ದ ಚಾಲಕ ಮಹೇಂದ್ರ ಸಾವನಪ್ಪಿದ್ದಾರೆ.

## ಲೋಕಾಯುಕ್ತ ಬಲೆಗೆ ಬಿದ್ದ ಗ್ರಾಮ ಲೆಕ್ಕಾಧಿಕಾರಿ

ಹಾವೇರಿ: ಖಾತೆ ಬದಲಾವಣೆಗಾಗಿ 8,500 ರೂ. ಲಂಚ ಪಡೆಯುತ್ತಿದ್ದ ವೇಳೆ ಗ್ರಾಮ ಲೆಕ್ಕಾಧಿಕಾರಿ ಲೋಕಾಯುಕ್ತ ಬಲೆಗೆ ಬಿದ್ದಿರುವ ಘಟನೆ ಹಾವೇರಿ ತಾಲೂಕಿನ ನೆಗಳೂರು ಗ್ರಾಮದ ಕಚೇರಿಯಲ್ಲಿ ನಡೆದಿದೆ. ಪಕ್ಕೀರೇಶ ಬಾರ್ಕಿ ಲೋಕಾಯುಕ್ತ ಬಲೆಗೆ ಬಿದ್ದ ಗ್ರಾಮ ಲೆಕ್ಕಾಧಿಕಾರಿ.



ಪಕ್ಕೀರೇಶ ಬಸಾಪುರ ಗ್ರಾಮದ ರೈತ ಕರಿಯಲ್ಲಪ್ಪ ಕೆಸರಳ್ಳಿ ಎಂಬವರ ಬಳಿ ಖಾತೆ ಬದಲಾವಣೆಗೆ 63,000 ರೂ.ಗೆ ಬೇಡಿಕೆ ಇಟ್ಟಿದ್ದ. 30 ಸಾವಿರ ಹಣ ಮೊದಲೇ ಕೊಟ್ಟಿದ್ದರು. ಇಂದು 8,500 ರೂ. ಲಂಚ ಸ್ವೀಕಾರ ಮಾಡುತ್ತಿದ್ದ ವೇಳೆ ಲೋಕಾಯುಕ್ತ ಅಧಿಕಾರಗಳ ಕೈಗೆ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿದ್ದಾನೆ. ಆರೋಪಿಯನ್ನು ಬಂಧಿಸಿರುವ ಲೋಕಾಯುಕ್ತ ಪೊಲೀಸರು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

## ತುಮಕೂರು-ದಾವಣಗೆರೆ ರೈಲು: ಮಾರ್ಗ 2027ಕ್ಕೆ ಪೂರ್ಣ: ಸೋಮಣ್ಣ

ಚಿತ್ರದುರ್ಗ: ದಾವಣಗೆರೆ- ಚಿತ್ರದುರ್ಗ- ತುಮಕೂರು ನೇರ ರೈಲು ಮಾರ್ಗ ಕಾಮಗಾರಿ 2027ರ ಡಿಸೆಂಬರ್ ನಲ್ಲಿ ಪೂರ್ಣಗೊಳ್ಳಲಿದೆ ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದರು.



ತಾಲ್ಲೂಕಿನ ಹಂಪನೂರು ಗ್ರಾಮದ ಬಳಿ ಗುರುವಾರ ಕಾಮಗಾರಿ ಪರಿಶೀಲಿಸಿ ಮಾತನಾಡಿದರು. ದಾವಣಗೆರೆ- ತುಮಕೂರು ಮಾರ್ಗ ಮಾತ್ರವಲ್ಲದೇ ಗದಗ-ವಾಡಿ, ರಾಯದುರ್ಗ- ತುಮಕೂರು ಮಾರ್ಗವನ್ನೂ 2027ರ ವೇಳೆಗೆ ಪೂರ್ಣಗೊಳಿಸಲಾಗುವುದು ಎಂದರು. ದಾವಣಗೆರೆಯಿಂದ ಹೆಬ್ಬಾಳ ಗ್ರಾಮದವರೆಗೆ ಈಗಾಗಲೇ ಕಾಮಗಾರಿ ಪೂರ್ಣಗೊಂಡಿದೆ. ಮೊಟಾರ್ ಟ್ರಾಲಿಯಲ್ಲಿ ಸಂಚರಿಸಿ ಪರಿಶೀಲಿಸಿದ್ದೇನೆ. ಚಿತ್ರದುರ್ಗದ ಬಳಿ ಕಾಮಗಾರಿ ಕೊಂಚ ತಡವಾಗಿದೆ. 6 ತಿಂಗಳೊಳಗೆ ಕಾಮಗಾರಿ ಮುಗಿಸುವಂತೆ ಅಧಿಕಾರಿಗಳಿಗೆ, ಗುತ್ತಿಗೆದಾರರಿಗೆ ಸೂಚಿಸಿದ್ದೇನೆ ಎಂದು ಸಚಿವರು ತಿಳಿಸಿದರು.

### ಅಧಿಕಾರ ಹಸ್ತಾಂತರ: ಅನಾಹುತಕ್ಕೂ ಮುನ್ನ

# ಹೈ ಗೊಂದಲ ಬಗೆಹರಿಸಲಿ-ತನ್ವೀರ್

ಮೈಸೂರು: ಮುಖ್ಯಮಂತ್ರಿ ಬದಲಾವಣೆ ವಿಚಾರದಲ್ಲಿ ಉಂಟಾಗಿರುವ ಗೊಂದಲವನ್ನು ಅನಾಹುತ ಆಗುವುದಕ್ಕೂ ಮೊದಲೇ ಕಾಂಗ್ರೆಸ್ ಹೈಕಮಾಂಡ್ ಬಗೆಹರಿಸಬೇಕು. ಈ ಬಗ್ಗೆ ವರಿಷ್ಠರು ದೆಹಲಿಗೆ ಬರುವಂತೆ ಕರೆದಿದ್ದಾರೆ ಹೋಗಿ ವಾಸ್ತವ ಹೇಳುತ್ತೇನೆಂದು ಶಾಸಕ ತನ್ವೀರ್ ಸೇಠ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರ?ರಿಯಿಸಿದ ಅವರು, ಕಾಂಗ್ರೆಸ್ ಪಕ್ಷದಲ್ಲಿ ಎಲ್ಲವೂ ಸರಿಯಿಲ್ಲ. ಅಧಿಕಾರ ಹಸ್ತಾಂತರ ವಿಚಾರದಲ್ಲಿ ರಾಜ್ಯದಲ್ಲಿ ಗೊಂದಲವಿದೆ. ಗೊಂದಲ ನಿವಾರಿಸುವಂತೆ ಸುರ್ಜೇವಾಲ ಅವರಿಗೆ ಮನವಿ ಮಾಡಿದ್ದೇನೆ ಎಂದು ಹೇಳಿದರು.

ರಾಜಕೀಯವಾಗಿ ರಾಜ್ಯದಲ್ಲಿ ಯಾವುದೂ ಸರಿಯಿಲ್ಲ. ರಾಜ್ಯದಲ್ಲಿ ಸಾಕಷ್ಟು ವ್ಯತ್ಯಾಸಗಳಿವೆ. ಹೀಗೆ ಆದರೆ ಬೇರೆ ಪಕ್ಷಕ್ಕೂ ನಮ್ಮ ಪಕ್ಷಕ್ಕೂ ಏನು ವ್ಯತ್ಯಾಸ. ಪಕ್ಷದ ಕಾರ್ಯಾಧ್ಯಕ್ಷನಾಗಿ ನನಗೂ ಜವಾಬ್ದಾರಿಗಳಿವೆ. ಬೆಂಕಿ ನನ್ನ ಕೈಲಿದ್ದಾಗ ಮಾತು ಕೇಳುತ್ತದೆ. ಆದರೆ, ಕೈ ತಪ್ಪಿದರೆ ಮಾತು ಕೇಳದ ಪರಿಸ್ಥಿತಿ ಆಗುತ್ತದೆ. ಅಂತಹ ಸನ್ನಿವೇಶ



ನಮ್ಮಲ್ಲಿ ಸೃಷ್ಟಿ ಆಗಬಾರದು. ಅಧಿಕಾರ ಹಂಚಿಕೆ ಚರ್ಚೆ ಆಗಿದ್ದರೆ ಬಹಿರಂಗವಾಗಲಿ. ಒಂದು ವೇಳೆ ಸಿಎಂ ಸ್ಥಾನ ನೀಡುವುದಿದ್ದರೆ ನೀಡಲಿ. ಸಿದ್ದರಾಮಯ್ಯ ಅವರೇ ಮುಂದುವರಿಯುವುದಿದ್ದರೆ ಅದನ್ನೇ ಅಂತಿಮವಾಗಿ ಸ್ಪಷ್ಟಪಡಿಸಲಿ. ಈ ಕುರಿತು ಮಾತನಾಡಲು ಸುರ್ಜೇವಾಲ ದೆಹಲಿಗೆ ಬರಲು ತಿಳಿಸಿದ್ದಾರೆ ಎಂದು ಅವರು ತಿಳಿಸಿದರು. ಒಂದು ಬಾರಿ ಗೆದ್ದವರು ಸಚಿವರಾಗಬೇಕಾದರೆ, ಆರನೇ ಬಾರಿ ಗೆದ್ದವನು ಸಿಎಂ ಆಗಬಾರದೇ? ರಾಜ್ಯದಲ್ಲಿ ಹಾವು ಮುಂಗುಸಿ ಆಟ ನಡೆಯುತ್ತಿದೆ.

ಪುಟ 2ಕ್ಕೆ

## ಗೊಂದಲಕ್ಕೆ ಉತ್ತರ ಕೊಡಲಿ: ಪರಮೇಶ್ವರ್

ಬೆಂಗಳೂರು: ಮುಖ್ಯಮಂತ್ರಿ ಬದಲಾವಣೆ ವಿಚಾರದಲ್ಲಿ ಉಂಟಾಗಿರುವ ಗೊಂದಲಕ್ಕೆ ಕಾಂಗ್ರೆಸ್ ಹೈಕಮಾಂಡ್ ಉತ್ತರ ಕೊಡಬೇಕು ಎಂದು ಗೃಹ ಸಚಿವ ಜಿ.ಪರಮೇಶ್ವರ್ ಅಭಿಪ್ರಾಯಪಟ್ಟರು.



ನಗರದಲ್ಲಿ ಗುರುವಾರ ಮಾಧ್ಯಮಗಳ ಜೊತೆ ಮಾತನಾಡಿ ಪರಮೇಶ್ವರ್ ಸಿಎಂ ಆಗಬೇಕು ಎಂಬ ಅಭಿಮಾನಿಗಳು ಕೂಗಿನ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಸಿಎಂ ಕುರ್ಚಿ ವಿಚಾರದಲ್ಲಿ ಸಾಕಷ್ಟು ಗೊಂದಲಗಳು ಆಗಿದೆ. ನಾನು ಅದಕ್ಕೆ ಹೆಚ್ಚು ಗೊಂದಲ ಮಾಡೋದಕ್ಕೆ ತಯಾರಿಲ್ಲ. ಅನೇಕರು ನನ್ನನ್ನ ಪ್ರಶ್ನೆ ಮಾಡ್ತಾರೆ. ಅಭಿಮಾನಿಗಳು ಅಲ್ಲಲ್ಲಿ ಸಿಎಂ ಅಗಬೇಕು ಅಂತ ಅವರ ಭಾವನೆ

ಪುಟ 2ಕ್ಕೆ


# ನ್ಯಾಯಾಂಗದಲ್ಲಿ ಭ್ರಷ್ಟಾಚಾರ: ಪಠ್ಯ ರದ್ದು

## ಆದೇಶ ಧಿಕ್ಕರಿಸಿದರೆ ಗಂಭೀರ ಕ್ರಮ: ಸುಪ್ರೀಂ ಕೋರ್ಟ್ ಎಚ್ಚರಿಕೆ

ನವದೆಹಲಿ: ನ್ಯಾಯಾಂಗದಲ್ಲಿ ಭ್ರಷ್ಟಾಚಾರದ ಕುರಿತು ಪಾಠ ಇರುವ ರಾಷ್ಟ್ರೀಯ ಶೈಕ್ಷಣಿಕ ಸಂಶೋಧನೆ ಮತ್ತು ತರಬೇತಿ ಮಂಡಳಿ (ಎನ್‌ಸಿಇಆರ್‌ಟಿ) ಪ್ರಕಟಿಸಿದ 8ನೇ ತರಗತಿಯ ಪಠ್ಯಪುಸ್ತಕವನ್ನು ಸುಪ್ರೀಂ ಕೋರ್ಟ್ ಗುರುವಾರ ಸಂಪೂರ್ಣ ಬ್ಯಾನ್ ಮಾಡಿದೆ. ಎಲ್ಲಾ ಪ್ರತಿಗಳನ್ನು ವಶಪಡಿಸಿಕೊಳ್ಳಲು ಮತ್ತು ಅದರ ಡಿಜಿಟಲ್ ಆವೃತ್ತಿಗಳನ್ನು ತಕ್ಷಣವೇ ತೆಗೆದುಹಾಕುವಂತೆ ಆದೇಶಿಸಿದೆ.

ಯಾವುದೇ ರೂಪದಲ್ಲಿ ನಿರ್ದೇಶನಗಳನ್ನು ಧಿಕ್ಕರಿಸಿದರೆ ಗಂಭೀರ ಕ್ರಮ ಎದುರಿಸಬೇಕಾದೀತು ಎಂದು ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅಧಿಕಾರಿಗಳಿಗೆ ಸುಪ್ರೀಂ ಕೋರ್ಟ್ ಎಚ್ಚರಿಕೆ ನೀಡಿದೆ. ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ಸುಪ್ರೀಂ ಕೋರ್ಟ್‌ನ ತ್ರಿಸದಸ್ಯ ಪೀಠ ಎನ್‌ಸಿಇಆರ್‌ಟಿ ನಿರ್ದೇಶಕರು ಮತ್ತು ಶಾಲಾ ಶಿಕ್ಷಣ ಕಾರ್ಯದರ್ಶಿಗೆ ಶೋಕಾಸ್ ನೋಟಿಸ್ ಜಾರಿ ಮಾಡಿದೆ.






ಅಧ್ಯಾಯ ಸೇರ್ಪಡೆಗೆ ಕಾರಣರಾದವರ ವಿರುದ್ಧ ಏಕೆ ಕ್ರಮ ತೆಗೆದುಕೊಂಡಿಲ್ಲ ಎಂಬ ಬಗ್ಗೆ ವಿವರಿಸುವಂತೆ ಕೇಳಿದೆ.

ಯಾರು ಜವಾಬ್ದಾರರು ಎಂಬುದನ್ನು ಕಂಡುಹಿಡಿಯುವುದು ನನ್ನ ಕರ್ತವ್ಯ. ತಪಿತಸ್ಥರು ಹೊಣೆ ಹೊರಬೇಕು ಎಂದು ವಿಚಾರಣೆ ಸಂದರ್ಭದಲ್ಲಿ ಮುಖ್ಯ ನ್ಯಾಯಮೂರ್ತಿ ಹೇಳಿದರು. ಅಧ್ಯಾಯದ ವಿಷಯಗಳ ಬಗ್ಗೆ ಮತ್ತು ನ್ಯಾಯಾಂಗದ ಸಾರ್ವಜನಿಕ ಗ್ರಹಿಕೆಯ ಮೇಲೆ ಅದರ ಸಂಭಾವ್ಯ ಪ್ರಭಾವದ ಬಗ್ಗೆ ಅವರು ಗಂಭೀರ ಕಾಳಜಿಯನ್ನು ವ್ಯಕ್ತಪಡಿಸಿದರು. ನ್ಯಾಯಾಂಗವನ್ನು ದೂಷಿಸುವ ಮತ್ತು ಸಾಂಸ್ಥಿಕ ಅಧಿಕಾರವನ್ನು ದುರ್ಬಲಗೊಳಿಸುವ ಗುರಿಯನ್ನು ಹೊಂದಿರುವ ಯೋಜಿತ ಪಿತೂರಿಯಂತೆ ತೋರುತ್ತಿದೆ ಎಂದು ಅವರು ಹೇಳಿದರು.

ಸಾಂಸ್ಥಿಕ ಅಧಿಕಾರವನ್ನು ಹಾಳುಮಾಡಲು ಮತ್ತು ನ್ಯಾಯಾಂಗದ ಘನತೆಗೆ ಚ್ಯುತಿ ತರಲು ಮಾಡಿದ ಪ್ರಯತ್ನದಂತೆ ತೋರುತ್ತಿದೆ. ಇದನ್ನು ತಡೆಯದೆ ಹೋದರೆ, ಸಾರ್ವಜನಿಕರು ಹಾಗೂ ಯುವ ಜನತೆಯ ಮನಸ್ಸಿನಲ್ಲಿ ನ್ಯಾಯಾಂಗ ಕಚೇರಿಯ ಪಾವಿತ್ರ?ಯತೆಯನ್ನು ಕಳೆದುಕೊಳ್ಳುತ್ತದೆ ಎಂದು ಮುಖ್ಯ ನ್ಯಾಯಾಧೀಶರು ಅಭಿಪ್ರಾಯಪಟ್ಟಿದ್ದಾರೆ.

ಪುಟ 2ಕ್ಕೆ

# ವಿವಿಧ ಬೇಡಿಕೆ ಈಡೇರಿಸುವಂತೆ ಆಟೋ ಚಾಲಕರ ಆಗ್ರಹ




ಮೈಸೂರು: ಖಾಸಗಿ ವಾಣಿಜ್ಯ ವಾಹನಗಳ ಎಫ್.ಸಿ. ಶುಲ್ಕ ಹೆಚ್ಚಿಸಿರುವ ದರವನ್ನು ರದ್ದು ಮಾಡುವುದು ಸೇರಿ ತಮ್ಮ ಹಲವು ಬೇಡಿಕೆ ಈಡೇರಿಸುವಂತೆ ಸಂಯುಕ್ತ ಕರ್ನಾಟಕ ಚಾಲಕರ ಮತ್ತು ಮಾಲೀಕರ ಕ್ಷೇಮಾಬಿವೃದ್ಧಿ ಸಂಘ ನಗರದಿಂದ ಬೆಂಗಳೂರಿಗೆ ರ್ಯಾಲಿ ಹೊರಟರು.

ನಗರದ ಕೋಟೆ ಆಂಜನೇಯ ಸ್ವಾಮಿ ದೇವಾಲಯದಿಂದ ಮೆರವಣಿಗೆ ಹೊರಟ ಆಟೋ ಚಾಲಕರು ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿದರು. ನಗರದಲ್ಲಿ ಅತಿಯಾಗಿ ಹೆಚ್ಚುತ್ತಿರುವ ಆಟೋರಿಕ್ಷಗಳ ರಹದಾರಿ ತಡೆಯಬೇಕು. ನಮ್ಮ ಆಟೋರಿಕ್ಷಾ ಚಾಲಕರಿಗೆ ಮತ್ತು ವಾಣಿಜ್ಯ ಬಸ್, ಟ್ಯಾಕ್ಸಿ, ಕ್ಯಾಬ್‌ಗಳ ಚಾಲಕ, ನಿರ್ವಾಹಕ ಮತ್ತು ದುರಸ್ತಿ ಮಾಡುವ ಎಲ್ಲಾ ರೀತಿಯ ಕಾರ್ಮಿಕರಿಗೆ ಉಚಿತ ಸೂರು ನೀಡಬೇಕು.

ನಮ್ಮ ಆಟೋರಿಕ್ಷಾ ಚಾಲಕರಿಗೆ ನೆರೆ ರಾಜ್ಯ ಆಂಧ್ರಪ್ರದೇಶ ಸರ್ಕಾರದ ಮಾದರಿಯಲ್ಲಿ ವಾರ್ಷಿಕ ಸೇವಾ ಯೋಜನೆಯಡಿಯಲ್ಲಿ, ತಲಾ 15,000 ಪ್ರತಿ ವರ್ಷ ನೀಡುವುದು. ಆಟೋ ಚಾಲಕರಿಗೆ ಕಾರ್ಮಿಕ ಇಲಾಖೆಯ ವತಿಯಿಂದ ಪಿಂಚಣಿ ಮತ್ತು ಇಎಸ್ ಐ ಸವಲತ್ತು ನೀಡಬೇಕು. ಮೈಸೂರು ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಎಫ್.ಸಿ. ಶುಲ್ಕ ಹಲವು ತಿಂಗಳುಗಳಿಂದ ಬರದೆ ಇರುವ ರಶೀತಿಗಳ ಬಗ್ಗೆ ಸರ್ಕಾರ ಗಮನ ಹರಿಸಿ ಆದೇಶಿಸಬೇಕು. ಕಾನೂನು ಬಾಹಿರವಾಗಿ ಚಲಾಯಿಸುತ್ತಿರುವ ಬೈಕ್ ಟ್ಯಾಕ್ಸಿ ಸೇವೆಯನ್ನು ಕೂಡಲೇ ರದ್ದುಗೊಳಿಸಬೇಕೆಂಬ ಒತ್ತಾಯಗಳನ್ನು ಮಾಡಿದರು.

# ರಾಷ್ಟ್ರಮಟ್ಟದ ಕರೋಕೆ ಗಾಯನ ಭಿತ್ತಿಪತ್ರ ಬಿಡುಗಡೆ



ಮೈಸೂರು: ಸರ್ವಕಲ ಸೇವಾ ಟ್ರಸ್ಟ್ ಪಂಚಾಯತ್ ಗ್ರಾಮೀಣ ಅಭಿವೃದ್ಧಿ ರೈತರ ಸೇವಾ ಸಮಿತಿ ಸಹಯೋಗದೊಂದಿಗೆ ನಡೆಯಲಿರುವ ರಾಷ್ಟ್ರಮಟ್ಟದ ಸಪ್ತಸ್ವರ ಕರೋಕೆ ಗಾಯನ ಸೀಸನ್ – 3 ಪೋಸ್ಟರ್ ಅನ್ನು ಯೋಗ ನರಸಿಂಹಸ್ವಾಮಿ ದೇವಸ್ಥಾನದ ಆಡಳಿತ ಅಧಿಕಾರಿ ಶ್ರೀನಿವಾಸನ್ ಬಿಡುಗಡೆ ಮಾಡಿದರು.

ಬಳಿಕ ಮಾತನಾಡಿದ ಅವರು, ಕಾರ್ಯಕ್ರಮ ಯಶಸ್ವಿಯಾಗಿ ನಡೆಯಲಿ ಎಂದು ಹಾರೈಸಿದರಲ್ಲದೇ, ಯೋಗ ನರಸಿಂಹ ಸ್ವಾಮಿಯ ಆಶೀರ್ವಾದ ಕಾರ್ಯಕ್ರಮಕ್ಕೆ ಸದಾ ಇರಲಿ. ಹೊಸ ಗಾಯಕ, ಗಾಯಕಿಯರು ಆದಷ್ಟು ಬೇಗ ನೊಂದಣಿ ಮಾಡಿಕೊಂಡು ವೇದಿಕೆಯನ್ನು ನಿಮ್ಮದಾಗಿಸಿಕೊಂಡು ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಯಲಿ ಎಂದು ಆಶೀರ್ವದಿಸಿದರು. ಕಾರ್ಯಕ್ರಮದಲ್ಲಿ ದನಪಾಲ್ ಜೆ ಗೌಡ, ಸಮೃದ್ಧಿ ಟ್ರಸ್ಟ್ ಅಧ್ಯಕ್ಷ ಸಹನಗೌಡ, ಪಿಜಿಆರ್ ಎಸ್‌ಎಸ್ ಖಜಾಂಚಿ ಮಂಜುಳಾ, ಸಮರ್ಪಣೆ ಸೇವಾ ಟ್ರಸ್ಟ್ ಅಧ್ಯಕ್ಷ ಲಯನ್ ಕುಮಾರ್ ಭಾಗವಹಿಸಿದ್ದರು. ಕಾರ್ಯಕ್ರಮದ ವಿಶೇಷ ಅತಿಥಿಗಳಾಗಿ ಮಂಗಳೂರು ಮೀನಾನಾಥ್, ಶಾಸಕ ಜಿ.ಟಿ ದೇವೇಗೌಡ , ಕರ್ನಾಟಕ ಸುಗಮ ಸಂಗೀತ ಪರಿಷತ್ ಮೈಸೂರು ಅಧ್ಯಕ್ಷ ಡಾ.ನಾಗರಾಜು ವಿ ಬೈರಿ, ಚಂದ್ರಶೇಖರ್‌ರಾವ್, ಟ್ರಸ್ಟ್ ಮುಂಬೈ ಅಧ್ಯಕ್ಷ ಶ್ರೀದೇವಿ ರಾವ್ ಅನೇಕರು ಉಪಸ್ಥಿತರಿರುವರು. ಆಯೋಜಕರಾಗಿ ಸರ್ವಕಲಾ ಸೇವಾ ಟ್ರಸ್ಟ್ ಅಧ್ಯಕ್ಷ ನೀಮ ಲೋಬೊ ಮತ್ತು ಕಾರ್ಯದರ್ಶಿ ಜೋಸೆಫ್ ಲೋಬೊ ಹಾಗೂ ಪಿಜಿಆರ್ ಎಸ್ ಎಸ್ ಪಂಚಾಯತ್ ಗ್ರಾಮೀಣ ಅಭಿವೃದ್ಧಿ ರೈತರ ಸೇವಾ ಸಮಿತಿಯ ಅಧ್ಯಕ್ಷ ಯಾದವ್ ಹರೀಶ್, ರಾಜ್ಯ ಸಂಚಾಲಕ ರಕ್ತದಾನಿ ಮಂಜು ಇರಲಿದ್ದು, ಹೆಚ್ಚಿನ ಮಾಹಿತಿ ಹಾಗೂ ನೋಂದಣಿಗಾಗಿ ದೂ.9902175996, 9740176567ಅನ್ನು ಸಂಪರ್ಕಿಸಬಹುದಾಗಿದೆ.

# ಯುವ ವಿನಿಮಯಕ್ಕೆ ಮೈಸೂರಿಗೆ ಆಗಮಿಸಿದ ಯುವಕರು

ಮೈಸೂರು: ಕೇಂದ್ರ ಸರ್ಕಾರದ ಯುವ ವ್ಯವಹಾರಗಳು ಮತ್ತು ಕ್ರೀಡಾಸಚಿವಾಲಯ ಹಾಗೂ ರಾಜ್ಯ ಸರ್ಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಸಹಯೋಗದಲ್ಲಿ ಮೈ ಭಾರತ್ ಹೆಸರಿನ ಅಂತರ್ ಜಿಲ್ಲಾ ಯುವ ವಿನಿಮಯ ಕಾರ್ಯಕ್ರಮ 37 ಮಂದಿ ನೊಂದಣಿ ಮಾಡಿಕೊಂಡರು.

ಜಿಲ್ಲಾ ಯುವಜನ ಮತ್ತು ಕ್ರೀಡಾ ಇಲಾಖೆಯಿಂದ ಎಲ್ಲರನ್ನೂ ಸ್ವಾಗತಿಸಿದರು. ನಗರದ ಟಿ.ಕೆ.ಲೇಔಟ್‌ನ ಸರ್ಕಾರಿ ಯೂತ್ ಹಾಸ್ಟೆಲ್ ನಲ್ಲಿ ಆರಂಭಗೊಂಡಿರುವ ಕಾರ್ಯಕ್ರಮದಲ್ಲಿ 37 ಜಿಲ್ಲೆಯ ವಿವಿಧ ವಿದ್ಯಾರ್ಥಿ ಸಮೂಹ ಐದು ದಿನಗಳ ಕಾರ್ಯಕ್ರಮಕ್ಕೆ ಆಗಮಿಸಿದರು. ಮಾ.2ರವರೆಗೆ ಕಾರ್ಯಕ್ರಮ ನಡೆಯಲಿದ್ದು, ಕಾರ್ಯಕ್ರಮದ ಮೊದಲ ದಿನ ನೊಂದಣಿ ಹಾಗೂ ಕಿಟ್ ವಿತರಣಾ ಕಾರ್ಯಕ್ರಮ ನಡೆಯಿತು.

ಬಳಿಕ ಕೆ.ಪುಟ್ಟಸ್ವಾಮಿ ಪ್ರಥಮದರ್ಜೆ ಕಾಲೇಜು ಸಹಾಯಕ ಪ್ರಾಧ್ಯಾಪಕ ಡಾ.ಬಿ.ಟಿ.ರಘು ಮೈಸೂರು ಸಂಸ್ಕೃತಿ ಮತ್ತು ಇತಿಹಾಸದ ಬಗ್ಗೆ ಮಾತನಾಡಿದರು. ಚಿಕ್ಕಮಗಳೂರು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಸಂಚಾಲಕ ಇಮ್ರಾನ್ ಅಹಮದ್ ಬೇಗ್ ವಿಕಸಿತ ಭಾರತ 2047ರಲ್ಲಿ ಯುವಕರಪಾತ್ರದ ಬಗ್ಗೆ ಮಾತನಾಡಿದರು. ಮೈ ಬಾರತ್ ಕೇಂದ್ರ ಮೈಸೂರು ಅಧಿಕಾರಿ ಪಿ.ಅಕಿಲ್, ಕರಾಟೆ ತರಬೇತುದಾರ ಗುರುಪ್ರಸಾದ್, ಕಾರ್ಯಕ್ರಮ ಸಂಚಾಲಕರಾದ ಪಿ.ಎಲ್.ಅಮಿತ್ ಕುಮಾರ್, ಸಿ.ಚಿರಂಜೀವಿ, ಮಹದೇವ್ ಇನ್ನಿತರು ಉಪಸ್ಥಿತರಿದ್ದರು.




# ಜಿಲ್ಲೆಯಲ್ಲಿ 7453 ವಿದ್ಯಾರ್ಥಿಗಳ ನೋಂದಣಿ

## ಫೆ.28ರಂದು ದ್ವಿತೀಯ ಪಿಯೂ ಪರೀಕ್ಷೆ ಆರಂಭ | 14 ಪರೀಕ್ಷಾ ಕೇಂದ್ರಗಳ ಸ್ಥಾಪನೆ

ರಾಮನಗರ: ಇದೇ ಫೆ.28ರ ಶನಿವಾರದಿಂದ 2025–26ನೇ ಸಾಲಿನ ದ್ವಿತೀಯ ಪಿಯೂಸಿ ಪರೀಕ್ಷೆಗಳು ಆರಂಭವಾಗಲಿದ್ದು, ಜಿಲ್ಲೆಯಲ್ಲಿ 7453 ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಳ್ಳಲಿದ್ದಾರೆ. ಜಿಲ್ಲೆಯಲ್ಲಿ 14 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷಾ ಸಿದ್ದತೆಗಳು ಪ್ರಗತಿಯಲ್ಲಿವೆ ಎಂದು ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ಉಪನಿರ್ದೇಶಕ ಎಂ.ಮರಿಸ್ವಾಮಿ ತಿಳಿಸಿದ್ದಾರೆ. ಈ ಸಂಬಂಧ ಲಿಖಿತ ಮಾಹಿತಿಯನ್ನು ಅವರು ಬಿಡುಗಡೆ ಮಾಡಿದ್ದಾರೆ.

### 7453 ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಣಿ

2863 ಯುವಕರು ಹಾಗೂ 4590 ಯುವತಿಯರು ಒಟ್ಟು 7453 ವಿದ್ಯಾರ್ಥಿಗಳು ದ್ವಿತೀಯ ಪಿಯೂ ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದಾರೆ. ಈ ಪೈಕಿ ನಗರ ಪ್ರದೇಶದಿಂದ 1149 ಯುವಕರು, 1350 ಯುವತಿಯರು ಒಟ್ಟು 2499 ವಿದ್ಯಾರ್ಥಿಗಳು ಹಾಗೂ ಗ್ರಾಮಾಂತರ ಪ್ರದೇಶಗಳಿಂದ 1714 ಯುವಕರು, 3240 ಯುವತಿಯರು ಒಟ್ಟು 4954 ವಿದ್ಯಾರ್ಥಿಗಳಿದ್ದಾರೆ.

- ▶▶ ಮಾರ್ಚ್ 17ರವರೆಗೆ ಪರೀಕ್ಷೆ
- ▶▶ ಮೊದಲ ಹತ್ತು ಸ್ಥಾನಗಳಲ್ಲಿ ಜಿಲ್ಲೆಯ ಫಲಿತಾಂಶ
- ▶▶ ಉಪನಿರ್ದೇಶಕರ ವಿಶ್ವಾಸ

ಇದಲ್ಲದೆ 868 ಮಂದಿ ಪುನರಾವರ್ತಿತ ಅಭ್ಯರ್ಥಿಗಳು, 185 ಮಂದಿ ಖಾಸಗಿ ಅಭ್ಯರ್ಥಿಗಳು ಹಾಗೂ ಫಲಿತಾಂಶ ಉನ್ನತೀಕರಣದ ಓರ್ವ ಅಭ್ಯರ್ಥಿ ಪರೀಕ್ಷೆ ಬರೆಯಲಿದ್ದಾರೆ.

### ಸಂಯೋಜನೆವಾರು ವಿದ್ಯಾರ್ಥಿಗಳ ಸಂಖ್ಯೆ

ಕಲಾ ವಿಭಾಗದಿಂದ 544 ವಿದ್ಯಾರ್ಥಿಗಳು, 954 ವಿದ್ಯಾರ್ಥಿನಿಯರು ಒಟ್ಟು 1498 ಮಂದಿ, ವಾಣಿಜ್ಯ ವಿಭಾಗದ 1382 ವಿದ್ಯಾರ್ಥಿಗಳು, 2015 ವಿದ್ಯಾರ್ಥಿನಿಯರು ಒಟ್ಟು 3397 ಮಂದಿ, ವಿಜ್ಞಾನ ವಿಭಾಗದಿಂದ 937 ವಿದ್ಯಾರ್ಥಿಗಳು, 1621 ವಿದ್ಯಾರ್ಥಿನಿಯರು ಪರೀಕ್ಷೆ ಎದುರಿಸುವರು.

### ಪರೀಕ್ಷಾ ಕೇಂದ್ರಗಳು ಎಲ್ಲೆಲ್ಲಿ?

ರಾಮನಗರ ತಾಲ್ಲೂಕಿನಲ್ಲಿ 5, ಚನ್ನಪಟ್ಟಣ ತಾಲ್ಲೂಕಿನಲ್ಲಿ 3, ಕನಕಪುರ ತಾಲ್ಲೂಕಿನಲ್ಲಿ 3, ಮಾಗಡಿ ತಾಲ್ಲೂಕಿನಲ್ಲಿ 2 ಹಾಗೂ ಹಾರೋಹಳ್ಳಿಯಲ್ಲಿ 1



ಪರೀಕ್ಷಾ ಕೇಂದ್ರಗಳು ಸ್ಥಾಪನೆಯಾಗಲಿವೆ.

ರಾಮನಗರದಲ್ಲಿ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು, ಶಾಂತಿನಿಕೇತನ ಪದವಿ ಪೂರ್ವ ಕಾಲೇಜು, ಬಿಎಎಸ್‌ವಿಪಿ ಮಹಿಳಾ ಪದವಿ ಪೂರ್ವ ಕಾಲೇಜು, ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಹಾಗೂ ಬಿಡದಿಯಲ್ಲಿ ಬಸವೇಶ್ವರ ಸರ್ಕಾರಿ ಪದವಿ ಪೂರ್ವ ಕಾಲೇಜು ಹೀಗೆ 5 ಪರೀಕ್ಷಾ ಕೇಂದ್ರಗಳು ಸ್ಥಾಪನೆಯಾಗುತ್ತಿವೆ.

ಚನ್ನಪಟ್ಟಣದಲ್ಲಿ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು, ಬಾಲಕಿಯರ ಸರ್ಕಾರಿ ಪದವಿತ ಪೂರ್ವ ಕಾಲೇಜು, ಸಾರ್ವಜನಿಕ ಪದವಿ ಪೂರ್ವ ಕಾಲೇಜುಗಳಲ್ಲಿ ಪರೀಕ್ಷಾ ಕೇಂದ್ರಗಳು ಇರಲಿವೆ. ಮಾಗಡಿಯಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜು, ಮಾಗಡಿ ತಾಲ್ಲೂಕಿನ ಕುದೂರು ಹೋಬಳಿಯ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಪರೀಕ್ಷಾ ಕೇಂದ್ರಗಳು ಇರಲಿವೆ. ಕನಕಪುರ ತಾಲ್ಲೂಕಿನಲ್ಲಿ ರೂರಲ್ ಪದವಿ ಪೂರ್ವ ಕಾಲೇಜು, ಸರ್ಕಾರಿ ಪದವಿ ಪೂರ್ವ ಕಾಲೇಜು (ಮಾಜಿ ಪುರಸಭೆ) ಹಾಗೂ ಆದಿತ್ಯಾಸ್ ಪದವಿ ಪೂರ್ವ ಕಾಲೇಜುಗಳಲ್ಲಿ ಪರೀಕ್ಷಾ ಕೇಂದ್ರಗಳಿವೆ. ಹಾರೋಹಳ್ಳಿಯ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ದ್ವಿತೀಯ ಪಿಯೂ ಪರೀಕ್ಷಾ ಕೇಂದ್ರ ಸ್ಥಾಪನೆಯಾಗಲಿದೆ.

### ಮುಂಜಾಗ್ರತಾ ಕ್ರಮಗಳೇನು?

ಫೆ.28ರಿಂದ ಮಾರ್ಚ್ 17ರವರೆಗೆ ನಡೆಯುವ ದ್ವಿತೀಯ ಪಿಯೂ ಪರೀಕ್ಷೆಗಳು ಸಿಸಿಟಿವಿ ಕಣ್ಗಾವಲಿನಲ್ಲಿ ನಡೆಯಲಿದೆ. ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ವೆಬ್ ಕ್ಯಾಟಿಂಗ್ ವ್ಯವಸ್ಥೆಇದೆ. ಅಂಚೆ ಕಚೇರಿ, ಪೊಲೀಸ್ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತೆಯುರು ಪರೀಕ್ಷೆ ನಡೆಸಲು ಸಹಕಾರ ನೀಡಲು ತಿಳಿಸಲಾಗಿದೆ. ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯ ವ್ಯವಸ್ಥೆಗೆ ಸಮಸ್ಯೆ ಇಲ್ಲ. ಒಟ್ಟಾರೆ ಶುದ್ದ ವಾತಾವರಣವನ್ನು ಕಲ್ಪಿಸಲಾಗುತ್ತಿದೆ ಎಂದು ಉಪನಿರ್ದೇಶಕರು ತಿಳಿಸಿದ್ದಾಋಎ.

### ಯಾವ್ಯಾವ ದಿನ ಯಾವ ಪರೀಕ್ಷೆ?

**ಫೆ 28ರಂದು ಕನ್ನಡ, ಅರೇಬಿಕ್, ಮಾರ್ಚ್ 2ರಂದು ಭೂಗೋಳ ಶಾಸ್ತ್ರ, ಸಂಖ್ಯಾಶಾಸ್ತ್ರ, ಮನಃಶಾಸ್ತ್ರ, ಮಾರ್ಚ್ 3ರಂದು ಇಂಗ್ಲೀಷ್, ಮಾ.4ರಂದು ತಮಿಳು, ತೆಲುಗು, ಮಲಯಾಳಂ, ಮರಾಠಿ, ಉರ್ದು, ಸಂಸ್ಕೃತ, ಫ್ರೆಂಚ್ ಭಾಷೆಗಳ ಪರೀಕ್ಷೆಗಳು. ಮಾ.5ರಂದು ಇತಿಹಾಸ, ಮಾ.6ರಂದು ಭೌತಶಾಸ್ತ್ರ, ಮಾ.7ರಂದು ಐಚ್ಚಿಕ ಕನ್ನಡ, ವ್ಯವಹಾರ ಅಧ್ಯಯನ, ಭೂಗರ್ಭಶಾಸ್ತ್ರ, ಮಾ.9ರಂದು ರಾಸಾಯಣ ಶಾಸ್ತ್ರ, ಶಿಕ್ಷಣ ಶಾಸ್ತ್ರ ಮೂಲಗಣಿತ, ಮಾ.10ರಂದು ಅರ್ಥಶಾಸ್ತ್ರ, ಮಾ.11ರಂದು ತರ್ಕ ಶಾಸ್ತ್ರ, ವಿದ್ಯುನ್ಮಾನ ಶಾಸ್ತ್ರ, ಗೃಹವಿಜ್ಞಾನ, ಮಾ.12 ಹಿಂದಿ, ಮಾ.13 ರಾಜ್ಯಶಾಸ್ತ್ರ, ಮಾ.14 ಲೆಕ್ಕಶಾಸ್ತ್ರ, ಗಣಿತ, ಮಾ.16 ಸಮಾಜ ಶಾಸ್ತ್ರ, ಜೀವ ಶಾಸ್ತ್ರ, ಗಣಕ ವಿಜ್ಞಾನ, ಮಾ.17ರಂದು ಹಿಂದೂಸ್ತಾನಿ ಸಂಗೀತ, ಎಲೆಕ್ಟ್ರಾನಿಕ್ಸ್ ಮತ್ತು ಯಂತ್ರಾಂಶ, ಉಡುಪುಗಳ ತಯಾರಿಕೆ ಮತ್ತು ಗೃಹಪಯೋಗಿ ವಸ್ತುಗಳು, ಮಾಹಿತಿ ತಂತ್ರಜ್ಞಾನ, ರೀಟೈಲ್ ವಿಷಯಗಳ ಪರೀಕ್ಷೆ**

### ಪರೀಕ್ಷೆಗೆ ಪೂರ್ವ ತಯಾರಿ ಹೇಗಿತ್ತು?

ದ್ವಿತೀಯ ಪಿಯೂ ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸುವ ನಿಟ್ಟಿನಲ್ಲಿ ಇಲಾಖೆವತಿಯಿಂದಲೇ ಎರಡು ಪೂರ್ವ ಸಿದ್ದತಾ ಪರೀಕ್ಷೆಗಳನ್ನು ನಡೆಸಲಾಗಿತ್ತು. ರಾಜ್ಯಾದ್ಯಂತ ಏಕ ರೂಪದ ಪ್ರಶ್ನೆ ಪತ್ರಿಕೆಗಳನ್ನು ನೀಡಿ ಪರೀಕ್ಷೆ ನಡೆಸಿದ್ದು ವಿಶೇಷ. ಇಲಾಖೆ ಮೂರು ಮಾದರಿ ಪ್ರಶ್ನೆಪತ್ರಿಕೆಗಳನ್ನು ಬಿಡುಗಡೆ ಮಾಡಿದೆ. ಈ ಮೂರು ಮಾದರಿ ಪ್ರಾಶ್ನೆಪತ್ರಿಕೆಗಳನ್ನು ಓದಿಕೊಂಡರೆ ಕನಿ?ಟ ಅಂಕಗಳನ್ನು ಪಡೆದು ಉತ್ತೀರ್ಣರಾಗಲು ಸಹಕಾರಿಯಾಗಿದೆ. ಈ ವ?ರ್ ಪ್ರತಿ ವಿ?ಯಕ್ಕೆ ಒಂದೇ ನೀಲನಕ್ಷೆಯನ್ನು ಬಿಡುಗಡೆ ಮಾಡಿದೆ. ಇದು ವಿದ್ಯಾರ್ಥಿಗಳು ಹೆಚ್ಚಿನ ಅಂಕಗಳನ್ನು ಪಡೆದು ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಲು ನೆರವಾಗಲಿದೆ. ಡಿಸೆಂಬರ್ 2025ಕ್ಕೆ ಪಠ್ಯಕ್ರಮವನ್ನು ಪೂರ್ಣವಾಗಿ ಬೋಧನೆ ಮಾಡಿ ಪುನರಾವರ್ತನೆ ಮಾಡಲಾಗಿದೆ. ಇಲಾಖೆ ಬಿಡುಗಡೆ ಮಾಡಿರುವ ಮೂರು ಮಾದರಿ ಪ್ರಶ್ನೆಪತ್ರಿಕೆಗಳನ್ನು ವಿದ್ಯಾರ್ಥಿಗಳಿಗೆ ಕೊಟ್ಟು ಅಭ್ಯಾಸ ಮಾಡಿಸಲಾಗಿದೆ. ಉಪನ್ಯಾಸಕರಿಗೆ ತರಬೇತಿ ಕಾರ್ಯಾಗಾರಗಳನ್ನು ನಡೆಸಿ ಫಲಿತಾಂಶ ಹೆಚ್ಚಿಸಲು ಪ್ರಯತ್ನಿಸಲಾಗಿದೆ. ಈ ವ?ರ್ ರಾಜ್ಯ ಮಟ್ಟದ ಫಲಿತಾಂಶ ಪಟ್ಟಿಯಲ್ಲಿ ಹತ್ತು ಸ್ಥಾನಗಳ ಒಳಗೆ ಬೆಂಗಳೂರು ದಕ್ಷಿಣ ಜಿಲ್ಲೆ ಬರುವ ಸಾಧ್ಯತೆ ಇದೆ ಎಂದು ಉಪನಿರ್ದೇಶಕ ಎಂ.ಮರಿಸ್ವಾಮಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

### ವಿದ್ಯಾರ್ಥಿಗಳೇ ಸಮಯ ಗಮನಿಸಿ

**ಫೆ.28ರಿಂದ ಆರಂಭವಾಗುವ ದ್ವಿತೀಯ ಪಿಯೂ ಪರೀಕ್ಷೆಯ ಎಲ್ಲಾ ದಿನಗಳು ಮೊದಲ ಬೆಲ್ ಬೆಳಿಗ್ಗೆ 9.40ಕ್ಕೆ ಮೊಳಗಲಿದೆ. ಮೊದಲ ಬೆಲ್ ವೇಳೆ ವಿದ್ಯಾರ್ಥಿಗಳನ್ನು ಪರೀಕ್ಷಾ ಕೊಠಡಿಯೊಳಗೆ ಪ್ರವೇಶಿಸಲು ಅವಕಾಶ ನೀಡಲಾಗುವುದು. ಬೆಳಿಗ್ಗೆ 10 ಗಂಟೆಗೆ ಪ್ರಶ್ನೆ ಪತ್ರಿಕೆಗಳನ್ನು ವಿತರಿಸಲಾಗುತ್ತದೆ. 10.10ಕ್ಕೆ ಉತ್ತರ ಪತ್ರಿಕೆಗಳನ್ನು ನೀಡಲಾಗುವುದು. 10.15ಕ್ಕೆ ನಾಲ್ಕನೇ ಬೆಲ್ ನಂತರ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ಆರಂಭಿಸಬೇಕು. ಬೆಳಿಗ್ಗೆ 10.30ಕ್ಕೆ ಐದನೇ ಬೆಲ್ ಮೊಳಗಲಿದ್ದು, ಮೊದಲ ಅರ್ಧ ಗಂಟೆ ಮುಕ್ತಾಯವಾಗಿರುವುದನ್ನು ಸೂಚಿಸುತ್ತದೆ. ಈ ಬೆಲ್ ನಂತರ ವಿದ್ಯಾರ್ಥಿಗಳು ಕೊಠಡಿ ಪ್ರವೇಶಿಸುವುದನ್ನು ನಿಷೇಧಿಸಲಾಗಿಸಿದೆ.**

### ಜನಪ್ರತಿನಿಧಿಗಳಿಂದ ಶುಭ ಹಾರೈಕೆ

ದ್ವಿತೀಯ ಪಿಯೂ ವಿದ್ಯಾರ್ಥಿಗಳಿಗೆ ಜಿಲ್ಲೆಯ ನಾಲ್ಕೂ ಕ್ಷೇತ್ರಗಳ ಶಾಸಕರುಗಳಾದ ಡಿ.ಕೆ.ಶಿವಕುಮಾರ್, ಇಕ್ಬಾಲ್ ಹುಸೇನ್, ಸಿ.ಪಿ.ಯೋಗೇಶ್ವರ, ಎಚ್.ಸಿ.ಬಾಲಕೃಷ್ಣ, ಸಂಸದ ಡಾ.ಸಿ.ಎನ್.ಮಂಜುನಾಥ್, ಮಾಜಿ ಸಂಸದ ಡಿ.ಕೆ.ಸುರೇಶ್, ಎಂ.ಎಲ್.ಸಿಗಳು, ರಾಮನಗರ ನಗರಸಭಾಧ್ಯಕ್ಷ ಕೆ.ಶೇಷಾದ್ರಿ, ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎ.ಬಿ.ಚೇತನ್ ಕುಮಾರ್, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜಿ.ಎನ್.ನಟರಾಜ್ ಸೇರಿದಂತೆ ಜನಪ್ರತಿನಿಧಿಗಳು ಶುಭ ಹಾರೈಸಿದ್ದಾರೆ.

# ಕೋಚನಹಳ್ಳಿ ರೈತರಿಂದ ಅಹೋರಾತ್ರಿ ಹೋರಾಟ



ಮೈಸೂರು: ಚಿತ್ರನಗರಿ ಹಾಗೂ ಕೈಗಾರಿಕೆಗೆ ಭೂಮಿ ವಶಪಡಿಸಿಕೊಂಡು ರೈತರಿಗೆ ಪರಿಹಾರ ನೀಡುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘದವತಿಯಿಂದ ನಗರದ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಅಹೋರಾತ್ರಿ ಹೋರಾಟಕ್ಕೆ ಮುಂದಾಗಿದ್ದಾರೆ.

ಚಿತ್ರನಗರಿಗೆ ಭೂಮಿ ಕಳೆದುಕೊಂಡ ಇಮ್ಮಾವು ಹಾಗೂ ಗಾಲ್ಫ್ ಕಂಪನಿ ಗೆ ಭೂಮಿ ಕಳೆದುಕೊಂಡ ಕೋಚನಹಳ್ಳಿಐ 400ಕ್ಕೂ ರೈತರಿಗೆ ಉದ್ಯೋಗ ಮತ್ತು ನಿವೇಶನ ನೀಡಬೇಕೆಂದು ಆಗ್ರಹಿಸಿದ್ದಾರೆ. 2008ರಲ್ಲಿ ಅಂದಿನ ಜಿಲ್ಲಾಧಿಕಾರಿಗಳು ಸಾಗುವಳಿಯಲ್ಲಿದ್ದ 400ಕ್ಕೂ ಹೆಚ್ಚು ರೈತರಿಗೆ 18ಕೋಟಿ ಹಣವನ್ನು ಪರಿಹಾರ ರೂಪದಲ್ಲಿ ನೀಡುವಂತೆ ಆದೇಶಿಸಿದ್ದರು. ಆದರೆ, ಪರಿಹಾರ ವಿತರಣೆಯಲ್ಲಿ ನೈಜ ರೈತರಿಗೆ ನೀಡದೇ ವಂಚಿಸಲಾಗಿದೆ. ಹೀಗಾಗಿ ಈಬಗ್ಗೆ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಶಿಕ್ಷೆ ಆಗಬೇಕೆಂದು ಒತ್ತಾಯಿಸಿದರು.

ನಿಜವಾಗಿಯೂ ಭೂಮಿ ಕಳೆದುಕೊಂಡ ರೈತರಿಗೆ ಪರಿಹಾರ ನೀಡಬೇಕು. ಅರ್ಹರಿಗೆ ಪರಿಹಾರ ಹಾಗೂ ಉದ್ಯೋಗ ನೀಡುವವರೆಗೂ ಅಹೋರಾತ್ರಿ ಧರಣಿ ನಡೆಸುವುದಾಗಿ ರೈತ ಮುಖಂಡರು ತಿಳಿಸಿದರು. ಪ್ರತಿಭಟನೆಗೂ ಮುನ್ನ ಸಿದ್ಧಾರ್ಥ ನಗರದ ಬುದ್ಧ ಪುತ್ಥಳಿಯಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಬೈಕ್ ರ್ಯಾಲಿ ನಡೆಸಿದರು.

ರಾಜ್ಯ ವಿಭಾಗೀಯ ಸಂಘಟನಾ ಕಾರ್ಯದರ್ಶಿ ಹೊಸಕೋಟೆ ಬಸವರಾಜ್, ಮೈಸೂರು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಿ.ಮರಂಕಯ್ಯ, ಜಿಲ್ಲಾ ಯುವ ಘಟಕದ ಅಧ್ಯಕ್ಷ ಪ್ರೇಮ್ ರಾಜ್, ತಾಲೂಕು ಯುವ ಘಟಕದ ಅಧ್ಯಕ್ಷ ಮೈದನಹಳ್ಳಿ ಮಹೇಶ್, ಸಂತೋಷ್, ರಾಜಣ್ಣ, ಬಸವರಾಜು, ಪ್ರಕಾಶ್, ರಂಗಸ್ವಾಮಿ, ಕಾಳೇಗೌಡ, ರಂಗಪ್ಪ, ಬಸಪ್ಪ, ರಾಜಮ್ಮ, ಮಂಜಮ್ಮ, ವೆಂಕಟಮ್ಮ, ಕಳಸಮ್ಮ, ಮಾಸ್ತಮ್ಮ, ಲಕ್ಷ್ಮಿ ಉಪಸ್ಥಿತರಿದ್ದರು.

# ನಾಳೆ ಗೀತಗಾಯನ




ಮೈಸೂರು: ಹಳೇ ಬೇರು ಹೊಸ ಚಿಗುರು ಕಲ್ಚರಲ್ ಟ್ರಸ್ಟ್ ವತಿಯಿಂದ 12ನೇ ವರ್ಷದ ವಾರ್ಷಿಕೋತ್ಸವ ಸಮಾರಂಭ ಮತ್ತು ಹಳೇ ಕನ್ನಡ,ಹಿಂದಿ ಹಾಡುಗಳ ಗೀತಗಾಯಕ ಕಾರ್ಯಕ್ರಮವನ್ನು ಫೆ.28ರಂದು ಆಯೋಜಿಸಲಾಗಿದೆ ಎಂದು ಟ್ರಸ್ಟ್ ಅಧ್ಯಕ್ಷ ರೇವಣ್ಣ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ನಾದಬ್ರಹ್ಮ ಸಂಗೀತ ಸಭಾದಲ್ಲಿ ಅಂದು ಸಂಜೆ 5ಗಂಟೆಗೆ ನಡೆಯಲಿರುವ ಕಾರ್ಯಕ್ರಮವನ್ನು ಯೋಗ ನರಸಿಂಹ ದೇವಸ್ಥಾನ ಸಂಸ್ಥಾಪಕ ಡಾ.ಭಾಷ್ಯಂ ಸ್ವಾಮೀಜಿ ಉದ್ಘಾಟಿಸುವರು. ರಾಜ್ಯ ಸುಗಮ ಸಂಗೀತ ಪರಿಷತ್ತಿನ ಜಿಲ್ಲಾಧ್ಯಕ್ಷ ನಾಗರಾಜ್ ಭೈರಿ, ನೆಹರು ಯುವ ಕೇಂದ್ರದ ನಿವೃತ್ತ ನಿರ್ದೇಶಕ ನಟರಾಜ್, ಸಮಾಜಸೇವಕ ಕೆ.ರಘುರಾಂ ವಾಜಪೇಯಿ, ವಕೀಲರಾದ ಎಚ್.ಹರೀಶ್ ಹೆಗ್ಡೆ, ಎಚ್.ಎನ್.ವೆಂಕಟೇಶ್, ಎಸ್.ಜೆ.ಮಧ್ವರಾಜ್, ಕಸಾಪ ಜಿಲ್ಲಾಧ್ಯಕ್ಷ ಮಡ್ಡೀಕೆರೆ ಗೋಪಾಲ್ ಭಾಗವಹಿಸುವರು. ಎಂಡಿಎ ಮಾಜಿ ಅಧ್ಯಕ್ಷ ಎಚ್.ವಿ. ರಾಜೀವ್ ಅಧ್ಯಕ್ಷತೆ ವಹಿಸುವರು ಎಂದು ಹೇಳಿದರು. ಟ್ರಸ್ಟಿಗಳಾದ ಶ್ರೀಕಂಠರಾವ್, ರೇಣುಕಾ ಆರಾಧ್ಯ, ಗೋಪಾಲ್ ಇದ್ದರು.

**ಸುತ್ತೂರು ಶ್ರೀ ಕರೆ**

# ಮನೆಗಳಲ್ಲೇ ಸುಸ್ಥಿರತೆ ಕಾಪಾಡುವುದು ಮುಖ್ಯ




ಮೈಸೂರು:ಮನೆಗಳಲ್ಲಿ ಸುಸ್ಥಿರತೆಯನ್ನು ರೂಢಿಸಿಕೊಳ್ಳುತ್ತಾ ಬಂದರೆ ಸಮಾಜ ನೈಸರ್ಗಿಕವಾಗಿ ಸುಸ್ಥಿತರತೆಯೆಡೆಗೆ ಸಾಗುತ್ತದೆ ಎಂದು ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಹೇಳಿದರು.

ಮಾನಸಗಂಗೋತ್ರಿಯ ಸೆನೆಟ್ ಭವನದಲ್ಲಿ ಮೈಸೂರು ವಿಶ್ವವಿದ್ಯಾನಿಲುಂ ಆಹಾರ ವಿಜ್ಞಾನ ಮತ್ತು ಪೌಷ್ಟಿಕಾಂಶ ವಿಭಾಗ ಮತ್ತು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲುಂ ಆಹಾರ ವಿಜ್ಞಾನ ಮತ್ತು ಪೌಷ್ಟಿಕಾಂಶ ವಿಭಾಗಗಳ ಸಹಯೋಗದಲ್ಲಿ ಹಮ್ಮಿಕೊಂಡಿರುವ ಎರಡು ದಿನಗಳ ರಾಷ್ಟ್ರೀ?ಂ ಗೃಹ ವಿಜ್ಞಾನ ಸಮ್ಮೇಳನ–2026 'ಸ್ಥಿತಿಸ್ಥಾಪಕ ಮತ್ತು ಪರಿವರ್ತಕ ಗೃಹ ವಿಜ್ಞಾನಕ್ಕಾಗಿ ಪರಿಸರ ವಿಧಾನಗಳು' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಾನವೀಯತೆ ಪ್ರಸ್ತುತದಲ್ಲಿ ಅಡ್ಡದಾರಿ ಹಿಡಿಯುತ್ತಿರುವ ಕಾಲಘಟ್ಟದಲ್ಲಿ ಪರಿಸರದ ಅವನತಿ, ಹವಾಮಾನ ವೈಪರಿತ್ಯ, ನೈಸರ್ಗಿಕ ಸಂಪನ್ಮೂಲಗಳ ಕೊರತೆಯ ಸಂದರ್ಭದಲ್ಲಿ ವಿಜ್ಞಾನ ಮತ್ತು ಪ್ರಯೋಗಗಳ ಜ್ಞಾನದ ವ್ಯಾಪ್ತಿಯು ಪಠ್ಯಗಳ ಮೂಲಕ ವಿಕಸನವಾಗಬೇಕು ಎಂದರು.

ಜ್ಞಾನ ಬುದ್ಧಿವಂತಿಕೆಯಾಗಿ ಬದಲಾಗಿ, ಬುದ್ಧಿವಂತಿಕೆ ಕ್ರಿಯಾತ್ಮಕವಾಗುತ್ತದೆ. ಇದರಿಂದಾಗಿ ಸಮಾಜಕ್ಕೆ ಸಾಕಷ್ಟು ಅನುಕೂಲಗಳನ್ನು ದೊರೆಯುತ್ತದೆ. ಆಹಾರ ವಿಜ್ಞಾನ ಈ ಎಲ್ಲ ಬದಲಾವಣೆಯಲ್ಲಿ ಹೆಚ್ಚು ಪರಿಣಾಮಾತ್ಮಕ ಪಾತ್ರವಹಿಸಿದೆ. ವಿಜ್ಞಾನದ ಮೂಲಕ ಎಲ್ಲವನ್ನು ಕೂಡಿಸುವ, ಪುನರುಜ್ಜೀವನಗೊಳಿಸುವ ಕೆಲಸ ಮಾಡುತ್ತದೆ ಎಂದರು.

ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಮಾತನಾಡಿ, ಸುಸ್ಥಿರತೆ ಎಂಬುದು ಒಂದು ಆಂಕೆಂಲ್ಲ, ಅದು ಒಂದು ಜವಾಬ್ದಾರಿ. ಸ್ಥಿತಿಸ್ಥಾಪಕತ್ವವು ಪರಿಕಲ್ಪನೆಯೂ ಸಹ ಅವಶ್ಯಕವಾಗಿದೆ. ಬದಲಾವಣೆಯೆಡೆಗೆ ಪ್ರಪಂಚವು ನಿತ್ಯವು ಸಾಗುತ್ತಿದ್ದು, ಶಿಕ್ಷಣ ಸಂಸ್ಥೆಗಳು ನಮ್ಮ ಸಮುದಾ?ಂಗಳಲ್ಲಿ ದೈನಂದಿನ ಜೀವನದಲ್ಲಿ ನಡೆ??ಂತ್ತಿರುವ ಪ್ರಕ್ರಿ??ಂ?ಂಗಿರಬೇಕು ಎಂದರು.

ಸಮಾಜದ ಬದಲಾವಣೆಯಲ್ಲಿ ಗೃಹ ವಿಜ್ಞಾನವು ವಿಶಿಷ್ಟ ಮತ್ತು ಶಕ್ತಿ??ಂತವಾಗಿ ಸ್ಥಾನವನ್ನು ಪಡೆದುಕೊಂಡಿದೆ. ಇದು ವಿಜ್ಞಾನ ಮತ್ತು ಸವಾಜವನ್ನು ಬೆಸೆಯುತ್ತದೆ ಎಂದು ತಿಳಿಸಿದರು. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲುದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ, ಕೊಡಗು ವಿವಿ ಕುಲಪತಿ ಪ್ರೊ.ಅಶೋಕ್ ಎಸ್. ಅಲೂರು, ಕೊ?ಂಮತ್ತೂರಿನ ಅವಿನಾಶಿಲಿಂಗಂ ಗೃಹ ವಿಜ್ಞಾನ ಮತ್ತು ಉನ್ನತ ಶಿಕ್ಷಣ ಸಂಸ್ಥೆ ಮಹಿಳಾ ವಿವಿ ಕುಲಪತಿ ಪ್ರೊ.ವಿ.ಭಾರತಿ ಹರಿಶಂಕರ್, ಸಿಎಫ್‌ಟಿಆರ್‌ಐ ವಾಜಿ ನಿರ್ದೇಶಕ ಡಾ.ವಿ.ಪ್ರಕಾಶ್, ಮೈಸೂರು ವಿವಿ ಕುಲಸಚಿವೆ ಎಂ.ಕೆ.ಸವಿತಾ, ಮುಕ್ತ ವಿವಿ ಕುಲಸಚಿವ ಪ್ರೊ.ಎಸ್.ಕೆ. ನವೀನ್‌ಕುಮಾರ್, ಮೈಸೂರು ವಿವಿ ಆಹಾರ ವಿಜ್ಞಾನ ಮತ್ತು ಪೌಷ್ಟಿಕಾಂಶ ವಿಭಾಗದ ಮುಖ್ಯಸ್ಥೆ ಪ್ರೊ.ಎಂ.ಕಮಲ, ಮುಕ್ತ ವಿವಿ ಆಹಾರ ವಿಜ್ಞಾನ ಮತ್ತು ಪೌಷ್ಟಿಕಾಂಶ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ.ಸಿ.ಅನಿತಾ ಉಪಸ್ಥಿತರಿದ್ದರು.

# ಮುಕ್ತ ವಿವಿ ಭ್ರಷ್ಟಾಚಾರ ಪ್ರಕರಣ: ವಿಚಾರಣೆ

ಮೈಸೂರು: ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಬಿ.ಎ.ಪಾಟೀಲ ನೇತೃತ್ವದ ಏಕಸದಸ್ಯ ಸತ್ಯಶೋಧನಾ ಸಮಿತಿ ವಿಚಾರಣೆ ನಡೆಸಿತು.



ವಿಶ್ವವಿದ್ಯಾಲಯದ ಹಿಂದಿನ ಕುಲಸಚಿವರ (ಆಡಳಿತ) ವಿರುದ್ಧ ಲಂಚ, ಭ್ರಷ್ಟಾಚಾರದ ಆರೋಪವಿದೆ. ಪ್ರಕರಣದ ತನಿಖೆಗೆ ಸರ್ಕಾರ ಬಿ.ಎ.ಪಾಟೀಲ ಅಧ್ಯಕ್ಷತೆಯಲ್ಲಿ ಸಮಿತಿ ನೇಮಿಸಿದೆ. ವಾರದ ಹಿಂದಷ್ಟೇ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಿ ಅಗತ್ಯ ಮಾಹಿತಿ ಸಂಗ್ರಹಿಸಿದ್ದ ಸಮಿತಿಯು ವಿಚಾರಣೆಗೆ ಬರುವಂತೆ ಹಲವರಿಗೆ ನೋಟಿಸ್ ನೀಡಿತ್ತು. ಅವರನ್ನು ವಿಚಾರಣೆಗೆ ಒಳಪಡಿಸಿತು. 175 ಪುಟಕ್ಕೂ ಹೆಚ್ಚಿನ ದಾಖಲೆಗಳನ್ನು ಪರಿಶೀಲಿಸಿತು. ಮಾಜಿ ಕುಲಸಚಿವ ಪ್ರೊ. ಕೆ.ಬಿ.ಪ್ರವೀಣ, ಕಾಯಂ ಅಧ್ಯಾಪಕರ ಸಂಘದ ಕಾರ್ಯದರ್ಶಿ ಜಗದೀಶ್ ಬಾಬು, ಬೋಧಕರೇತರ ಸಂಘದ ಕಾರ್ಯದರ್ಶಿ ಪ್ರದೀಪ್‌ಗಿರಿ, ಗೀತಾ, ಪುಟ್ಟಸ್ವಾಮಿ ಅವರಿಂದ ಮಾಹಿತಿ ಸಂಗ್ರಹಿಸಲಾ ಯಿತು. ಹಿಂದಿನ ಕುಲಸಚಿವರ ವಿರುದ್ಧ ಲಂಚ, ಭ್ರಷ್ಟಾಚಾರದ ಆರೋಪ ಹೊರಿಸಿ ವಿಶ್ವವಿದ್ಯಾಲಯದ ಸಿಬ್ಬಂದಿ ಕಳೆದ ವರ್ಷ ಪ್ರತಿಭಟನೆ ನಡೆಸಿದ್ದರು. ಈ ಬಗ್ಗೆ ವಿಧಾನಸಭೆಯಲ್ಲೂ ಚರ್ಚೆಯಾಗಿತ್ತು. ಸರ್ಕಾರ ರಾಜ್ಯ ಉನ್ನತ ಶಿಕ್ಷಣ ಮಂಡಳಿ (ಕೆಎಸ್‌ಎಚ್‌ಇಸಿ) ಉಪಾಧ್ಯಕ್ಷ ಪ್ರೊ.ಎಸ್.ಆರ್.ನಿರಂಜನ ಅವರಿಂದ ತನಿಖೆ ಮಾಡಿಸಿತ್ತು. ಪ್ರಾಥಮಿಕ ತನಿಖಾ ವರದಿಯಲ್ಲಿ ಅಕ್ರಮಗಳು ನಡೆದಿರುವುದು ಕಂಡುಬಂದ ಕಾರಣಕ್ಕೆ, ವರದಿಯ ಶಿಫಾರಸಿನಂತೆ ಕರಾಮುವಿವಿ ಕಾಯ್ದೆ 1992ರ ಸೆಕ್ಷನ್ 8ರ ಅಡಿಯಲ್ಲಿ ತನಿಖೆಗೆ ರಾಜ್ಯಪಾಲರು ಅನುಮತಿ ನೀಡಿದ್ದರು. ನಂತರ ಸರ್ಕಾರ ಏಕ ಸದಸ್ಯ ಸಮಿತಿ ರಚಿಸಿದೆ.

**ಮೊದಲ ಪುಟದಿಂದ**

# ಮೋದಿಗೆ 10 ಕೋಟಿ ಫಾಲೋವರ್ಸ್

ಲೂಯಿಜ್ ಇನಾಸಿಯೋ 1.44 ಕೋಟಿ, ಟರ್ಕಿ ಅಧ್ಯಕ್ಷ ರೆಸೆಪ್ ತಯ್ಯಿಪ್ ಎರ್ಡೋಗನ್ 1.16 ಕೋಟಿ, ಅರ್ಜೆಂಟೀನಾ ಅಧ್ಯಕ್ಷ ಜೇವಿಯರ್ 64 ಲಕ್ಷ ಫಾಲೋವರ್ಸ್ಗಳನ್ನ ಹೊಂದಿದ್ದು, ವಿಶ್ವನಾಯಕರ ಪಟ್ಟಿಯಲ್ಲಿ ಭಾರತದ ಪ್ರಧಾನಿಗಳಿಂತ ಹಿಂದಿದ್ದಾರೆ.

# ಗೊಂದಲಕ್ಕೆ ಉತ್ತರ ಕೊಡಲಿ

ವ್ಯಕ್ತಪಡಿಸುತ್ತಾರೆ. ಇದಕ್ಕೆಲ್ಲಾ ಉತ್ತರ ಹೈಕಮಾಂಡ್ ಕೊಡಬೇಕು ಎಂದು ಒತ್ತಾಯಿಸಿದರು. ನಾನು ಯಾವತ್ತು ಲಾಬಿ ಮಾಡೋಕೆ ಹೋಗಿಲ್ಲ. ನಾನು ದೆಹಲಿಗೆ ಹೋಗಿಲ್ಲ. ನಾನು ಯಾವ ಲಾಬಿ ಮಾಡ್ತಿಲ್ಲ. ಅಲ್ಲಿ ಇಲ್ಲಿ ನಮ್ಮ ಹಿತೈಷಿಗಳು ಅಭಿಪ್ರಾಯ ಹೇಳಿರಬಹುದು ಎಂದು ಹೇಳಿದರು.

# ಗೊಂದಲ ಬಗೆಹರಿಸಲಿ–ತನ್ವೀರ್

ಇದರಿಂದ ಪಕ್ಷಕ್ಕೆ ಡ್ಯಾಮೇಜ್ ಆಗಲಿದೆ. ಈ ಕುರಿತು ವರಿಷ್ಠರ ಗಮನಕ್ಕೆ ತಂದಿರುವೆ ಎಂದರು.

ಗ್ಯಾರೆಂಟಿ ಯೋಜನೆಗಳಿಂದ ಯಾವುದೇ ತೊಂದರೆ ಆಗಿಲ್ಲ. ಗ್ಯಾರೆಂಟಿ ಯೋಜನೆಗಳ ಅನುಷ್ಠಾನಗೊಳಿಸುವಲ್ಲಿ ವಿಫಲರಾಗಿದ್ದೇವೆ. ಸೂಕ್ತ ವ್ಯಕ್ತಿಗಳಿಗೆ, ಸರಿಯಾದ ಕುಟುಂಬಗಳಿಗೆ ಗ್ಯಾರಂಟಿಗಳು ಸಿಗುತ್ತಿಲ್ಲ. ಎಷ್ಟು ಸೌಲಭ್ಯ ಕೊಡ್ತೀವಿ, ಅಷ್ಟು ದುರುಪಯೋಗವಾಗುತ್ತಿದೆ. ಅರ್ಹರಿಗೆ ಯೋಜನೆ ತಲುಪಿದರೆ ಯಶಸ್ವಿಯಾಗುತ್ತದೆ ಎಂದು ತಿಳಿಸಿದರು. ಮೊದಲ ಬಾರಿಗೆ 54 ಮಂದಿ ಶಾಸಕರಾಗಿದ್ದರು. ಆ ಸಂದರ್ಭದಲ್ಲಿ ಮೊದಲು ಗೆದ್ದವರಿಗೆ ಸಚಿವ ಸ್ಥಾನ ಬೇಡ. ಅವರಿಗೆ ನಿಗಮ ಸ್ಥಾನ ನೀಡಿ ಎಂದು ಚರ್ಚೆ ಆಯಿತು. ಆ ಕಾರಣಕ್ಕೆ ಅಂದಿನಿಂದ ಯಾರಿಗೂ ಮೊದಲ ಬಾರಿಗೆ ಗೆದ್ದವರಿಗೆ ಸಚಿವ ಸ್ಥಾನ ನೀಡಿಲ್ಲ. ಎಲ್ಲರಿಗೂ ಕೇಳುವ ಹಕ್ಕಿದೆ. ಕೇಳುವುದರಲ್ಲಿ ಯಾವುದೇ ತಪ್ಪಿಲ್ಲ. ಆದರೆ, ಸಚಿವ ಸ್ಥಾನ ನೀಡುವುದು ಹೈಕಮಾಂಡ್ ವಿಚಾರ ಎಂದು ಹೇಳಿದರು.

# ಪಠ್ಯ ರದ್ದು

ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ಶಿಕ್ಷಣ ಸಚಿವಾಲಯದ ಪರವಾಗಿ ಬೇಷರತ್ ಮತ್ತು ಅನರ್ಹ ಕ್ಷಮೆಯಾಚಿಸಿದರು. ಆದರೆ, ಎನ್‌ಸಿಇಆರ್‌ಟಿಯ ಅಧಿಕೃತ ಸಂವಹನ ಯಾವುದೇ ಸ್ಪಷ್ಟ ಕ್ಷಮೆಯಾಚನೆಯನ್ನು ಹೊಂದಿಲ್ಲ ಮತ್ತು ಸಮರ್ಥಿಸುವಂತಿದೆ ಎಂದು ಹೇಳಿದ ಕೋರ್ಟ್, ಅಧ್ಯಾಯವನ್ನು ಅನುಮೋದಿಸಲು ಮತ್ತು ಪ್ರಕಟಿಸಲು ಕಾರಣರಾದವರನ್ನು ಗುರುತಿಸಲು ತನಿಖೆಗೆ ಆದೇಶಿಸಲಾಗಿದೆ ಎಂದು ಪೀಠ ತಿಳಿಸಿದೆ.

# ಜಿಲ್ಲಾಧಿಕಾರಿ ದಿಢೀರ್ ಭೇಟಿ ಫಲಶೃತಿ




ಚಾಮರಾಜನಗರ, ಶ್ರೀರೂಪ ಅವರು ಇಂದು ಬೆಳಿಗ್ಗೆಯೇ ನಗರದ ಸೋಮವಾರಪೇಟೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಸ್ವಚ್ಛತೆ ಕುರಿತು ಖಡಕ್ ಸೂಚನೆ ನೀಡಿದ ಬೆನ್ನಲ್ಲೇ ಕೆಲವೇ ಗಂಟೆಗಳಲ್ಲಿ ನಗರಸಭೆ ಸಿಬ್ಬಂದಿ ಸೋಮವಾರಪೇಟೆಯ ಮುಖ್ಯ ರಸ್ತೆ ಹಾಗೂ ಇನ್ನಿತರ ಕಡೆ ಸ್ವಚ್ಛಗೊಳಿಸಿದ್ದಾರೆ.

ಜಿಲ್ಲಾಧಿಕಾರಿಯವರು ಬೆಳಿಗ್ಗೆಯೇ ಸೋಮವಾರಪೇಟೆಯ ಮುಖ್ಯ ರಸ್ತೆ ಹಾಗೂ ಸೋಮವಾರಪೇಟೆಯ ಬಡಾವಣೆ ವೀಕ್ಷಿಸಿ ಅಲ್ಲಿ ಸುರಿದಿದ್ದ ಕಸದ ರಾಶಿ ಕಂಡು ಕೂಡಲೇ ತೆರವುಗೊಳಿಸುವಂತೆ ನಗರಸಭೆ ಸಿಬ್ಬಂದಿಗೆ ಕಟ್ಟುನಿಟ್ಟಿನ ಆದೇಶ ನೀಡಿದ್ದರು. ಪರಿಣಾಮ ನಗರಸಭೆ ಸಿಬ್ಬಂದಿ ತೀವ್ರವಾಗಿ ತೊಡಗಿಕೊಂಡು ಸೋಮವಾರಪೇಟೆಯ ಮುಖ್ಯ ರಸ್ತೆಯ ಇಕ್ಕೆಲಗಳಲ್ಲಿ ಬಿದ್ದಿದ್ದ ಕಸವನ್ನು ತೆರವುಗೊಳಿಸಿದ್ದಾರೆ.

**▶▶ ಕೆಲವೇ ಗಂಟೆಗಳಲ್ಲಿ ಸೋಮವಾರಪೇಟೆ ರಸ್ತೆ, ಸುತ್ತಮುತ್ತಲ ಪ್ರದೇಶ ಸ್ವಚ್ಛತೆ**

ಒಂದನೇ ವಾರ್ಡಿನ ಸೋಮವಾರಪೇಟೆ ಬಡಾವಣೆಯ ಬೀದಿಯನ್ನು ಸ್ವಚ್ಛಗೊಳಿಸಿದ್ದಾರೆ. ಸೋಮವಾರಪೇಟೆ ಮುಖ್ಯರಸ್ತೆಯಿಂದ ಪ್ರವಾಸಿಮಂದಿರದ ವರೆಗಿನ ರಸ್ತೆ ಬದಿಯನ್ನು ಸ್ವಚ್ಛಗೊಳಿಸಿ ಕಸವನ್ನು ತೆರವು ಮಾಡಲಾಗಿದೆ. ಜಿಲ್ಲಾಧಿಕಾರಿ ಶ್ರೀರೂಪ ಅವರ ದಿಢೀರ್ ಭೇಟಿ ಹಾಗೂ ಸೂಚನೆ ಪರಿಣಾಮದ ಫಲವಾಗಿ ಕೆಲವೇ ಗಂಟೆಗಳ ಅವಧಿಯಲ್ಲಿ ಸೋಮವಾರಪೇಟೆ ರಸ್ತೆ ಹಾಗೂ ಸುತ್ತಮುತ್ತಲ ಪ್ರದೇಶಗಳು ಸ್ವಚ್ಛವಾಗಿವೆ.

# ಉದ್ಯೋಗ ಮೇಳದ ಬಗ್ಗೆ ಜಾಗೃತಿ ಮೂಡಿಸಿ



ಚಾಮರಾಜನಗರ, ಯುವ ಜನತೆಯು ವಿವಿಧ ಕೌಶಲ್ಯಗಳನ್ನು ಹೊಂದಿ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಹಾಗೂ ಉದ್ಯೋಗ ಪಡೆಯುವ ಸಲುವಾಗಿ ಇದೇ ತಿಂಗಳ 27ರಂದು ಆಯೋಜಿಸಲಾಗಿರುವ ಉದ್ಯೋಗ ಮೇಳದ ಬಗ್ಗೆ ಅಧಿಕಾರಿಗಳು ಜಾಗೃತಿ ಮೂಡಿಸುವಂತೆ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶೃತಿ ಅವರು ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ಉದ್ಯೋಗ ಮೇಳ ಸಂಬಂಧ ನಡೆದ ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೌಶಲ್ಯಾಭಿವೃದ್ಧಿ, ಉದ್ದಿಮೆಶೀಲತೆ ಮತ್ತು ಜೀವನೋಪಾಯ ಇಲಾಖೆ ಸೇರಿದಂತೆ ಇನ್ನಿತರ ಇಲಾಖೆಗಳ ಸಹಯೋಗದೊಂದಿಗೆ ಜಿಲ್ಲೆಯ ಯುವ ಜನರು ಉದ್ಯೋಗ ಪಡೆಯಲು ಉದ್ಯೋಗ ಮೇಳ ಏರ್ಪಡಿಸಲಾಗಿದೆ. ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆ ಎಂಬುದು ಗ್ರಾಮೀಣ ಬಡ ನಿರುದ್ಯೋಗಿ ಯುವ ಜನರು ಉದ್ಯೋಗ ಪಡೆಯಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅನು??ಟನಗೊಳಿಸುತ್ತಿರುವ ಕಾರ್ಯಕ್ರಮವಾಗಿದೆ ಎಂದರು.

8ನೇ ತರಗತಿ ವಿದ್ಯಾರ್ಹತೆ ಮೇಲ್ಪಟ್ಟ ನಿರುದ್ಯೋಗ ಯುವಕ ಯುವತಿಯರು ಮೇಳದಲ್ಲಿ ಭಾಗವಹಿಸಿ ಉದ್ಯೋಗ ಪಡೆಯಬಹುದಾಗಿದೆ. ಚಾಮರಾಜನಗರ, ಮೈಸೂರು ಮತ್ತು ಬೆಂಗಳೂರಿನ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಉದ್ಯೋಗದಾತ 100ಕ್ಕೂ ಹೆಚ್ಚು ಕಂಪನಿಗಳು ಪಾಲ್ಗೊಳ್ಳುತ್ತಿದ್ದು ಹೆಚ್ಚಿನ ಉದ್ಯೋಗ ಅವಕಾಶಗಳು ಇವೆ. ಈ ಬಗ್ಗೆ ವ್ಯಾಪಕವಾಗಿ ಅರಿವು ಮೂಡಿಸಬೇಕು ಎಂದರು.

ಅಭ್ಯರ್ಥಿಗಳಿಗೆ ಮಾಹಿತಿ ನೀಡಿ ಅರ್ಜಿ ಸಲ್ಲಿಸಲು ಮಾರ್ಗದರ್ಶನ ಮಾಡಬೇಕು. ಎಲ್ಲಾ ಮಾಹಿತಿಗಳನ್ನು ಸಂಬಂಧಪಟ್ಟ ಉದ್ಯೋಗದಾತ ಕಂಪನಿಗಳಿಗೆ ನೀಡಲಾಗುತ್ತದೆ. ಅರ್ಹ ಅಭ್ಯರ್ಥಿಗಳನ್ನು ನೇರ ಸಂದರ್ಶನದ ಮುಖಾಂತರ ಆಯ್ಕೆ ಮಾಡಲಾಗುತ್ತದೆ. ಐಟಿಐ, ಡಿಪ್ಲೊಮಾ ಮತ್ತು ಇಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿಗಳನ್ನು ಉದ್ಯೋಗ ಮೇಳಕ್ಕೆ ನೊಂದಾಯಿಸಿಕೊಳ್ಳಲು ತಿಳಿಸುವಂತೆ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶೃತಿ ಅವರು ಸೂಚಿಸಿದರು. ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಮಹಮ್ಮದ್ ಅಕ್ಬರ್, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಹೆಚ್. ಆರ್. ಸುರೇಶ್, ಜಿಲ್ಲಾ ಕೈಗಾರಿಕೆ ಇಲಾಖೆ ಸಹಾಯಕ ನಿರ್ದೇಶಕರಾ ವಿ. ವಿಜಯ್ ಕುಮಾರ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ ಸಹಾಯಕ ನಿರ್ದೇಶಕರಾದ ಮಲ್ಲೇಶ್, ಗುಂಡ್ಲುಪೇಟೆ, ಬೇಗೂರು ತಾಲೂಕಿನ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ತರಬೇತಿ ಅಧಿಕಾರಿ ಹೆಚ್. ಎಸ್. ಪ್ರಸಾದ್, ಚಾಮರಾಜನಗರ, ಗುಂಡ್ಲುಪೇಟೆ ಸರ್ಕಾರಿ ಐಟಿಐ ಕಾಲೇಜಿನ ಪ್ರಾಂಶುಪಾಲರಾದ ಹೆಚ್.ಪಿ. ಶ್ರೀಕಂಠರಾಧ್ಯ, ಇನ್ನಿತರರು ಸಭೆಯಲ್ಲಿ ಉಪಸ್ಥಿತರಿದ್ದರು.

# ಕುರ್ಚಿ ಕಿತ್ತಾಟದಲ್ಲಿ 2.5 ವರ್ಷ ವ್ಯರ್ಥ

## ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಹೇಳಿಕೆ । ಶಿವ, ಗಣೇಶ ದೇವಾಲಯ ಉದ್ಘಾಟನೆ



ಗುಂಡ್ಲುಪೇಟೆ: ತಾಲೂಕಿನ ಕಡಬೂರು ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಶಿವನ ದೇವಾಲಯ ಹಾಗೂ ಗಣೇಶ ದೇವಾಲಯವನ್ನು ಬೃಹತ್ ಕೈಗಾರಿಕೆ ಹಾಗೂ ಉಕ್ಕು ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಉದ್ಘಾಟಿಸಿದರು.

ಗ್ರಾಮದ ಹೊರವಲಯದಲ್ಲಿ ನಿರ್ಮಿಸಿದ್ದ ಹೆಲಿಪ್ಯಾಡ್ ನಲ್ಲಿ ಬಂದಿಳಿದ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿಗೆ ಶಾಸಕ ಎಚ್ ಎಂ ಗಣೇಶ್ ಪ್ರಸಾದ್, ಜಿಲ್ಲಾಧಿಕಾರಿ ಶ್ರೀರೂಪಾ, ತಹಸೀಲ್ದಾರ್. ತನ್ಮಯ್ ಎಂ ಎಸ್ ಡಿ ವೈ ಎಸ್ ಪಿ ಸ್ನೇಹರಾಜ್ ಸ್ವಾಗತ ಕೋರಿದರು.

ದೇವಸ್ಥಾನ ಉದ್ಘಾಟಿಸಿ ಮಾತನಾಡಿದ ಕುಮಾರಸ್ವಾಮಿ ಗ್ಯಾರಂಟಿ ಗಳಿಂದ ಸರ್ಕಾರಕ್ಕೆ ಹೊರೆ ಎಂಬ ಡಿಕೆಶಿ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿದ ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಗ್ಯಾರಂಟಿಗಳ ಭರವಸೆ ನೀಡಿ ಕಾಂಗ್ರೆಸ್ ಅಧಿಕಾರಕ್ಕೆ ಬಂತು, ಆದರೆ ಅಧಿಕಾರಕ್ಕೆ ಬಂದ ನಂತರ ನಾಡಿನ ಅಭಿವೃದ್ಧಿಗೆ ಪೂರಕವಾದ ಕಾರ್ಯಕ್ರಮ ಕಾಣುತ್ತಿಲ್ಲ, ಗ್ಯಾರಂಟಿ ಸ್ಕೀಂ ಗಳಿಂದಾಗಿ ಹಲವಾರು ಯೋಜನೆ ತರಲಾಗುತ್ತಿಲ್ಲ ಗ್ಯಾರಂಟಿ ಭಾರವಾಗ್ತಿದೆ ಎಂದು ಡಿಕೆಶಿ, ದೇಶಪಾಂಡೆ ಹೇಳ್ತಿದ್ದಾರೆ, ಭಾರ ವಿದೆ ಅನ್ನೋದ್ನ ನಾನು ಒಪ್ಪೊದಿಲ್ಲ, ಆಡಳಿತ ಬಿಗಿಯಾಗಿ ಇರಬೇಕು ಗ್ಯಾರಂಟಿ ಕೊಟ್ಟು ಅಭಿವೃದ್ಧಿ ಕೆಲಸ ಮಾಡಬಹುದಿತ್ತು, ಈ ಸರ್ಕಾರ ಬಂದ ಮೇಲೇ ಖಜಾನೆ ತುಂಬಿಸಲಿಕ್ಕೆ ತೆರಿಗೆ ಹೆಚ್ಚಿಸಿದ್ದಾರೆ ಗ್ಯಾರಂಟಿ ಫಲಾನುಭವಿಗಳ ಮೇಲೆ ತೆರಿಗೆ ಹಾಕಿ, ಸರ್ಕಾರ ದೊಡ್ಡ ಮಟ್ಟದ ಹಣ ಸಂಗ್ರಹ ಮಾಡಿದೆ.

ಜನರಿಂದ ಸಂಗ್ರಹಿಸಿದ ತೆರಿಗೆ ಹಣ ಜನಪರ ಯೋಜನೆಗಳಿಗೆ ಬಳಕೆಯಾಗುತ್ತಿಲ್ಲ ಅದರ ಪ್ರತಿಫಲವೇ ಇಂದಿನ ಸ್ಥಿತಿ, ಶಿಕ್ಷಣ ಸೇರಿದಂತೆ ಬಹುತೇಕ ಇಲಾಖೆಗಳಲ್ಲಿ ಉದ್ಯೋಗ ಖಾಲಿಯಿದೆ, ಒಂದೆಡೆ ವಿದ್ಯಾರ್ಥಿಗಳು ಉದ್ಯೋಗಕ್ಕಾಗಿ ಪ್ರತಿಭಟನೆ ಮಾಡ್ತಿದ್ದಾರೆ, ಎರಡೂವರೆ ಲಕ್ಷ ಹುದ್ದೆ ಖಾಲಿಯಿದೆ ಈ ಹುದ್ದೆಗಳ ಭರ್ತಿ ಮಾಡದೆ ಬೇರೆ ಬೇರೆ ಸಬೂಬು ಹೇಳ್ತಿದ್ದಾರೆ, ಉದ್ಯೋಗ ಕೊಡೋದು ಸರ್ಕಾರದ ಜವಾಬ್ದಾರಿ , ಕೇಂದ್ರ ಸರ್ಕಾರ ಉದ್ಯೋಗ ಕೊಟ್ರಾ ಅಂತಾ ಹೇಳ್ತಾರೆ ಅವರು ಕೊಟ್ಟಿಲ್ಲ,ನಾವು ಕೊಡಲ್ಲ ಅನ್ನೋದು ಸರಿಯಲ್ಲ.

### ಅಪಪ್ರಚಾರ ಬೇಡ

**ಮನರೇಗಾ ದಲ್ಲಿ ಸಾಕಷ್ಟು ನ್ಯೂನತೆಯಿತ್ತು, ಅದಕ್ಕೆ ವಿಬಿ ರಾಮ್ ಜಿ ಯೋಜನೆ ತರಲಾಗಿದೆ, ಲೋಪದೋಷ ಕೆಲವು ಬದಲಾಯಿಸಿ ಮನರೇಗಾದಿಂದ ಉತ್ತಮ ಕೆಲಸ ಆಗ್ತಿತ್ತು ವಿಬಿ ರಾಮ್ ಜಿಯಿಂದ ಆಗಲ್ಲ ಎಂಬ ಅಪಪ್ರಚಾರ ಬೇಡ ಎಂದರು.**

ಕುರ್ಚಿ ಕಿತ್ತಾಟದಲ್ಲಿ ಎರಡೂವರೆ ವರ್ಷ ವ್ಯರ್ಥವಾಗಿದೆ ಅಧಿಕಾರ ಹಂಚಿಕೆ ವಿಚಾರ ಈಗಲಾದರೂ ಸರಿಪಡಿಸಿಕೊಳ್ಳಲಿ ಹಿಂದಿನ ಸರ್ಕಾರದ ಪಾಪದ ಕೂಸಿನ ಬಗ್ಗೆ ಚರ್ಚೆ ಮಾಡಲ್ಲ ಅವರು ಕೆಲಸ ಮಾಡಿಲ್ಲ ಅಂತಾ ನಿಮಗೆ ಓಟ್ ಹಾಕಿದ್ದಾರೆ ಹಿಂದಿನ ಸರ್ಕಾರದ ಮೇಲೆ ಯಾಕೆ ಆರೋಪ ಮಾಡ್ತೀರಿ.

**ಗುತ್ತಿಗೆದಾರರಿಂದ ಕಮೀಷನ್ ಆರೋಪ**

ಇವತ್ತು ಗುತ್ತಿಗೆದಾರರು ಸಾಲ ಮಾಡಿಕೊಂಡು ಬ್ಯಾಂಕಿನಲ್ಲಿ ಒಡವೆ ಅಡವಿಟ್ಟು ಆತ್ಮಹತ್ಯೆ ದಾರಿ ಹಿಡಿದಿದ್ದಾರೆ, ಹಿಂದಿನ ಸರ್ಕಾರದ ಮೇಲೆ ಕಾಂಗ್ರೆಸ್ ಆರೋಪ ಮಾಡಿ ಅಧಿಕಾರಕ್ಕೆ ಬಂತು, ಈಗ ಕಾಂಗ್ರೆಸ್ ಸರ್ಕಾರ ಮಾಡುತ್ತಿರುವುದೇನು , ಕಳೆದ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಚುನಾವಣೆ ಬರುವ ಹೊತ್ತಿಗೆ ಸರ್ಕಾರದಲ್ಲಿ ಹಣವೇ ಇರಲಿಲ್ಲ.

ಆರ್ಥಿಕ ಇಲಾಖೆ ಅನುಮತಿ ಇಲ್ಲದೇ ಎಲ್ಲೆಲ್ಲಿ ಕೆಲಸ ಮಾಡಿದ್ದೀರಾ ಅನ್ನೋ ಮಾಹಿತಿ ಇದೆ, ಎಲ್ಲಾ ಸರಿಪಡಿಸಿಕೊಂಡು ರಾಜ್ಯದ ಗೌರವ ಹೇಗೆ ಉಳಿಸಿಕೊಳ್ತೀರಾ ಎಂದು ಕಿಡಿಕಾರಿದರು.

ಅಧಿಕಾರ ಹಂಚಿಕೆ ವಿಚಾರ ನಾನು ಟೀಕೆ ಮಾಡಲ್ಲ,ಅದು ಅವರ ಪಕ್ಷಕ್ಕೆ ಬಿಟ್ಟಿದ್ದು ಯಾವುದೇ ಇಲಾಖೆ ಜನರ ನಿರೀಕ್ಷೆಗೆ ತಕ್ಕಂತೆ ಕೆಲಸ ಮಾಡುತ್ತಿಲ್ಲ, ಆಸ್ಪತ್ರೆಗಳಲ್ಲಿ ಮೆಡಿಸಿನ್ ಸಿಗುತ್ತಿಲ್ಲ , ಅವಧಿ ಮುಗಿದ ಔಷಧಿ ಕೊಡುತ್ತಿದ್ದಾರೆ ಸರ್ಕಾರದ ಆಡಳಿತ ಸಂಪೂರ್ಣ ಕುಸಿದಿದೆ, ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಬಿಜೆಪಿ ಜೆಡಿಎಸ್ ಮೈತ್ರಿ ವಿಚಾರ, ಮೈತ್ರಿಯಾಗಬೇಕೆಂದು ಮಾಡಿಕೊಂಡಿದ್ದೇವೆ,ಚರ್ಚೆ ಮಾಡ್ತೀವಿ, ಎಂದರು. ಈ ಸಂದರ್ಭದಲ್ಲಿ ಶಾಸಕರಾದ ಗಣೇಶ್ ಪ್ರಸಾದ್ ಹನೂರು ಶಾಸಕ ಮಂಜುನಾಥ್, ಮಳವಳ್ಳಿಮಾಜಿ ಶಾಸಕ ಅನ್ನದಾನಿ, ಮಾಜಿ ಶಾಸಕ ಬಾಲರಾಜ್.ಮುಖಂಡರಾದ ಪುಟ್ಟಸ್ವಾಮಿ, ಕಡಬೂರು ಮಂಜು, ಶಿವಪುರ ಸುರೇಶ್, ಕುಂದಕೆರೆ ಸಂಪತ್ತು, ಕಬ್ಬಹಳ್ಳಿ ಮಹೇಶ್, ಕಡಬೂರು ಇದ್ದರು.

### ಮೈತ್ರಿಗೆ ಜನರು ಆಶೀರ್ವಾದ ಇರುತ್ತೆ


**ಕಾಂಗ್ರೆಸ್ ಸರ್ಕಾರದ ದುರಾಡಳಿತ ನೋಡಿ ಜನರಿಗೆ ಸಾಕಾಗಿದೆ ಮುಂದಿನ ಚುನಾವಣೆಯಲ್ಲಿ ಬಿಜೆಪಿ ಮತ್ತು ಜೆಡಿಎಸ್ ಗೆ ಜನ ಒಲವು ತೋರಿಸುವ ನಂಬಿಕೆ ಇದೆ ಎಂದರು.**

### ರಾಜ್ಯ ರಾಜಕಾರಣಕ್ಕೆ ಬರುವ ವಿಚಾರ

**ಒಳ್ಳೆಯ ಸರ್ಕಾರ ತರಬೇಕು, ರಾಜ್ಯದ ಜನತೆಗೋಸ್ಕರ ದುಡಿಮೆ ಮಾಡಬೇಕು, ಜನರ ವಿಶ್ವಾಸಗಳಿಸಬೇಕು, ಚುನಾವಣೆಯಲ್ಲಿ ನನ್ನ ಪಾತ್ರ ಏನು ನಿರ್ವಹಣೆ ಮಾಡುತ್ತೇವೆ ಅನ್ನೋದು ಮುಖ್ಯ ರಾಜ್ಯದಲ್ಲಿ ಉತ್ತಮ ಸರ್ಕಾರ ತರೋದು ನನ್ನ ಗುರಿ, ನಿಖಿಲ್ ವಿರುದ್ಧ ವಿರೋಧಿ ಪಾಳಯ ಒಂದಾಗುವ ವಿಚಾರಕ್ಕೆ ಏನೇ ಒಂದಾದರೂ ಕಳೆದ ಬಾರಿಯ ತಪ್ಪು ನಿರ್ಧಾರ ಜನರಿಗೆ ಮನವರಿಕೆಯಾಗಿದೆ, ಯಾರ ಯಾರ ನಡವಳಿಕೆ ಏನು ಅಂತಾ ರಾಮನಗರ ಜನರಿಗೆ ಗೊತ್ತಾಗಿದೆ, ರಾಮನಗರ ಒಳಗೊಂಡಂತೆ ಜಿಲ್ಲೆಯಲ್ಲಿ ಅಭ್ಯರ್ಥಿಗಳ ಕೊರತೆಯಿಲ್ಲ ಎಂದರು.**



## ಕೃಷ್ಣ ವಂದನ



ಸ್ನೇಹಾ ಆನಂದ್



### ಹೇ ಕೃಷ್ಣಾ !

ದಣಿಕೆಯಾಯಿತೆ ದೊರೆಯೇ,
ಧರೆಯನಾಳುತ ಭರದಿ,
ಕಲಿಯುಗದಲಿ ಕೃಷ್ಣ ಕೃಪೆಯ ತೋರುತಲಿ!

ಮಂದಹಾಸವ ಬೀರಿ ತರುಲತೆಗಳು,
ಸೂರ್ಯ, ಚಂದ್ರರ ಕಿರಣದಲಿ!
ಕರುಗಳು ಕರೆಯುವವು ನಿನ್ನ ಪ್ರೀತಿಯಲಿ
ತನ್ನ ದೊರೆ ಮುರಲಿಗೆ ತಲೆದೂಗುತಿಹವು!

ತೇತ್ರಾ ಯುಗದಲಿ ರಾಮನಾಗಿ ಬಂದೆ,
ಕಲಿಯುಗದಲಿ ನೀ ನಿಂದೆ ಕೃಷ್ಣನಾಗಿ !
ಹೇಮಗಿರೀಶನಾಗಿ ಹಯವದನ ಪ್ರಿಯನಾಗಿ
ಪರಿಮಳಾರ್ಯರಿಗೆ ನೀ ಒಲಿದು ಬಂದೆ!

## ಕಟ್ಟಡ ನಿರ್ಮಾಣ ಕಾಮಗಾರಿ ವೇಳೆ ವಿದ್ಯುತ್ ಅವಘಡ : ಕೂಲಿ ಕಾರ್ಮಿಕ ಸಾವು

**ರಾಮಸಮುದ್ರದ ಕುಲುಮೆ ರಸ್ತೆಯಲ್ಲಿ ಘಟನೆ : ಇಬ್ಬರಿಗೆ ಗಂಭೀರ ಗಾಯ:**

ಚಾಮರಾಜನಗರ: ಕಟ್ಟಡ ನಿರ್ಮಾಣ ಕಾಮಗಾರಿಯಲ್ಲಿ ತೊಡಗಿದ್ದ ವೇಳೆ ವಿದ್ಯುತ್ ಅವಘಡ ನಡೆದಿದ್ದು, ವಿದ್ಯುತ್ ತಂತಿ ಸ್ಪರ್ಶಿಸಿ ಓರ್ವ ಕಾರ್ಮಿಕ ಸ್ಥಳದಲ್ಲಿಯೇ ಮೃತಪಟ್ಟರೆ, ಇನ್ನಿಬ್ಬರು ಕಾರ್ಮಿಕರು ಗಂಭೀರವಾಗಿ ಗಾಯಗೊಂಡಿರುವ ಘಟನೆ ನಗರದ ರಾಮಸಮುದ್ರದಲ್ಲಿ ಗುರುವಾರ ಬೆಳಗ್ಗೆ ನಡೆದಿದೆ.

ನಗರದ ಬಾಬು ಜಗಜೀವನ್ ರಾಂ ಬಡಾವಣೆಯ ನಿವಾಸಿಗಳಾದ ಕಟ್ಟಡ ನಿರ್ಮಾಣ ಕಾರ್ಮಿಕ ನಾಗಣ್ಣ(40) ಮೃತ ದುರ್ದೈವಿ, ಇನ್ನಿಬ್ಬರು ಕಾರ್ಮಿಕರಾದ ನಾಗೇಂದ್ರ ಹಾಗೂ ವಿಷಕಂಠ ಎಂಬುವವರು ಗಂಭೀರವಾಗಿ ಗಾಯಗೊಂಡಿದ್ದು ಸಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ರಾಮಸಮುದ್ರದ ಕುಲುಮೆ ರಸ್ತೆಯಲ್ಲಿ ಕಟ್ಟಡ ನಿರ್ಮಾಣ ಸಂದರ್ಭದಲ್ಲಿ ಕಾಲಾವಧಿ ಕಟ್ಟಿಕೊಂಡು ಮೊದಲ ಮಹಡಿಗೆ ಗಾರೆ ಕೆಲಸ ಮಾಡುತ್ತಿದ್ದ ವೇಳೆ ಪಕ್ಕದಲ್ಲಿಯೇ ಹಾದುಹೋಗಿದ್ದ ವಿದ್ಯುತ್ ತಂತಿ ಸ್ಪರ್ಶಿಸಿದೆ ಎನ್ನಲಾಗಿದೆ. ಈ ವೇಳೆ ನಾಗಣ್ಣ ಎಂಬುವವರು ಸ್ಥಳದಲ್ಲಿಯೇ ಮೃತಪಟ್ಟರೆ, ಮತ್ತಿಬ್ಬರು ಗಾಯಗೊಂಡಿದ್ದಾರೆ. ವಿಷಯ ತಿಳಿದು ಸ್ಥಳಕ್ಕೆ ಪಟ್ಟಣ ಠಾಣೆಯ ಪೊಲೀಸರು ಭೇಟಿ ನೀಡಿ ಮೃತ ದೇಹವನ್ನು ಮರಣೋತ್ತರ ಪರೀಕ್ಷೆಗೆ ಸಿಮ್ಸ್ ಆಸ್ಪತ್ರೆಯ ಶವಾಗಾರಕ್ಕೆ ರವಾನಿಸಿದರು. ಉಳಿದಂತೆ ಗಂಭೀರವಾಗಿ ಗಾಯಗೊಂಡಿರುವ ನಾಗೇಂದ್ರ ಹಾಗೂ ವಿಷಕಂಠ ಎಂಬುವವರನ್ನು ಸಿಮ್ಸ್ ಆಸ್ಪತ್ರೆಗೆ ಪರಿಶೀಲನೆ ನಡೆಸಿದ್ದಾರೆ. ಈ ಸಂಬಂಧ ಪಟ್ಟಣ ಪೊಲೀಸ್ ದಾಖಲಿಸಲಾಗಿದೆ. ಸ್ಥಳಕ್ಕೆ ಸೆಸ್ಕ್ ಅಧಿಕಾರಿಗಳು ಭೇಟಿ ನೀಡಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಪ್ರತಿಭಟನೆ**

ನಗರದ ಹೊರವಲಯ ಯಡಬೆಟ್ಟದಲ್ಲಿರುವ ಚಾಮರಾಜನಗರ ಭೋಧನಾ ಆಸ್ಪತ್ರೆಯ ಶವಾಗಾರ ಮುಂದೆ ಅಧಿಕಾರಿಗಳು ಸ್ಥಳಕ್ಕೆ ಬರದಿರುವುದನ್ನು ಖಂಡಿಸಿ, ಮೃತರ ಸಂಬಂಧಿಕರು, ಸಮುದಾಯ ಮುಖಂಡರು ಜಿಲ್ಲಾಡಳಿತ, ಪೊಲೀಸ್ ಇಲಾಖೆ, ಸೆಸ್ಕಾಂ ವಿರುದ್ಧ ಘೋಷಣೆ ಕೂಗಿ ಅಕ್ರೋಶ ವ್ಯಕ್ತಪಡಿಸಿದರು. ಸ್ಥಳಕ್ಕೆ ಭೇಟಿ ನೀಡಿದ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಶಿಧರ್ ಅವರಿಗೆ ದೂರು ಸಲ್ಲಿಸಿದರು.

**ಮೃತರ ಸಂಬಂಧಿಕರು ಆಕ್ರಂದನ**

ಅಸ್ಪತ್ರೆಯ ಮುಂಭಾಗದಲ್ಲಿ ಮೃತ ಸಂಬಂಧಿಕರ ಆಕ್ರಂದನ ಮುಗಿಲು ಮುಟ್ಟಿತು. ಪ್ರತಿಭಟನೆಯಲ್ಲಿ ಸಮುದಾಯದ ಮುಖಂಡರಾದ ರಾಮಸಮುದ್ರ ಶಿವಮೂರ್ತಿ, ಬಸವನಪುರ ರಾಜಶೇಖರ್, ಹೆಚ್. ಹೆಚ್.ನಾಗರಾಜು, ರಾಮಸಮುದ್ರ ಎಂ. ಶಿವಕುಮಾರ್, ಶಿವಣ್ಣ, ವೆಲ್ಡಿಂಗ್ ಲಿಂಗರಾಜು, ಸುಂದರ್, ಎ.ಶಿವಕುಮಾರ್, ಬೆಳ್ಳಿಯಪ್ಪ, ನಾಗಮಲ್ಲು, ಮನು ಇತರರು ಭಾಗವಹಿಸಿದ್ದರು.

# ಧರ್ಮ, ತತ್ವಜ್ಞಾನ ಕಲೆಯ ಬುನಾದಿ




ಮೈಸೂರು: ಧರ್ಮ ಮತ್ತು ತತ್ವಜ್ಞಾನಗಳು ಕಲೆಯ ಬುನಾದಿಯಾಗಿವೆ ಎಂದು ಸಾಹಿತಿ ಪ್ರೊ.ರಹಮತ್ ತರೀಕೆರೆ ಹೇಳಿದರು.

ಮೈಸೂರು ವಿಶ್ವವಿದ್ಯಾಲಯದ ಜೈನಶಾಸ್ತ್ರ ಮತ್ತು ಪ್ರಾಕೃತ ಅಧ್ಯಯನ ವಿಭಾಗದಲ್ಲಿ ಆಯೋಜಿಸಿದ್ದ 'ಶಾಂತಿನಾಥ ದೇಸಾಯಿಯವರ ಸಾಹಿತ್ಯದಲ್ಲಿ ಜೈನ ತಾತ್ವಿಕತೆ ಮತ್ತು ನವ್ಯಪ್ರಜ್ಞೆ' ವಿಷಯ ಕುರಿತ ಎರಡು ದಿನಗಳ ವಿಚಾರ ಸಂಕಿರಣಕ್ಕೆ ಗುರುವಾರ ಚಾಲನೆ ನೀಡಿ ಮಾತನಾಡಿದರು. ಫಿಲಾಸಫಿಯನ್ನು ವಿಸ್ತರಣೆ ಮಾಡಿದಾಗ ಎಲ್ಲ ಧರ್ಮದ ಅನೇಕ ಸಂಗತಿಗಳನ್ನು ಪ್ರಶ್ನೆ ಮಾಡುಬಹುದು. ಕುವೆಂಪು ಸೇರಿದಂತೆ ಅನೇಕರ ಸಾಹಿತ್ಯದಲ್ಲಿ ಇದನ್ನು ಗಮನಿಸಬಹುದು. ಕಲೆಯು ದರ್ಶನದ ಸೃಜನಶೀಲ ವಿಸ್ತರಣೆಯಾಗಿದೆ. ಜತೆಗೆ ಕಲೆಯೂ ಧರ್ಮದ ವಿಮರ್ಶಾತ್ಮಕ ವಿಸ್ತರಣೆಯೂ ಹೌದು. ಕಲೆಯಲ್ಲಿ ಫಿಲಾಸಫಿ ಇರುತ್ತದೆ. ಆದರೆ ಧರ್ಮದ ವಿಮರ್ಶೆಯಲ್ಲಿ ಫಿಲಾಸಫಿ ವಿಸ್ತರಣೆಯಾಗಿರುತ್ತದೆ ಎಂದರು.

ಕಲೆಯು ಧರ್ಮ ಮತ್ತು ದರ್ಶನವನ್ನು ಮೀರಿದಾಗ ಸೃಜನಶೀಲ ಸೀಮೋಲ್ಲಂಘನೆ ಎನ್ನುತ್ತೇವೆ. ಪಂಪ, ರನ್ನ, ಜನ್ನ ಎಲ್ಲರೂ ತಮ್ಮ ಸಾಹಿತ್ಯದಲ್ಲಿ ಸೃಜನಶೀಲ ಸೀಮೋಲ್ಲಂಘನೆ ಮಾಡಿದ್ದಾರೆ. ಕಲೆಯಲ್ಲಿ ಸೀಮೋಲ್ಲಂಘನೆ ಆಗಲೇಬೇಕು. ಸೃಜನಶೀಲ ಸೀಮೋಲ್ಲಂಘನೆ ಮಾಡದವರು ಕಲಾವಿದರಲ್ಲ ಎಂದರು.

ವಚಸಸನಗಳಲ್ಲಿ ಮುಕ್ತ ಜಿಜ್ಞಾಸೆ ಕಾಣಬಹುದು. ಹಾಗಾಗಿ, ಶರಣರ ವಚನಗಳು ಫಿಲಾಸಫಿಯೂ ಹೌದು. ಕಲೆಯೂ ಹೌದು. ಎಂದರು. ಜೈನಶಾಸ್ತ್ರ ಮತ್ತು ಪ್ರಾಕೃತ ಅಧ್ಯಯನ ವಿಭಾಗದ ಅಧ್ಯಕ್ಷೆ ಪ್ರೊ. ಎಸ್.ಡಿ.ಶಶಿಕಲಾ ಇದ್ದರು.

# ಸಚಿವ ಸ್ಥಾನ ಕೇಳುವುದರಲ್ಲಿ ತಪ್ಪೇನು?

ಮೈಸೂರು: ಮೊದಲ ಬಾರಿ ಗೆದ್ದವರು ಸಿಎಂ ಆಗುತ್ತಾರೆ, ಸಚಿವರು ಯಾಕೆ ಆಗಬಾರದು? ಮೊದಲ ಬಾರಿಗೆ ಗೆದ್ದವರು ಸಚಿವ ಸ್ಥಾನ ಕೇಳುವುದರಲ್ಲಿ ತಪ್ಪೇನು? ಎಂದು ಶಾಸಕ ಕೆ. ಹರೀಶ್ ಗೌಡ ಪ್ರಶ್ನಿಸಿದರು.



ನಗರದಲ್ಲಿ ಈ ಕುರಿತು ಮಾತನಾಡಿದ ಅವರು, ಮೊದಲು ಗೆದ್ದ ಶಾಸಕರೂ ಚುನಾವಣೆಯನ್ನೇ ಗೆದ್ದು ಬಂದಿರುತ್ತಾರೆ. ಅವರಿಗೂ ಕೂಡ ಸಾಕಷ್ಟು ಅನುಭವ ಇರುತ್ತದೆ. ಮೊದಲ ಬಾರಿಗೆ ಗೆದ್ದವರು ಸಚಿವ ಸ್ಥಾನ ಕೇಳುವುದರಲ್ಲಿ ತಪ್ಪೇನು? ನಾನು ಪತ್ರಕ್ಕೆ ಸಹಿ ಹಾಕಿಲ್ಲ ಆದರೆ ನಾನು ಸ್ಥಳದಲ್ಲಿ ಇದ್ದಿದ್ದರೆ ಹಾಕುತ್ತಿದ್ದೆ. ಸಿಎಂ ಸಿದ್ದರಾಮಯ್ಯ ಮೊದಲ ಬಾರಿ ಗೆದ್ದವರಿಗೆ ಸಚಿವ ಸ್ಥಾನ ಇಲ್ಲ ಅಂದಿದ್ದಾರೆ. ಅದು ಯಾವ ಕಾರಣಕ್ಕೆ ಹಾಗೆ ಹೇಳಿದ್ದಾರೆ ಗೊತ್ತಿಲ್ಲ ನನಗೆ ಅವಕಾಶ ಸಿಗದಿದ್ದರೂ, ಮೊದಲು ಗೆದ್ದ ಯಾರಿಗಾದರೂ ಅವಕಾಶ ಸಿಗಲಿ ಎಂದರು.

ನೀವು ಡಿಕೆ ಬಣಾನಾ? ಸಿದ್ದು ಬಣಾನಾ ಅಂತ ಜನ ಕೇಳುತ್ತಿದ್ದಾರೆ. ಕ್ಷೇತ್ರದಲ್ಲಿ ಜನ ನೀವ್ಯಾವ ಬಣ ಅಂತ ಕೇಳುತ್ತಾರೆ. ಅಧಿಕಾರದ ಹಂಚಿಕೆ ವಿಚಾರ ಪ್ರಸ್ತಾಪಿಸಿದ್ದರೆ ಮೊದಲು ಗೊಂದಲ ನಿವಾರಿಸಿ. ನಾನು ಕಾಂಗ್ರೆಸ್ ಪಕ್ಷದ ಬಣ. ನನಗೆ ರಾಹುಲ್ ಗಾಂಧಿ ಭೇಟಿ ಮಾಡಲು ಆಗಲ್ಲ. ಸುರ್ಜೇವಾಲ ಭೇಟಿ ಮಾಡುವ ಅನಿವಾರ್ಯತೆ ಬಂದಿಲ್ಲ. ನಮಗೆ ಡಿಕೆ ಶಿವಕು ಮಾರ್ , ಸಿದ್ದರಾಮಯ್ಯ ಅವರೇ ಸಾಕು. ಯಾವುದೇ ವಿಷಯ, ವಿಚಾರವಿದ್ದರೂ ಹೈಕಮಾಂಡ್ ಸ್ಪಷ್ಟಪಡಿಸಬೇಕು. ಜನರು ಗೊಂದಲದಲ್ಲಿದ್ದು, ಅಧಿಕಾರಿ ನಡೆಸಲು ತೊಂದರೆ ಆಗುತ್ತಿದೆ ಎಂದು ತಿಳಿಸಿದರು.

ಇದೇ ವೇಳೆ ನಿನ್ನೆ ಸುರಿದ ಅಲ್ಪಮಳೆಗೆ ಪಡುವಾರಹಳ್ಳಿಯ ವ್ಯಕ್ತಿಯೊಬ್ಬರ ಮನೆ ಗೋಡೆ ಕುಸಿತ ಸ್ಥಳ ವೀಕ್ಷಿಸಿ ಸರ್ಕಾರದಿಂದ ಸೂಕ್ತಪರಿಹಾರ ಕಲ್ಪಿಸಿಕೊಡಲಾಗುವುದು ಎಂದು ಹೇಳಿದರು.

**ಬಂಜಾರ ಸೇವಾ ಸಂಘದ ಗೌರವಾಧ್ಯಕ್ಷ ಶಾಂತರಾಜು ಆಶಯ**

# ಲಂಬಾಣಿ ಸಮುದಾಯ ಸಮಾಜದ ಮುಖ್ಯವಾಹಿನಿಗೆ ಬರಲಿ



ಹನೂರು: ಲಂಬಾಣಿ ಸಮುದಾಯವೂ ಬಡತನ ರೇಖೆಗಿಂತ ಕೆಳಗಿರುವ ಸಣ್ಣ ಸಮುದಾಯವಾಗಿದ್ದು ಸಮಾಜದ ಮುಖ್ಯ ವಾಹಿನಿಗೆ ತರುವ ನಿಟ್ಟಿನಲ್ಲಿ ಹನೂರು ಪಟ್ಟಣದಲ್ಲಿ ಸೇವಾಲಾಲ್ ಜಯಂತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ತಾಲೂಕಿನ ವಿವಿಧ ಸಮುದಾಯದವರು ಕಾರ್ಯಕ್ರಮದ ಯಶಸ್ವಿಗೆ ಎಲ್ಲಾ ರೀತಿಯ ಸಹಕಾರ ನೀಡಬೇಕು ಎಂದು ಬಂಜಾರ ಸೇವಾ ಸಂಘದ ಗೌರವಾಧ್ಯಕ್ಷ ಶಾಂತರಾಜು ತಿಳಿಸಿದರು.

ಹನೂರು ಪಟ್ಟಣದ ಲೋಕೋಪಯೋಗಿ ವಸತಿ ಗೃಹದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.ಬಂಜಾರ ಸಮುದಾಯವು ರಾಜ್ಯದಲ್ಲಿಯೇ ಒಂದು ಸಣ್ಣ ಸಮುದಾಯವಾಗಿದೆ. ನಮ್ಮ ಸಮಾಜಕ್ಕೆ ಇದುವರೆಗೂ ಸರ್ಕಾರದಿಂದ ಸಿಗಬೇಕಾದ ಸೌಲಭ್ಯಗಳು ಇನ್ನು ಸಮರ್ಪಕವಾಗಿ ಸಿಗದೇ ನಮ್ಮ ಜನರು ತುತ್ತು ಅನ್ನಕ್ಕಾಗಿ ಜಿಲ್ಲೆಯಿಂದ ಜಿಲ್ಲೆಗೆ ವಲಸೆ ಹೋಗುವಂತಹ ಪರಿಸ್ಥಿತಿ ಬಂದಿದೆ. ಕೂಲಿಗಾಗಿ ಹೋದ ಸಂದರ್ಭದಲ್ಲಿ ಮಕ್ಕಳು ಹಲವಾರು ಕಾರಣಗಳಿಂದ ಮೃತಪಟ್ಟಿದ್ದಾರೆ. ನಮ್ಮ ಸಮಾಜದ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಹಾಗೂ ಸರ್ಕಾರದಿಂದ ಸಿಗಬೇಕಾದ ಹಕ್ಕುಗಳನ್ನು ಪಡೆಯುವ ನಿಟ್ಟಿನಲ್ಲಿ ವಿಭಾಗೀಯ ಮಟ್ಟದ ಬಂಜಾರ ಮಳಾವೋ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದೆ.

ಹನೂರು ಪಟ್ಟಣದಲ್ಲಿ ಮೊಟ್ಟ ಮೊದಲ ಬಾರಿಗೆ ವಿಭಾಗಿಯ ಮಟ್ಟದ 287ನೇ ಸೇವಾಲಾಲ್ ಜಯಂತಿ ಕಾರ್ಯಕ್ರಮವನ್ನು ಫೆಬ್ರವರಿ 28ರಂದು ಮಲೆ ಮಹದೇಶ್ವರ ಕ್ರೀಡಾಕಣದಲ್ಲಿ ಹಮ್ಮಿಕೊಳ್ಳಲಾಗಿದೆ. ಬೆಳಿಗ್ಗೆ 9 ಗಂಟೆಗೆ ಆರ್ ಎಂ ಸಿ ಮೈದಾನದಿಂದ ಬಂಜಾರ ಕಲಾತಂಡಗಳ ಉದ್ಘಾಟನೆ ಹಾಗೂ ಮೆರವಣಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುವುದು. 10 ಗಂಟೆಗೆ ವೇದಿಕೆ ಕಾರ್ಯಕ್ರಮ ಪ್ರಾರಂಭವಾಗಲಿದೆ ಎಂದರು.


ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ ವೆಂಕಟೇಶ್, ಸಮಾಜ ಕಲ್ಯಾಣ ಇಲಾಖೆ ಸಚಿವ ಎಚ್ ಸಿ ಮಹಾದೇವಪ್ಪ, ಸಂಸದರಾದ ಸುನಿಲ್ ಬೋಸ್ ಶಾಸಕರಾದ ಎಂಆರ್ ಮಂಜುನಾಥ್, ಪುಟ್ಟರಂಗಶೆಟ್ಟಿ, ಎ.ಆರ್ ಕೃಷ್ಣಮೂರ್ತಿ, ನರೇಂದ್ರಸ್ವಾಮಿ, ಚಾಮುಲ್ ಅಧ್ಯಕ್ಷ ನಂಜುಂಡಸ್ವಾಮಿ ಮಾಜಿ ಶಾಸಕರುಗಳಾದ ಆರ್ ನರೇಂದ್ರ, ಎನ್ ಮಹೇಶ್, ಜಿಎನ್ ನಂಜುಂಡಸ್ವಾಮಿ, ಪರಿಮಳ ನಾಗಪ್ಪ,ಮಾನಸ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ದತ್ತೇಶ್ ಕುಮಾರ್, ಸಮಾಜ ಸೇವಕರಾದ ನಿಶಾಂತ್, ವೆಂಕಟೇಶ್, ತಹಸೀಲ್ದಾರ್ ಚೈತ್ರ, ಸಮುದಾಯದ ಜನಪ್ರತಿನಿಧಿಗಳುಸೇರಿದಂತೆ ಇನ್ನಿತರ ಪ್ರಮುಖ ಗಣ್ಯರು ಆಗಮಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಮೈಸೂರು ಮಂಡ್ಯ ಚಾಮರಾಜನಗರ ಜಿಲ್ಲೆಯ 69 ತಾಂಡಗಳಿಂದ 7 ಸಾವಿರಕ್ಕೂ ಹೆಚ್ಚು ಸಮುದಾಯದವರು ಕಾರ್ಯಕ್ರಮದಲ್ಲಿ ಭಾಗವಹಿಸುವ ನಿರೀಕ್ಷೆ ಇದೆ. ಬಂಜಾರ ತಾಂಡ ಕಲಾ ಪ್ರತಿಭೆ ಟಿವಿ ಸೆಲಬ್ರೆಟಿಗಳು ಹಾಗೂ ಗಾಯಕರುಗಳಾದ ಹನುಮಂತು, ರಮೇಶ್ ಲಮಾಣಿ ರವರಿಂದ ರಸಮಂಜರಿ ಕನಕಪುರ ಹನುಮಂತು ಜನಪದ ಕಲೆ ತಂಡಗಳು ಭಾಗವಹಿಸಲಿವೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ತಾಲ್ಲೂಕು ಪಂಚಾಯತಿ ಮಾಜಿ ಸದಸ್ಯ ಕುಮಾರ್ ನಾಯಕ್, ಬಂಜಾರ ಸಂಘದ ಅಧ್ಯಕ್ಷ ಶಿವಾಜಿನಾಯಕ್, ಸಮುದಾಯದ ಮುಖಂಡರಾದ ಮುನಿನಾಯಕ್, ಗೋಪಾಲನಾಯ್ಕ, ಮಹಾದೇವನಾಯ್ಕ, ಗುರು, ನಾಗರಾಜು, ನಾಗೇಶ್ ಹಾಜರಿದ್ದರು.

## ಮಾ.1ಕ್ಕೆ ವಿಶೇಷ ಮಕ್ಕಳ ಕಾರ್ಯಕ್ರಮ

ಮೈಸೂರು: ರೋಟರಿ ಮಿಡ್ ಟೌನ್ ವತಿಯಿಂದ ಮಾ. 1 ರಂದು ಬೆಳಗ್ಗೆ 9ಕ್ಕೆ ನಗರದ ಓವಲ್ ಮೈದಾನದಲ್ಲಿ ಬಾಂಧವ್ಯ ಶೀರ್ಷಿಕೆ ಅಡಿಯಲ್ಲಿ ವಿಶೇಷ ಮಕ್ಕಳು, ಪೋಷಕರು, ಶಿಕ್ಷಕರಿಗಾಗಿ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಅಧ್ಯಕ್ಷ ರಾಕೇಶ್ ಬಾಬು ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಸುಮಾರು 500 ಮಂದಿ ವಿಶೇಷ ಮಕ್ಕಳು ಪಾಲ್ಗೊಳ್ಳಲಿದ್ದಾರೆ. 8 ವರ್ಷಕ್ಕಿಂತ ಕಡಿಮೆ ಇರುವ ಮಕ್ಕಳಿಗೆ ವಿಶೇಷ ಆಟೋಟ, ಅದಕ್ಕಿಂತ ಹೆಚ್ಚು ವಯಸ್ಸಿನ ಮಕ್ಕಳಿಗೆ ಓಟ, ಲಾಂಗ್ ಜಂಪ್, ಶಾಟ್‌ಪುಟ್ ಮೊದಲಾದ ಕ್ರೀಡೆ ಆಯೋಜಿಸಲಾಗಿದೆ ಎಂದರು. ರವಿಶಂಕರ್, ದಾಕೋಜು, ನವೀನ್ ಚಂದ್ರ ಉದ್ಘಾಟನೆ ವೇಳೆ ಹಾಜರಿರುವರು, ಸಂಜೆ 4.30ಕ್ಕೆ ಸಮಾರೋಪ ಸಮಾರಂಭ ನಡೆಯಲಿದ್ದು, ಸಾಧಕ ಮಕ್ಕಳನ್ನು ಸನ್ಮಾನಿಸಲಾಗುವುದೆಂದರು. ಕೆ.ವಿ. ಭಾಸ್ಕರ್, ಎಚ್.ಎಸ್.ವೀರೇಶ್ ಇದ್ದರು.



# ಅಕ್ರಮ ಕಟ್ಟಡ ತೆರವಿಗೆ ಆಗ್ರಹಿಸಿ ಅರೆ ಬೆತ್ತಲೆ ಪ್ರತಿಭಟನೆ



ಮೈಸೂರು: ಕಬಿನಿಐ ಬಂಡಿಪುರ, ನಾಗರಹೊಳೆ ವ್ಯಾಪ್ತಿಯಲ್ಲಿ ಅಕ್ರಮ ಕಟ್ಟಡಗಳ ತೆರವಿಗೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರ ಸಂಘ ನಗರದ ಪ್ರಾದೇಶಿಕ ಆಯುಕ್ತರ ಕಚೇರಿ ಮುಂಭಾಗ ಅರೆ ಬೆತ್ತಲೆ ಪ್ರತಿಭಟನೆ ನಡೆಸಿತು.

ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಅತಿಕ್ರಮ ಕಟ್ಟಡಗಳ ತೆರವುಗೊಳಿಸದ ಜಿಲ್ಲಾಡಳಿತದ ಅಧಿಕಾರಿಗಳ ವಿರುದ್ಧ ನಾನಾಘೋಷಣೆಗಳನ್ನು ಕೂಗಿದರು. ಬಳಿಕ ಮಾತನಾಡಿದ ಅವರು, ತಿಂಗಳ ಹಿಂದೆ ಪ್ರತಿಭಟನೆ ನಡೆಸಿ ಪ್ರಾದೇಶಿಕ ಆಯುಕ್ತರಿಗೆ ಮನವಿ ಸಲ್ಲಿಸಿದ ಬಳಿಕ ಸಭೆ ನಡೆಸಿದ ಆಯುಕ್ತರು 10ದಿನದಲ್ಲಿ ಸಮರ್ಪಕ ವರದಿ ಸಲ್ಲಿಸಲು ಸೂಚಿಸಿದ್ದರು. ಆದರೆ, ಇಲ್ಲಿಯ ತನಕ ಯಾವುದೇ ವರದಿಯನ್ನು ಬಹಿರಂಗಪಡಿಸದೆ ಯಾವುದೇ ಅಕ್ರಮ ರೆಸಾರ್ಟ್ ತೆರವು ಮಾಡಿಲ್ಲ. ರೈತ ಮುಖಂಡರ ಸಭೆ ಅಥವಾ ಅಕ್ರಮ ರೆಸಾರ್ಟ್‌ಗಳಿಗೆ ನೋಟಿಸ್ ಕೊಡುವ ಕೆಲಸವನ್ನು ಮಾಡಿಲ್ಲ ಎಂದು ಆಕ್ರೋಶ ಹೊರಹಾಕಿದರು.

ಈ ಬಗ್ಗೆ ತಕ್ಷಣ ಕ್ರಮ ಕೈಗೊಳ್ಳಬೇಕು ಇಲ್ಲವಾದರೆ ನಾವು ನೀಡಿರುವ ರೈತ ಹಕ್ಕು ಒತ್ತಾಯಗಳಿಗೆ ಯಾವುದೇ ಅಕ್ರಮ ನಡೆದಿಲ್ಲ ಎಂದು ಬರವಣಿಗೆ ಮೂಲಕ ನೀಡಲಿ. ಇಲ್ಲವಾದರೆ ತಮ್ಮಲ್ಲಿ ತನಿಖೆ ಮತ್ತು ವರದಿ ತಯಾರು ಮಾಡುವಲ್ಲಿ ರಾಜಕೀಯ ಹಸ್ತಕ್ಷೇಪವಿದ್ದರೆ ಸರ್ಕಾರಕ್ಕೆ ಪತ್ರ ಬರೆದು ಹಾಲಿ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆಗೆ ಆದೇಶ ಮಾಡಲು ಒಂದು ಜಂಟಿ ಸಮಿತಿಯನ್ನು ಅಧಿಕಾರಿಗಳು ಕೋರಲ್ಲಿ ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಡಾ.ಗುರುಪ್ರಸಾದ್, ಕೆರೆಹುಂಡಿ ರಾಜಣ್ಣ, ಹಾಲಿನ ನಾಗರಾಜ್, ವಳಗೆರೆ ಗಣೇಶ್, ಅಂಡುವಿನಹಳ್ಳಿ ಎಚ್‌ಎಸ್ ರಾಜು, ಮಾಡ್ರಳ್ಳಿ ಮಾದೇವಪ್ಪ, ಹಿರಿಕಾಟಿ ಚಿಕ್ಕಣ್ಣ, ಮಯೂರ್ ಮಹೇಂದ್ರ, ಸತೀಶ್, ಎಚ್.ಗುಂಡ್ಲಾ ಚಿದಂಬರ, ಮುದ್ದಳ್ಳಿ ಮಧು, ದೇವಿರಮ್ಮನಹಳ್ಳಿ ಹುಂಡಿ ವೈಟ್ ನವೀನ, ಹೊನ್ನೇಗೌಡನಳ್ಳಿ ಮಹೇಶ್, ಮುಕಡಹಳ್ಳಿ ರಾಜು, ಪುಟ್ಟ ಮಲ್ಲೆಗೌಡ, ಮಹೇಶ್, ದೇವನೂರು ನಾಗೇಂದ್ರ, ಸ್ಯಾನಂಡರಳ್ಳಿ ಬಸವರಾಜು, ನಾಗರಾಜಪ್ಪ, ಊರ್ದಳ್ಳಿ ರಾಮಣ್ಣ, ಕಿರಲಿಪುರ ಶ್ರೀಕಂಠ ಮಾದೇವಪ್ಪ ಮುಂತಾದವರು ಹಾಜರಿದ್ದರು.

# ಎಸ್‌ಜೆಸಿಇ ಘಟಿಕೋತ್ಸವ: 1832 ಪದವಿ ಪ್ರದಾನ




ಮೈಸೂರು: ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯದ 8ನೇ ಘಟಿಕೋತ್ಸವದಲ್ಲಿ 1,832 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು.

ಘಟಿಕೋತ್ಸವದಲ್ಲಿ ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನಿಧ್ಯವಹಿಸಿದ್ದರು. ಆದರ್ಶ ಗ್ರೂಪ್ ಅಧ್ಯಕ್ಷ ಬಿ.ಎಂ.ಜಯಶಂಕರ್ ಘಟಿಕೋತ್ಸವ ಭಾಷಣ ಮಾಡಿದರು. ಅತಿಥಿಗಳಾಗಿ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ.ಬೆಟಸೂರ ಮಠ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು. 37 ಮಂದಿ ಚಿನ್ನದ ಪದಕ, 37 ವಿದ್ಯಾರ್ಥಿಗಳ ದತ್ತಿ ಪದಕ ಪಡೆದುಕೊಂಡರು. 1,081 ಬಿಇ, 63 ಬಿಸಿಇ, 99 ಎಂ.ಟೆಕ್, 118 ಎಂಸಿಎ, 161ಎಂಎಸ್‌ಸಿ, 281 ಎಂಬಿಎ ಪದವೀಧರರು, 29 ಪಿಎಚ್.ಡಿ. ಸಂಶೋಧಕರಿಗೆ ಪದವಿ ಪ್ರದಾನ ಮಾಡಲಾಯಿತು. ತಾಂತ್ರಿಕ ಶಿಕ್ಷಣ ವಿಭಾಗದ ನಿರ್ದೇಶಕ ಡಾ.ಬಿ.ಸುರೇಶ್, ವಿವಿ ಕುಲಪತಿ ಡಾ.ಎ.ಎನ್.ಸಂತೋಷ್‌ಕುಮಾರ್, ವಿವಿಯ ಕುಲಸಚಿವ ಡಾ.ಎಸ್.ಎ.ಧನರಾಜ್, ಪರೀಕ್ಷಾಂಗ ಕುಲಸಚಿವ ಡಾ.ಪಿ.ನಂಜುಂಡ ಸ್ವಾಮಿ, ಕಾಲೇಜಿನ ಪ್ರಾಂಶುಪಾಲ ಡಾ.ಸಿ.ನಟರಾಜು ಇನ್ನಿತರರು ಉಪಸ್ಥಿತರಿದ್ದರು.

## ಎಸ್.ಎಸ್.ಎಲ್.ಸಿ. ಪರೀಕ್ಷೆ ವಿದ್ಯಾರ್ಥಿಗಳಿಗೆ ಸಹಾಯವಾಣಿ

**ಜಿಲ್ಲಾಧಿಕಾರಿ ಶ್ರೀರೂಪ ಹೇಳಿಕೆ**


ಚಾಮರಾಜನಗರ, ಜಿಲ್ಲಾಡಳಿತದ ವತಿಯಿಂದ ಎಸ್.ಎಸ್.ಎಲ್.ಸಿ. ಪರೀಕ್ಷೆ ಬರೆಯುತ್ತಿರುವ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸಹಾಯವಾಣಿ ಆರಂಭಿಸಲಾಗಿದೆ.ಪ್ರತಿ ವಿಷಯಕ್ಕೂ ಐವರು ವಿಷಯವಾರು ಅನುಭವಿ ಶಿಕ್ಷಕರನ್ನೂ ಸಹಾಯವಾಣಿ ಮೂಲಕ ಮಾಹಿತಿ ನೀಡಲು ನಿಯೋಜಿಸಲಾಗಿದೆ. ಪರೀಕ್ಷಾ ಸಿದ್ದತೆ, ಪಾಠಗಳ ಸ್ಪಷ್ಟೀಕರಣ, ಸಂದೇಹ ನಿವಾರಣೆ ಮತ್ತು ಮಾರ್ಗದರ್ಶನಕ್ಕಾಗಿ ವಿದ್ಯಾರ್ಥಿಗಳು ಸಹಾಯವಾಣಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರನ್ನು ಕರೆ ಮಾಡಿ ಸಂಪರ್ಕಿಸಬಹುದು.

ಕನ್ನಡ ವಿಷಯಕ್ಕೆ ಶಿಕ್ಷಕರಾದ ಮಹೇಂದ್ರ (ಮೊಬೈಲ್ ಸಂಖ್ಯೆ 8549854524),ದೊರೆಸ್ವಾಮಿ(ಮೊಬೈಲ್ ಸಂಖ್ಯೆ 8431091573) ,ಮಲ್ಲೇಶ್(ಮೊಬೈಲ್ ಸಂಖ್ಯೆ 9620844189),ರಂಗೇಗೌಡ (ಮೊಬೈಲ್ ಸಂಖ್ಯೆ9740976881),ಶಿವಕುಮಾರ ಸ್ವಾಮಿ(ಮೊಬೈಲ್ ಸಂಖ್ಯೆ98867 10104) ಅವರನ್ನು ಸಂಪರ್ಕಿಸಹುದು. ಇಂಗ್ಲಿಷ್ ವಿಷಯಕ್ಕೆ ಶಿಕ್ಷಕರಾದ ನಾಗೇಶ್(ಮೊಬೈಲ್ ಸಂಖ್ಯೆ 9902039478),ಮಹದೇವ ಸ್ವಾಮಿ(ಮೊಬೈಲ್ ಸಂಖ್ಯೆ7892736494),ಲಿಂಗಯ್ಯ(ಮೊಬೈಲ್ ಸಂಖ್ಯೆ 866080 5445),ಮಹದೇವ ಸ್ವಾಮಿ (ಮೊಬೈಲ್ ಸಂಖ್ಯೆ9611106697),ಸುರೇಶ್ (ಮೊಬೈಲ್ ಸಂಖ್ಯೆ 9964374324) ಅವರನ್ನು ಸಂಪರ್ಕಿಸಬಹುದು. ಹಿಂದಿ ವಿಷಯಕ್ಕಾಗಿ ರೇಣುಕಾ(ಮೊಬೈಲ್ ಸಂಖ್ಯೆ 9980759268),ಶಿವಣ್ಣ. ಹೆಚ್.(ಮೊಬೈಲ್ ಸಂಖ್ಯೆ9449923403),ಮಹದೇವ್(ಮೊಬೈಲ್ ಸಂಖ್ಯೆ 9986564879),ಚಿಕ್ಕರಾಜು(ಮೊಬೈಲ್ ಸಂಖ್ಯೆ 9900260930),ಲಕ್ಷ್ಮಿ (ಮೊಬೈಲ್ ಸಂಖ್ಯೆ 9731030103) ಅವರನ್ನು ಸಂಪರ್ಕಿಸಬಹುದು.

ಗಣಿತ ವಿಷಯಕ್ಕಾಗಿ ಬಸವಲಿಂಗಪ್ಪ(ಮೊಬೈಲ್ ಸಂಖ್ಯೆ 8618218 343), ಲೋಕೇಶ್. ಡಿ.ಪಿ.(ಮೊಬೈಲ್ ಸಂಖ್ಯೆ 9901672083),ಚಂದ್ರಶೇಖರಯ್ಯ(ಮೊಬೈಲ್ ಸಂಖ್ಯೆ9591824317),ನಾಗಶಿಲ್ಪ(ಮೊಬೈಲ್ ಸಂಖ್ಯೆ 9913777015),ಮುರುಗೇಶ್ (ಮೊಬೈಲ್ ಸಂಖ್ಯೆ 9916777035) ಅವರನ್ನು ಸಂಪರ್ಕಿಸಬಹುದು. ವಿಜ್ಞಾನ ವಿಷಯಕ್ಕಾಗಿ ಹೇಮಚಂದ್ರ (ಮೊಬೈಲ್ ಸಂಖ್ಯೆ6363165050),ನಾರಾಯಣ್(ಮೊಬೈಲ್ ಸಂಖ್ಯೆ 9449361320),ಮಧುಸೂಧನ್(ಮೊಬೈಲ್ ಸಂಖ್ಯೆ 9902061787), ಮಂಜುಳ(ಮೊಬೈಲ್ ಸಂಖ್ಯೆ 8722963262),ಆಶಾ(ಮೊಬೈಲ್ ಸಂಖ್ಯೆ 9880272117) ಅವರನ್ನು ಸಂಪರ್ಕಿಸಬಹುದು. ಸಮಾಜ ವಿಜ್ಞಾನ ವಿಷಯಕ್ಕೆ ಶಿಕ್ಷಕರಾದ ಮಂಜುನಾಥ ಸ್ವಾಮಿ (ಮೊಬೈಲ್ ಸಂಖ್ಯೆ 9480366979),ರಾಘವೇಂದ್ರ (ಮೊಬೈಲ್ ಸಂಖ್ಯೆ 9980314542), ಶಿವರಾಜ್(ಮೊಬೈಲ್ ಸಂಖ್ಯೆ 9844089563),ರಾಜಮ್ಮ(ಮೊಬೈಲ್ ಸಂಖ್ಯೆ 7619425965), ಶೈಲಜಾ(ಮೊಬೈಲ್ ಸಂಖ್ಯೆ 7338411983) ಅವರನ್ನು ಸಂಪರ್ಕಿಸಬ ಹುದು. ತಾಲೂಕವಾರು ನೋಡಲ್ ಅಧಿಕಾರಿಗಳನ್ನು ಸಹ ನಿಯೋಜನೆ ಮಾಡಲಾಗಿದೆ.ಚಾಮರಾಜನಗರ ತಾಲೂಕಿಗೆ ಪರಶಿವ 'ಮೂರ್ತಿ (ಮೊಬೈಲ್ ಸಂಖ್ಯೆ 9844240296),ಗುಂಡ್ಲುಪೇಟೆ ತಾಲೂಕಿಗೆ ರಮೇಶ್. ಆರ್.(ಮೊಬೈಲ್ ಸಂಖ್ಯೆ 9986463714),ಹನೂರು ತಾಲೂಕಿಗೆ ಅಶೋಕ್ (ಮೊಬೈಲ್ ಸಂಖ್ಯೆ 9916749180),ಕೊಳ್ಳೇಗಾಲ ತಾಲೂಕಿಗೆ ವಿಜಯ್ ಕುಮಾರ್ (ಮೊಬೈಲ್ ಸಂಖ್ಯೆ 9986601816),ಯಳಂದೂರು ತಾಲೂಕಿಗೆ ಕುಮಾರ್.ಎಂ.(ಮೊಬೈಲ್ ಸಂಖ್ಯೆ 7892424019)ಅವರು ನೋಡಲ್ ಅಧಿಕಾರಿಗಳಾಗಿರುತ್ತಾರೆ.

# ಹಾಸ್ಟೆಲ್‌ಗಳಲ್ಲಿ ಮೂಲಸೌಕರ್ಯ ಒದಗಿಸಿ

## ಹಾಸ್ಟೆಲ್, ವಸತಿ ನಿಲಯಗಳಿಗೆ ಭೇಟಿನೀಡಿ ಪರಿಶೀಲಿಸಿ: ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ವಿನೋತ್ ಪ್ರಿಯಾ ಸೂಚನೆ



ಚಾಮರಾಜನಗರ: ವಿವಿಧ ಇಲಾಖೆಗಳಡಿ ನಿರ್ವಹಣೆಯಾಗುತ್ತಿರುವ ವಿದ್ಯಾರ್ಥಿನಿಲಯ, ವಸತಿ ಶಾಲೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು ವ್ಯಾಪಕವಾಗಿ ಭೇಟಿ ನೀಡಿ ಗುಣಮಟ್ಟದ ಆಹಾರ, ಮೂಲ ಸೌಕರ್ಯಗಳು ತಲುಪುತ್ತಿರುವ ಬಗ್ಗೆ ಪರಿಶೀಲಿಸಬೇಕೆಂದು ಪಶು ಪಾಲನೆ ಮತ್ತು ಮೀನುಗಾರಿಕೆ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳು ಹಾಗೂ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಆರ್.ವಿನೋತ್ ಪ್ರಿಯಾ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ನಡೆದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯ ಅದ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಸಮಾಜ ಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವ್ಯಾಪ್ತಿಗೆ ಬರುವ ಹಾಸ್ಟಲ್, ಆಶ್ರಮ ಶಾಲೆ, ವಸತಿ ಶಾಲೆಗಳಿಗೆ ಆಯಾ ಇಲಾಖೆಯ ಹಿರಿಯ ಅಧಿಕಾರಿಗಳು ಭೇಟಿಕೊಟ್ಟು ಅಲ್ಲಿ ನೀಡಲಾಗುತ್ತಿರುವ ಊಟ, ಉಪಹಾರ, ಇನ್ನಿತರೆ ಮೂಲ ಸೌಲಭ್ಯಗಳ ಬಗ್ಗೆ ಸಮಗ್ರವಾಗಿ ಪರಿಶೀಲನೆ ಮಾಡಬೇಕು. ಭೇಟಿ ಮಾಡಿದ ವರದಿಯನ್ನು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಲ್ಲಿಸಬೇಕು ಎಂದರು.

ಹಾಸ್ಟಲ್, ವಸತಿ ಶಾಲೆಗಳಿಗೆ ದಾಖಲಾದ ಮೇಲೆ ವಿದ್ಯಾರ್ಥಿಗಳ ಹಾಜರಾತಿಯನ್ನು ಗಮನಿಸಬೇಕು. ವಿದ್ಯಾರ್ಥಿಗಳು ಗೈರು ಹಾಜರಾದರೆ ಅಥವಾ ಹೊರಗುಳಿದಿದ್ದರೆ ಇದಕ್ಕೆ ಇರಬಹುದಾದ ಕಾರಣಗಳನ್ನು ತಿಳಿದುಕೊಳ್ಳಬೇಕು. ಸಮಸ್ಯೆಗಳಿದ್ದಲ್ಲಿ ತಿಳಿದು ಪರಿಹರಿಸಬೇಕು. ಎಂದು ಉಸ್ತುವಾರಿ ಕಾರ್ಯದರ್ಶಿಗಳು ತಿಳಿಸಿದರು.

ಈ ಹಿಂದಿನ ವರ್ಷದ ಎಸ್.ಎಸ್.ಎಲ್.ಸಿ, ಪಿಯುಸಿ ಫಲಿತಾಂಶದ ವಿವರ ಪಡೆದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ವಿದ್ಯಾರ್ಥಿಗಳು ಉತ್ತಮ ಅಂಕಗಳೊಂದಿಗೆ ತೇರ್ಗಡೆಯಾಗಿ ಜಿಲ್ಲೆಗೆ ಉತ್ತಮ ಫಲಿತಾಂಶ ಬರಬೇಕು. ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಬೇಕು. ಶಾಲಾ ನೊಂದಣಿಯಲ್ಲಿ ಶೇ. 100ರಷ್ಟು ಪ್ರಮಾಣ ಇರಬೇಕು. ಮಕ್ಕಳ ಹಾಜರಾತಿ ಕುಂಠಿತವಾದರೆ ಅವರ ಪೋಷಕರನ್ನು ಭೇಟಿಮಾಡಿ ಮರಳಿ ಶಾಲೆಗೆ ಕರೆತಂದು ನಿರಂತರವಾಗಿ ಹಾಜರಾಗಲು ಉತ್ತೇಜಿಸಬೇಕು ಎಂದರು. ಅಂಗನವಾಡಿಗಳಲ್ಲಿ ಮಕ್ಕಳ ಆರೋಗ್ಯ ಹಾಗೂ ದೈಹಿಕ ಬೆಳವಣಿಗೆಯನ್ನು ಗಮನಿಸುವ ಕಾರ್ಯ ಪರಿಣಾಮಕಾರಿಯಾಗಿ ನಡೆಯಬೇಕು. ಮಕ್ಕಳ ಪೌಷ್ಠಿಕತೆ, ಆರೋಗ್ಯ ತಪಾಸಣೆಯಾಗಬೇಕು. ವಯಸ್ಸಿಗನುಗುಣವಾಗಿ ಮಕ್ಕಳು ಇರಬೇಕಾದ ತೂಕ, ಆರೋಗ್ಯ ಸ್ಥಿತಿಯನ್ನು ತಿಳಿಯಲು ವೈದ್ಯರಿಂದ ಕಾಲಕಾಲಕ್ಕೆ ಪರೀಕ್ಷಿಸಬೇಕು. ಅಪೌಷ್ಠಿಕತೆಯಿಂದ ಬಳಲುತ್ತಿರುವ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು ಎಂದು ಉಸ್ತುವಾರಿ ಕಾರ್ಯದರ್ಶಿಗಳು ತಿಳಿಸಿದರು. ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ, ಉಪ ವಿಭಾಗಾಧಿಕಾರಿ ದಿನೇಶ್ ಕುಮಾರ್ ಮೀನಾ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಡಿ.ಸಿ. ಶೃತಿ, ಇನ್ನಿತರರು ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

### ಕುಡಿಯುವ ನೀರಿನ ಸಮಸ್ಯೆಯಾಗದಿರಲಿ

**ಬೇಸಿಗೆ ಆರಂಭವಾಗಿದ್ದು ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಬೇಕು. ಸಮಸ್ಯಾತ್ಮಕ ಗ್ರಾಮಗಳಿಗೆ ವಿಶೇಷ ನಿಗಾ ವಹಿಸಿ ಪರ್ಯಾಯ ವಿಧಾನಗಳ ಮೂಲಕ ನೀರು ಪೂರೈಸಬೇಕು. ಟ್ಯಾಂಕರ್ ಗಳಲ್ಲಿ ನೀರು ಪೂರೈಸುವಾಗ ಪಾರದರ್ಶಕ ಕ್ರಮಗಳನ್ನು ಅನುಸರಿಸಬೇಕು. ನಗರ, ಪಟ್ಟಣ, ಗ್ರಾಮಾಂತರ ಪ್ರದೇಶ ಯಾವುದೇ ಇರಲಿ ಆಯಾ ಭಾಗದ ಅಧಿಕಾರಿಗಳು ಕುಡಿಯುವ ನೀರಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಆರ್. ವಿನೋತ್ ಪ್ರಿಯಾ ಅವರು ಸೂಚಿಸಿದರು.**

### ಸಮಸ್ಯೆ ಇದ್ದ ಕಡೆ ಕ್ರಮ

**ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಮಾತನಾಡಿ ಕುಡಿಯುವ ನೀರಿಗೆ ತೀವ್ರ ಸಮಸ್ಯೆ ಇರುವ ಗ್ರಾಮಗಳನ್ನು ಗುರುತಿಸಲಾಗಿದೆ. ಅಂತಹ ಕಡೆ ತುರ್ತು ಕ್ರಮಗಳನ್ನು ತೆಗೆದುಕೊಂಡು ನೀರು ಒದಗಿಸಬೇಕಿದೆ. ಮುಂಬರುವ ದಿನಗಳಲ್ಲಿ ಸಮಸ್ಯೆ ಎದುರಾಗಬಹುದಾದ ಗ್ರಾಮಗಳ ವಿವರ ಸಹ ಪಡೆಯಲಾಗುತ್ತಿದೆ ಎಂದರು.**

### ಕುಡಿಯುವ ನೀರಿನ ಯೋಜನೆ ಪೂರ್ಣಗೊಳಿಸಿ

**ಜಿಲ್ಲಾಧಿಕಾರಿ ಶ್ರೀರೂಪ ಅವರು ಮಾತನಾಡಿ ಅಮೃತ್ ಯೋಜನೆಯಡಿ ಕೈಗೆತ್ತಿಕೊಂಡಿರುವ ಕುಡಿಯುವ ನೀರಿನ ಯೋಜನೆಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ರಸ್ತೆಗಳಲ್ಲಿ ನೀರು ಹರಿಯದಂತೆ ದುರಸ್ತಿ ಕಾರ್ಯಗಳನ್ನು ಮಾಡಬೇಕು. ಎಲ್ಲಾ ಭಾಗಗಳಲ್ಲಿಯೂ ಸಮರ್ಪಕವಾಗಿ ನೀರು ಸರಬರಾಜು ಮಾಡಬೇಕು ಎಂದು ನಿರ್ದೇಶನ ನೀಡಿದರು.**



**ಪುರಸಭೆ ಕಾರ್ಯಾಲಯ, ಹೆಚ್.ಡಿ.ಕೋಟೆ, ಮೈಸೂರು ಜಿಲ್ಲೆ**

**E-Mail ID: itstaff_ulb_hdkote@yahoo.com Phone(O)/Fax: 08228-255327**

ನಂ:ಪು.ಕಾ.ಹೆ.ಕೋ/ಎಸ್‌ಎಫ್‌ಸಿ/ಜೆ.ಇ/ಸಿ.ಆರ್ 07/2025–26 ದಿನಾಂಕ: 23.02.2026

**ಟೆಂಡರ್ ಪ್ರಕಟಣೆ**

ಹೆಚ್.ಡಿ.ಕೋಟೆ ಪುರಸಭಾ ಅನುದಾನದಡಿ ನಿಯಮಗಳ ಅನ್ವಯ, ಎಸ್.ಎಫ್.ಸಿ, 15 ನೇ ಹಣಕಾಸು ಮತ್ತು ಪುರಸಭಾ ಅನುದಾನದಡಿ ಈ ಕೆಳಕಂಡ ಕಾಮಗಾರಿಯನ್ನು ನಿರ್ವಹಿಸಲು ಲೋಕೋಪಯೋಗಿ ಇಲಾಖೆಯಲ್ಲಿ ಚಾಲ್ತಿ ಸಾಲಿಗೆ ನೋಂದಾಯಿತ 04 ದರ್ಜೆಯ ಹಾಗೂ ಮೇಲ್ಪಟ್ಟ ಅರ್ಹ ಸಿವಿಲ್ ಗುತ್ತಿಗೆದಾರರಿಂದ ಕೆ.ಡಬ್ಲ್ಯೂ.ಯು–1 ಮತ್ತು ಕೆ.ಡಬ್ಲ್ಯೂ.ಯು–2 ನಿಯಮಗಳನ್ವಯ ಮತ್ತು 1999 ಹಾಗೂ 2000ರ ಪಾರದರ್ಶಕ ಕಾಯ್ದೆಗೆ ಒಳಪಟ್ಟು https://kppp.karnataka.gov.in ಪೋರ್ಟಲ್ ಮುಖಾಂತರ ಈ ಕೆಳಕಂಡ ಕಾಮಗಾರಿಗಳಿಗೆ ಟೆಂಡರ್ ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಗುತ್ತಿಗೆದಾರರು https://kppp.karnataka.gov.inನಿಂದ ಟೆಂಡರ್ ಷರತ್ತು ಹಾಗೂ ದಸ್ತಾವೇಜನ್ನು ಡೌನ್‌ಲೋಡ್ ಮಾಡಿಕೊಂಡು ಇ–ಪ್ರಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಟೆಂಡರ್‌ಗಳನ್ನು ಸಲ್ಲಿಸಬಹುದು. **1)** ಭರ್ತಿ ಮಾಡಿದ ಟೆಂಡರ್‌ನ್ನು ಸಲ್ಲಿಸುವ ಕಡೆಯ ದಿ: 10.03.2026 ಸಂಜೆ 5.30 ಗಂಟೆಯವರೆಗೆ. **2)** ಟೆಂಡರ್ ತೆರೆಯುವ ದಿ: 12.03.2026 ಬೆಳಿಗ್ಗೆ 11.00 ಗಂಟೆಗೆ ಅಥವಾ ಮುಂದೆ ಸೂಚಿಸುವ ದಿನಾಂಕದಂದು ತೆರೆಯಲಾಗುವುದು.


| ಕ್ರ. ಸಂ | ಕಾಮಗಾರಿಯ ಇಂಡೆಂಟ್ ಸಂಖ್ಯೆ | ಅಂದಾಜು ಮೊತ್ತ (ರೂ ಲಕ್ಷಗಳಲ್ಲಿ) | ಇ.ಎಂ.ಡಿ. ಮೊತ್ತ (ರೂ. ಗಳಲ್ಲಿ) | ಗುತ್ತಿಗೆದಾರರ ದರ್ಜೆ | ಮೀಸಲು |
|---|---|---|---|---|---|
| 1. | DMA:/2025-26/WS/Work_ Indent43525/CALL-2 | 500000 | 12,500.00 | 03ನೇ ದರ್ಜೆ ಅಥವಾ ಮೇಲ್ಪಟ್ಟು | ಸಾಮಾನ್ಯ |
| 2. | DMA:/2025-26/RD/Work_ Indent49085/CALL-2 | 270000 | 6,750.00 | 04ನೇ ದರ್ಜೆ ಅಥವಾ ಮೇಲ್ಪಟ್ಟು | ಸಾಮಾನ್ಯ |
| 3. | DMA:/2025-26/WS/Work_ Indent49076/CALL-2 | 180000 | 4,500.00 | 04ನೇ ದರ್ಜೆ ಅಥವಾ ಮೇಲ್ಪಟ್ಟು | ಸಾಮಾನ್ಯ |
| 4. | DMA:/2025-26/WS/Work_ Indent49073/CALL-2 | 167000 | 4,175.00 | 04ನೇ ದರ್ಜೆ ಅಥವಾ ಮೇಲ್ಪಟ್ಟು | ಸಾಮಾನ್ಯ |
| 5. | DMA:/2025-26/WS/Work_ Indent49058/CALL-2 | 250000 | 6,250.00 | 04ನೇ ದರ್ಜೆ ಅಥವಾ ಮೇಲ್ಪಟ್ಟು | ಸಾಮಾನ್ಯ |
| 6. | DMA:/2025-26/WS/Work_ Indent49220/CALL-2 | 2025000 | 20,250.00 | 03ನೇ ದರ್ಜೆ ಅಥವಾ ಮೇಲ್ಪಟ್ಟು | ಪ.ಜಾತಿ |
| 7. | DMA:/2025-26/WS/Work_ Indent43839/CALL-2 | 840000 | 10,500.00 | 03ನೇ ದರ್ಜೆ ಅಥವಾ ಮೇಲ್ಪಟ್ಟು | ಪ.ಪಂಗಡ |
| 8. | DMA:/2025-26/BD/Work_ Indent49084/CALL-2 | 87000 | 1100.00 | 04ನೇ ದರ್ಜೆ ಅಥವಾ ಮೇಲ್ಪಟ್ಟು | Cat -IIA |
| 9. | DMA:/2025-26/BR/Work_ Indent43526/CALL-2 | 300000 | 3750.00 | 04ನೇ ದರ್ಜೆ ಅಥವಾ ಮೇಲ್ಪಟ್ಟು | ಪ.ಜಾತಿ |
| 10 | DMA:/2025-26/BR/Work_ Indent43511/CALL-2 | 500000 | 6250.00 | 03ನೇ ದರ್ಜೆ ಅಥವಾ ಮೇಲ್ಪಟ್ಟು | Cat -I |
| 11 | DMA:/2025-26/WS/Work_ Indent49055/CALL-2 | 205000 | 2600.00 | 04 ನೇ ದರ್ಜೆ ಅಥವಾ ಮೇಲ್ಪಟ್ಟು | ಪ.ಜಾತಿ |
| 12 | DMA:/2025-26/OW/Work_ Indent49083/CALL-2 | 177000 | 4425.00 | 04 ನೇ ದರ್ಜೆ ಅಥವಾ ಮೇಲ್ಪಟ್ಟು | ಸಾಮಾನ್ಯ |

**ಸೂಚನೆ:** ಕಾರಣಾಂತರಗಳಿಂದ ಮೇಲೆ ತಿಳಿಸಿದ ಟೆಂಡರ್ ದಿನಾಂಕಗಳು ಮತ್ತು ಇತರೆ ಬದಲಾವಣೆಗಳಿದ್ದಲ್ಲಿ ಹಾಗೂ ಹೆಚ್ಚಿನ ವಿವರಗಳಿಗೆ ಗುತ್ತಿಗೆದಾರರು https://kppp.karnataka.gov.in/ ಪೋರ್ಟಲ್‌ನಲ್ಲಿ ನೋಡಿಕೊಳ್ಳುವುದು.

**ಸಹಿ/– ಮುಖ್ಯಾಧಿಕಾರಿ, ಪುರಸಭೆ, ಹೆಚ್.ಡಿಕೋಟೆ**

DIPR/DDMYS/1748/KSMCA/987/2025-26

# ಗೋಪಾಲಸ್ವಾಮಿ ದೇವಸ್ಥಾನ ನಿರ್ಮಾಣಕ್ಕೆ ಗುದ್ದಲಿಪೂಜೆ



ಗುಂಡ್ಲುಪೇಟೆ: ತಾಲ್ಲೂಕಿನ ಬೆಳವಾಡಿ ಗ್ರಾಮ ದಲ್ಲಿ ಅಂಗನವಾಡಿ ಕಟ್ಟಡ ನಿರ್ಮಾಣ ಹಾಗೂ ಪಟ್ಟಣದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಹೆಚ್ಚುವರಿ ಕೊಠಡಿ ನಿರ್ಮಾಣ ಮತ್ತು , ಯರಿಯೂರು ಗ್ರಾಮದಲ್ಲಿ ಗೋಪಾಲಸ್ವಾಮಿ ದೇವಸ್ಥಾನ ನಿರ್ಮಾಣಕ್ಕೆ ಶಾಸಕ ಎಚ್ ಎಂ ಗಣೇಶ ಪ್ರಸಾದ್ ಗುದ್ದಲಿಪೂಜೆ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು ತಾಲೂಕಿ ನಲ್ಲಿ ಸಾಕಷ್ಟು ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ ನಮ್ಮ ಸರ್ಕಾರದ ಆವದಿಯಲ್ಲಿ ನೂರಾರು ಕೋಟಿ ಅನುದಾನ ತಂದು ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿದ್ದೇನೆ ಎಂದರು

ವಿರೋಧ ಪಕ್ಷದವರ ಹೇಳಿಕೆಗೆ :–ಶಾಸಕ ಗಣೇಶ್ ಪ್ರಸಾದ್ ಪ್ರತಿಕ್ರಿಯೆ

ಅವರ ಕಲ್ಯಾಣ ಮಂಟಪಕ್ಕೆ ಹೋಗುವ ರಸ್ತೆ ಯನ್ನು ನಾನು ರೆಡಿ ಮಾಡಿಸಿದ್ದೇನೆ, ಅದ ಕ್ಕಿಂತ ದೊಡ್ಡ ಉದಾಹರಣೆಗೆ ಬೇಕೆ ಈ ಕ್ಷೇತ್ರದ ಜನತೆ ಅವರನ್ನು ಸ್ವೀಕರಿಸಲ್ಲ, ಹಾಗಾಗಿ ಇಲ್ಲಸಲ್ಲದ ಆರೋಪ ಮಾಡುತ್ತಿದ್ದಾರೆ .ಗ್ಯಾರಂಟಿ ಯೋಜನೆ ಮಾಡಿದ್ದರು ಸಹ ಅಭಿವೃದ್ಧಿ ಕಾರ್ಯಕ್ಕೆ ವೇಗ ಕೊಟ್ಟಿದ್ದಾರೆ, 475 ಕೋಟಿ ರೂ ಕೆರೆಗಳ ಅಭಿವೃದ್ಧಿ ಗೆ ನೀಡಿ ರೋದು ಡಿಸಿಎಂ ಖಾತೆಗೆ ಬರುತ್ತದೆ, ಇದರ ಬಗ್ಗೆ ಅರಣ್ಯ ಮತ್ತು ಕಂದಾಯ ಇಲಾಖೆ ಯವರು ಸರ್ವೆ ಮಾಡುತ್ತಿದ್ದಾರೆ , ಬಜೆಟ್ ನಂತರ ನೂರಹತ್ತು ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಕಾಮಗಾರಿಗಚಾಲನೆ ನೀಡಲಾಗುವುದು ಎಂದರು

ನಾನು ಅಧಿಕಾರಕ್ಕೆ ಬಂದು ಎರಡು ವರ್ಷ ಒಂಬತ್ತು ತಿಂಗಳು ಆಗಿದೆ ನಾನು ಸುಳ್ಳು ಭರವಸೆ ನೀಡುವುದಿಲ್ಲ ಸುಳ್ಳು ಹೇಳುವುದಿಲ್ಲ ಪಿಡಬ್ಲ್ಯೂಡಿ ಎಸ್ಸಿ ಎಸ್ಟಿ ಟಿ ಎಸ್ ಪಿ ಯಿಂದ 40 ಕೋಟಿ ಅನುದಾನ ತಂದಿದ್ದೇನೆ, ಮುಖ್ಯಮಂತ್ರಿ ಗಳ ವಿಶೇಷ ಅನುದಾನದಲ್ಲಿ 25 ಕೋಟಿ ಯಲ್ಲಿ ಸಾಮಾನ್ಯವರ್ಗ ರಸ್ತೆಗಳ ಅಭಿವೃದ್ಧಿಯಾಗಿದೆ, ಮತ್ತೆ ಹೆಚ್ಚುವರಿ 10 ಕೋಟಿ ಅನುದಾನ ತಂದಿದ್ದೇನೆ, ಹತ್ತಿ ಮಾರುಕಟ್ಟೆ, ಮೊರಾರ್ಜಿ ದೇಸಾಯಿ ವಸತಿ ಶಾಲೆ, ಅಂಬೇಡ್ಕರ್ ವಸತಿ ಶಾಲೆ, ಅಂಗನ ವಾಡಿ ಕಟ್ಟಡಗಳು, ಶಾಲೆಗಳ ಕಟ್ಟಡಗಳು, ವಾಲ್ಮೀಕಿ ಭವನ, ಅಂಬೇಡ್ಕರ್ ಭವನ ಕ್ಕೆ ತಲಾ ಒಂದು ಕೋಟಿ ಅನುದಾನ ತಂದಿದ್ದೇನೆ ಎಂದರು. ಬಿಇಒ ಟಿಆರ್ ಸ್ವಾಮಿ. ಬಿ ಆರ್ ಸಿ, ಟಿಸರೋಜ.ಚಂದ್ರಶೇಖರ , ಚಿದಾನಂದ, ಜಿ ಮಧುಸೂದನ್ ಸಾಹುಲ್,ಮಂಜುನಾಥ್, ಅಣ್ಣಯ್ಯಸ್ವಾಮಿ, ಲೋಕೇಶ್, ಮೋಹನ್, ಶಂಕರ, ನಾಗರಾಜು, ಕಾರ್ಮಿಕ ಇಲಾಖೆ ನಾರಾಯಣಸ್ವಾಮಿ ಇದ್ದರು

# ಸಫಾರಿ ನಿಲ್ಲಿಸಲು ಆಗ್ರಹ: ರೈತರ ಹೋರಾಟ



ಮೈಸೂರು: ಕಬಿನಿಯ ಬಂಡಿಪುರ, ನಾಗರಹೊಳೆ ಭಾಗದಲ್ಲಿ ಸಫಾರಿ ಪುನರ್ ಆರಂಭಿಸಿರುವುದು ವಿರೋಧಿಸಿ ವಿವಿಧ ರೈತ ಪರ ಸಂಘಟನೆಗಳು ಬೃಹತ್ ಪ್ರತಿಭಟನೆಯೊಂದಿಗೆ ಅನಿರ್ಧಿಷ್ಟಾವಧಿ ಮುಷ್ಕರ ಪ್ರಾರಂಭಿಸಿವೆ.

ರಾಜ್ಯ ರೈತ ಸಂಘಟನೆಗಳ ಒಕ್ಕೂಟ, ಸಾಮೂಹಿಕ ನಾಯಕತ್ವದ ರೈತ ಸಂಘ, ರಾಜ್ಯ ಕಬ್ಬು ಬೆಳೆಗಾರರ ಸಂಘ, ಸೇವ್ ಕಬಿನಿ ಸಮಿತಿ, ರೈತ ಪರ ದಲಿತಪರ, ಕನ್ನಡ ಪರ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಗನ್ ಹೌಸ್ ನಿಂದ ಡಿಸಿ ಕಚೇರಿವರೆಗೂ ನೂರಾರು ಮಂದಿ ಬೈಕ್ ರ್‍ಯಾಲಿ ನಡೆಸಿದರು. ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ಮಾತನಾಡಿ ಸಫಾರಿ ನಿಂತ ಮೇಲೆ ಕಾಡಿನ ಒಳಗೆ ಇರುವ ರೆಸಾರ್ಟ್ ಮಾಲೀಕರು ಸರ್ಕಾರಕ್ಕೆ ಬೇರೆ ಬೇರೆ ರೀತಿಯ ಒತ್ತಡವನ್ನು ಮಾಡಿ ಸಫಾರಿ ಆರಂಭಿಸಿದ್ದಾರೆ. ಸರ್ಕಾರ ತಾಂತ್ರಿಕ ಪರಿಣಿತರ ಸಮಿತಿ ರಚಿಸು ವಾಗ ಕಾಡಂಚಿನ ರೈತರ ಪರವಾಗಿ ಸಮಸ್ಯೆಯನ್ನು ಹೇಳಿಕೊಳ್ಳಲು ಯಾವ ರೈತ ಪ್ರತಿನಿಧಿಯೂ ಈ ಸಮಿತಿಯಲ್ಲಿ ಇರಲಿಲ್ಲ. ಈ ಸಮಿತಿಯವರು ಸಮಸ್ಯೆಯನ್ನು ಕೇಳಿಲ್ಲ. ರೆಸಾರ್ಟ್ ಮಾಲೀಕರಿಗೆ ಅನುಕೂಲವಾಗುವ ರೀತಿ ವರದಿ ನೀಡಿದ್ದಾರೆ. ಇದನ್ನು ಸರ್ಕಾರ ಪರಿಗಣಿಸಿ ಮತ್ತೆ ಸಫಾರಿ ಆರಂಭಕ್ಕೆ ಅನುಮತಿ ನೀಡಿದೆ. ಇದು ಸರಿಯಾದ ಕ್ರಮ ಅಲ್ಲ ಕಾಡಿನ ಒಳಗೆ ಇರುವ ರೆಸಾರ್ಟ್ ಮಾಲೀಕರು ಪ್ರಭಾವಿಗಳಾಗಿರುವ ಕಾರಣ ಸರ್ಕಾರಕ್ಕೆ ಒತ್ತಡ ತಂದು ಸಫಾರಿ ಆರಂಭಿಸಿದ್ದಾರೆಂದರು.

ನಗರ ಪ್ರದೇಶದಲ್ಲಿ ವಾಸ ಮಾಡುವ ಪ್ರಭಾವಿಗಳಿಗೆ ಕಾಡು ಪ್ರಾಣಿಗಳ ಸಮಸ್ಯೆ ಇರುವುದಿಲ್ಲ. ಆದರೆ, ರೈತರ ಕಷ್ಟವನ್ನು ಅರಿಯದೆ ಮೋಜಿಗಾಗಿ ಹಣ ಸಂಪಾದನೆಗ ಜನವಿರೋಧಿ ನೀತಿ ಜಾರಿಗೊಳಿಸಿರುವುದು ಸರಿಯಾದ ಕ್ರಮವಲ್ಲ. ಕೂಡಲೇ ಸಫಾರಿಯನ್ನು ನಿಲ್ಲಿಸಬೇಕು ಕಾಡಿನ ಒಳಗೆ ಇರುವ ರೆಸಾರ್ಟ್ ಗಳನ್ನು ಮುಚ್ಚಿಸಬೇಕು ಎಂದು ಒತ್ತಾಯಿಸಿದರು. ಸಾಮೂಹಿಕ ನಾಯಕತ್ವದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಹೊನ್ನೂರು ಪ್ರಕಾಶ್ ಮಾತನಾಡಿ, ಕಾಡಂಚಿನ ರೈತರ ರಕ್ಷಣೆಗಾಗಿ ಕಾಡಿನ ಒಳಗೆ ಸಫಾರಿ ನಿಲ್ಲಿಸಬೇಕು. ಸಫಾರಿ ನಿಲ್ಲಿಸಿದಾಗಿನಿಂದ ಕಾಡಂಚಿನಲ್ಲಿ ಯಾವುದೇ ಪ್ರಾಣಿಗಳು ಹೊರಗೆ ಬಂದು ಪ್ರಾಣ ಹಾನಿ ಅಥವಾ ಬೆಳೆ ಹಾನಿ ಮಾಡಿಲ್ಲ. ಈಗ ಮತ್ತೆ ಸಫಾರಿ ಆರಂಭಿಸಿರುವುದರಿಂದ ಮತ್ತೆ ಕಾಡು ಪ್ರಾಣಿಗಳ ಹಾವಳಿ ಹೆಚ್ಚಾಗಲಿದೆ. ಈ ಹಿನ್ನೆಲೆಯಲ್ಲಿ ಸಫಾರಿ ಪುನರ್ ಆರಂಭಿಸಿರುವುದು ಏಕಮುಖ ನಿರ್ಧಾರವಾಗಿದೆ. ಎಂದು ಹೇಳಿದರು. ಸಾಮೂಹಿಕ ನಾಯಕತ್ವದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಮಂಜುಕಿರಣ್, ವಕೀಲರಾದ ರವಿಕುಮಾರ್, ಹತ್ತಳ್ಳಿ ದೇವ ರಾಜ್, ಬರಡನಪುರ ನಾಗರಾಜ್, ಪಿ.ಸೋಮಶೇಖರ್, ಜೈ ಭೀಮ್ ಮಂಜುನಾಥ್, ಭಾಗವಹಿಸಿದ್ದರು.

## ಸಂಕ್ಷಿಪ್ತ ಸುದ್ದಿ

### ಕುರಿಮೇಕೆ ಘಟಕಗಳ ಅನುಷ್ಠಾನಕ್ಕೆ ಅರ್ಜಿ ಆಹ್ವಾನ

**ಮೈಸೂರು:** ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ವತಿಯಿಂದ ಖಅಕ ಮತ್ತು ಖಖಕ ಯೋಜನೆ ಅಡಿಯಲ್ಲಿ 10+1 ಕುರಿ/ಮೇಕೆ ಘಟಕಗಳ ವಿತರಣೆಗಾಗಿ ಅರ್ಜಿ ಆಹ್ವಾನಿಸಲಾಗಿದೆ.

18 ರಿಂದ 60 ವರ್ಷದೊಳಗಿನ ಪರಿಶಿಷ್ಟ ಜಾತಿ/ಪಂಗಡದ ಅರ್ಹ ರೈತರು ಮತ್ತು ಕೂಲಿ ಕಾರ್ಮಿಕರು ಅರ್ಜಿ ಸಲ್ಲಿಸಬಹುದು. ನಿಗದಿತ ನಮೂನೆಗಳನ್ನು ಚಾಮುಂಡಿಪುರಂನ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪಡೆದು, ಮಾರ್ಚ್ 10 ಸಂಜೆ 5 ಗಂಟೆಯೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಮೊಬೈಲ್: 9844916969 ಸಂಪರ್ಕಿಸಬಹುದು.

### ತರಬೇತಿ ಕಾರ್ಯಕ್ರಮ

ಮೈಸೂರು: ನಾಗನಹಳ್ಳಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ವತಿಯಿಂದ ಮಾರ್ಚ್ 4 ರಂದು ದೇಸಿ ತಳಿಗಳ ಸಂರಕ್ಷಣೆ ಮತ್ತು ಉತ್ತೇಜನ ವಿಷಯದ ಒಂದು ದಿನದ ತರಬೇತಿ ಕಾರ್ಯಕ್ರಮ ನಡೆಯಲಿದೆ.

45 ರೈತ/ರೈತ ಮಹಿಳೆಯರಿಗೆ ಅವಕಾಶವಿದ್ದು, ಮೊದಲು ನೋಂದಣಿ ಮಾಡಿದವರಿಗೆ ಆದ್ಯತೆ. ಸಂಪರ್ಕ: 8277933116.

### ಅಪರಿಚಿತ ವ್ಯಕ್ತಿಯ ಶವ ಪತ್ತೆ

**ಮೈಸೂರು:** ಫೆಬ್ರವರಿ 15 ರಂದು ನಜರ್‌ಬಾದ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸುಮಾರು 45 ವರ್ಷದ ಅಪರಿಚಿತ ವ್ಯಕ್ತಿಯನ್ನು ಪ್ರಜ್ಞಾಹೀನ ಸ್ಥಿತಿಯಲ್ಲಿ ಪತ್ತೆಹಚ್ಚಿ ಕೆ.ಆರ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೆ ಫೆಬ್ರವರಿ 24 ರಂದು ಮೃತಪಟ್ಟಿದ್ದಾರೆ.

**ಚಹರೆ:** 5.6 ಅಡಿ ಎತ್ತರ, ಕಪ್ಪು ಮೈಬಣ್ಣ, ಮಿಶ್ರಿತ ಕಪ್ಪು-ಬಿಳಿ ಕೂದಲು, ಬಿಳಿ ಶರ್ಟ್, ಕಪ್ಪು ಪ್ಯಾಂಟ್ ಧರಿಸಿದ್ದವರು. ಮಾಹಿತಿ ಇದ್ದಲ್ಲಿ 112 ಅಥವಾ 0821-2418308 ಸಂಪರ್ಕಿಸಬಹುದು.

### ವಿದ್ಯುತ್ ವ್ಯತ್ಯಯ

**ಮೈಸೂರು:** ಫೆಬ್ರವರಿ 28 ರಂದು ಬೆಳಿಗ್ಗೆ 10 ರಿಂದ ಸಂಜೆ 5ರವರೆಗೆ 66/11 ಕೆವಿ ಜ್ಯೋತಿನಗರ ವಿದ್ಯುತ್ ವಿತರಣಾ ಕೇಂದ್ರದ ಕೆಎಂಎಫ್ ಫೀಡರ್ ವ್ಯಾಪ್ತಿಯಲ್ಲಿ ಭೂಗತ ಕೇಬಲ್ ಕಾಮಗಾರಿಯಿಂದ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಪ್ರಭಾವಿತ ಪ್ರದೇಶಗಳು: ರಾಯಲ್ ಮಾರ್ಟ್, ಧೃತಿ, ವಾಟಿಕಾ, ಬ್ರಿಗೇಡ್ ಅಪಾರ್ಟ್‌ಮೆಂಟ್, ಗೋಪಾಲಗೌಡ ಆಸ್ಪತ್ರೆ ಸುತ್ತಮುತ್ತ

### ಕುರಿ-ಮೇಕೆ ಘಟಕಗಳಿಗೆ ಅರ್ಜಿ

**ಮಂಡ್ಯ:** ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ವತಿಯಿಂದ 2025-26ನೇ ಸಾಲಿನ ಖಅಕ/ಖಖಕ ಯೋಜನೆಯಡಿ 10+1 ಕುರಿ/ಮೇಕೆ ಘಟಕಗಳ ಅನುಷ್ಠಾನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಈಖಗಃಖಖಖ ಖಳ ಹೊಂದಿರುವ ಅರ್ಹ ಪರಿಶಿಷ್ಟ ಜಾತಿ/ಪಂಗಡದ ಫಲಾನುಭವಿಗಳು ಮಾರ್ಚ್ 13ರೊಳಗೆ ಅರ್ಜಿ ಸಲ್ಲಿಸಬಹುದು.

## ಗುಣಮಟ್ಟದ ಕಾಮಗಾರಿಗಳಿಗೆ ಒತ್ತು: ಜಿ.ಪಂ. ಸಿಇಓ

# ಕಾಮಗಾರಿ ಪೂರ್ಣವಾಗದೆ ಬಿಲ್ ಪಾವತಿಸಿದರೆ ಕೇಸ್



ಮಂಡ್ಯ: ಲಿಂಕ್ ಡಾಕ್ಯೂಮೆಂಟ್‌ನಲ್ಲಿ 274 ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದ್ದು, 161 ಕಾಮಗಾರಿಗಳು ಪೂರ್ಣಗೊಂಡಿದ್ದು, 88 ಕಾಮಗಾರಿಗಳು ಪ್ರಗತಿಯಲ್ಲಿವೆ, ಪ್ರಗತಿಯಲ್ಲಿರುವ ಎಲ್ಲಾ ಕಾಮಗಾರಿಗಳನ್ನು ತುರ್ತಾಗಿ ಪೂರ್ಣಗೊಳಿಸಬೇಕು ಎಂದು ಜಿ.ಪಂ. ಸಿಇಓ ನಂದಿನಿ ಕೆ.ಆರ್. ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿ.ಪಂ.ನಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿ ಬದಲಾವಣೆ ಕಾಮಗಾರಿಗಳನ್ನು ಹೊರತುಪಡಿಸಿ ಉಳಿದ ಕಾಮಗಾರಿಗಳನ್ನು ಪೂರ್ಣಗೊಳಿಸಿ ಮಾರ್ಚ್ 10ನೇ ತಾರೀಖಿನೊಳಗೆ ವೆಚ್ಚ ಭರಿಸಬೇಕು ಎಂದು ಅಭಿಯಂತರರುಗಳಿಗೆ ಸೂಚಿಸಿದರು.

ಜಿ.ಪಂ. ಮತ್ತು ತಾ.ಪಂ. ಅಭಿವೃದ್ಧಿ ಅನುದಾನ: ಯಾವುದಾದರೂ ಕಾಮಗಾರಿಗಳಿಗೆ ಹೆಚ್ಚುವರಿ ಕಾಲಾವಕಾಶದ ಅವಶ್ಯಕತೆ ಇದ್ದಲ್ಲಿ, ಲಿಖಿತ ರೂಪದಲ್ಲಿ ಜಿಲ್ಲಾ ಪಂಚಾಯತ್ ಗೆ ಸಲ್ಲಿಸಬೇಕು. ಸದರಿ ಕಾಮಗಾರಿಗಳಿಗೆ ಎಷ್ಟು ಸಮಯಾವಕಾಶದ ಅವಶ್ಯಕತೆ ಎಂಬುದರ ಬಗ್ಗೆಯೂ ನಿಖರವಾಗಿ ತಿಳಿಸಬೇಕು, ಆ ಸಮಯದ ನಂತರ ಯಾವುದೇ ಕಾಲಾವಧಿ ವಿಸ್ತರಣೆ ಮಾಡಲಾಗುವುದುದಿಲ್ಲ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಕಾಮಗಾರಿಗಳ ಅನುಷ್ಠಾನ ಸಂದರ್ಭದಲ್ಲಿ ಯಾವುದಾದರೂ ಸಮಸ್ಯೆ ಇದ್ದಲ್ಲಿ ಸರಿಪಡಿಸಲು ತುರ್ತಾಗಿ ಕ್ರಮವಹಿಸಬೇಕು, ಒಂದು ವೇಳೆ ಸಮಸ್ಯೆ ಬಗೆಹರಿಸಲು ಸಾಧ್ಯವಾಗದಿದ್ದಲ್ಲಿ ಅಂತಹ ಕಾಮಗಾರಿಯನ್ನು ಬದಲಾವಣೆ ಮಾಡಲು ನಿಯಮಾನುಸಾರ ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದು ಸೂಚಿಸಿದರು.

ಆಯಾ ಇಲಾಖೆಯ ಅಧಿಕಾರಿಗಳು ಕಾಮಗಾರಿಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಪ್ರಗತಿ ಪರಿಶೀಲನೆ ಮಾಡಬೇಕು, ಕಾಮಗಾರಿಯ ಗುಣಮಟ್ಟದಲ್ಲಿ ಯಾವುದೇ ಸಮಸ್ಯೆಗಳು ಕಂಡುಬಂದಲ್ಲಿ ಕೂಡಲೇ ಸಂಬಂಧಪಟ್ಟ ಅಭಿಯಂತರರುಗಳ ಗಮನಕ್ಕೆ ತರಬೇಕು. ಯಾವುದೇ ಕಾಮಗಾರಿಗಳು ಬದಲಾವಣೆಯಾಗಬೇಕಿದ್ದಲ್ಲಿ ಸದರಿ ಕಾಮಗಾರಿಗಳನ್ನು ಆಯಾ ಇಲಾಖೆಯ ಮುಖ್ಯಸ್ಥರ ಗಮನಕ್ಕೆ ತಂದು ಬದಲಾವಣೆಗೆ ಪ್ರಸ್ತಾವನೆ ಸಲ್ಲಿಸಬೇಕು ಎಂದು ತಿಳಿಸಿದರು.

ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಎಲ್ಲಾ ಇಲಾಖೆಯ ತಾಲ್ಲೂಕುಮಟ್ಟದ ಅಧಿಕಾರಿಗಳು ಹಾಗೂ ಅಭಿಯಂತರರುಗಳ ಸಭೆ ಕರೆದು, ಕಾಮಗಾರಿವಾರು ಪರಿಶೀಲನೆ ನಡೆಸಿ ವರದಿ ಸಲ್ಲಿಸಬೇಕು. ಸದರಿ ವರದಿಯ ಆಧಾರದ ಮೇಲೆ ಮಾರ್ಚ್ 5ರಂದು ನಡೆಯುವ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪರಿಶೀಲಿಸಲಾಗುವುದು ಎಂದು ತಿಳಿಸಿದರು.

ಕಾಮಗಾರಿ ಪೂರ್ಣಗೊಳಿಸದೇ ಬಿಲ್ ಪಾವತಿಸುವುದು, ಸಾಮಾಗ್ರಿ ಸರಬರಾಜು ಆಗದಿದ್ದರೂ ಬಿಲ್ ಪಾವತಿಸುವುದು ಹಾಗೂ ಕಾಮಗಾರಿಯ ಗುಣಮಟ್ಟ ಪರಿಶೀಲಿಸದೇ ಅನುದಾನ ಪಾವತಿಸಿದಲ್ಲಿ ಸಂಬಂಧಪಟ್ಟ ಎಲ್ಲರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸುವ ಜೊತೆಗೆ ನಿಯಮಾನುಸಾರ ಶಿಸ್ತು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಯಾವುದೇ ಕಾಮಗಾರಿಗಳನ್ನು ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪಡೆಯದೇ ಅನುಷ್ಠಾನಗೊಳಿಸಬಾರದು, ಈ ನಿಟ್ಟಿನಲ್ಲಿ ಅವಶ್ಯಕತೆ ಇರುವ ಎಲ್ಲಾ ಅನುಮೋದನೆಗಳನ್ನು ಪಡೆಯುವ ಸಂಬಂಧ ಮುಖ್ಯ ಯೋಜನಾಧಿಕಾರಿಗಳ ಶಾಖೆಯಲ್ಲಿ ಅನುಸರಣೆ ಮಾಡಿ ಅನುಮೋದನೆಗಳನ್ನು ಪಡೆಯಬೇಕು, ಇಲ್ಲದಿದ್ದಲ್ಲಿ ಅಂತಹ ಇಲಾಖೆಯ ಅಧಿಕಾರಿಗಳನ್ನೇ ಜವಬ್ದಾರರನ್ನಾಗಿಸಲಾಗುವುದು ಎಂದು ಸೂಚಿಸಿದರು.

ತಾ.ಪಂ. ಅಭಿವೃದ್ಧಿ ಅನುದಾನವನ್ನು ಎಸ್.ಡಿ.ಎಂ.ಸಿಗಳಿಗೆ ವರ್ಗಾವಣೆ ಮಾಡಿದಲ್ಲಿ ಆಡಿಟ್ ಆಕ್ಷೇಪಣೆಯಾಗುವ ಸಂಭವವಿರುತ್ತದೆ ಎಂದು ಎಲ್ಲಾ ತಾಲ್ಲೂಕು ಪಂಚಾಯತ್ ಗಳ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದು, ಈ ಬಗ್ಗೆ ಎಲ್ಲಾ ಶಾಲೆಗಳಿಂದ ತುರ್ತಾಗಿ ಅಗತ್ಯವಿರುವ ಕಾಮಗಾರಿ ಅಥವಾ ಸಾಮಾಗ್ರಿಗಳ ಮಾಹಿತಿ ಪಡೆದು ವೆಚ್ಚ ಭರಿಸಲು ಸೂಚಿಸಲು ತಿಳಿಸಲಾಗಿದೆ.

ತಾಯಿ ಹಾಲಿನ ಬ್ಯಾಂಕ್ ಪೂರ್ಣಗೊಳಿಸಲು ಸೂಚನೆ: ಶೇಕಡ 40ರಷ್ಟು ಸಿವಿಲ್ ಕಾಮಗಾರಿಗಳು ಪೂರ್ಣಗೊಂಡಿದ್ದು, ಉಳಿದ ಸಿವಿಲ್ ಕಾಮಗಾರಿಯನ್ನು ನಿಗಧಿತ ಕಾಲಮಿತಿಯೊಳಗೆ ಗುಣಮಟ್ಟದ ಕಾಮಗಾರಿ ಅನುಷ್ಠಾನಗೊಳಿಸಬೇಕು ಹಾಗೂ ಒಂದು ಬಾರಿ ಕಾಮಗಾರಿ ಪೂರ್ಣಗೊಂಡ ನಂತರ ಪದೇ ಪದೇ ದುರಸ್ತಿ ಮಾಡುವಂತೆ ಕಾಮಗಾರಿ ನಿರ್ವಹಿಸಬಾರದು ಎಂದು ಸೂಚಿಸಿದರು.

ಮಿಡ್-ವೈಫರಿ ಲೆಡ್ ಕೇರ್ ಯುನಿಟ್ ಅನ್ನು ನಿರ್ಮಾಣ ಮಾಡುವ ಸಂಬಂಧ ಸ್ಥಳ ಅಂತಿಮಗೊಳಿಸಲಾಗಿದ್ದು, ಕಾಮಗಾರಿ ಪ್ರಾರಂಭಿಸಲಾಗಿದ್ದು, 25 ದಿನಗಳ ಕಾಲವಕಾಶ ಅವಶ್ಯಕತೆ ಇದೆ ಎಂದು ಕಾರ್ಯಪಾಲಕ ಅಭಿಯಂತರರು ಮಾಹಿತಿ ನೀಡಿದರು.

ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ವೈದ್ಯಕೀಯ ಅದೀಕ್ಷಕರು ಈ ಬಗ್ಗೆ ಕಾಲ ಕಾಲಕ್ಕೆ ಪರಿಶೀಲನೆ ಮಾಡಿ ಪ್ರಗತಿಯನ್ನು ಜಿ.ಪಂ.ಗೆ ಸಲ್ಲಿಸಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ (ಆಡಳಿತ) ಶಿವಲಿಂಗಯ್ಯ, ಉಪಕಾರ್ಯದರ್ಶಿ (ಅಭಿವೃದ್ಧಿ) ಲಕ್ಷ್ಮಿ ಪಿ, ಮುಖ್ಯ ಯೋಜನಾಧಿಕಾರಿ ಧನುಷ್ ಎಸ್, ಯೋಜನಾ ನಿರ್ದೇಶಕರಾದ ಸುಂದರ್ ರಾಜ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಅಭಿಯಂತರ ನಾಗರಾಜು ಸೇರಿದಂತೆ ಇತರೆ ಜಿಲ್ಲಾ ಮತ್ತು ತಾಲ್ಲೂಕುಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ಪರಿಶಿಷ್ಟರ ಮೇಲಿನ ದೌರ್ಜನ್ಯ ಪ್ರಕರಣಗಳಿಗೆ ಕಠಿಣ ಕ್ರಮ: ಡೀಸಿ




**ಮಂಡ್ಯ:** ಪರಿಶಿಷ್ಟರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಹಾಗೂ ಸಂತ್ರಸ್ತರಿಗೆ ನೀಡಲಾಗುವ ಪರಿಹಾರ ಹಣ ಮತ್ತು ಇತರ ಸೌಲಭ್ಯಗಳನ್ನು ವಿಳಂಬವಿಲ್ಲದೆ ಒದಗಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ ಕುಮಾರ ಅವರು ತಿಳಿಸಿದರು.

ಗುರುವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಮೇಲಿನ ದೌರ್ಜನ್ಯ ತಡೆ, ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನ ಸಂಬಂಧ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಉಪವಿಭಾಗ ಮಟ್ಟದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಕುಂದುಕೊರತೆಗಳ ಕುರಿತು ಜಾಗೃತಿ ಉಸ್ತುವಾರಿ ಸಮಿತಿ ಸಭೆಗಳನ್ನು ಕಡ್ಡಾಯವಾಗಿ ನಡೆಸಿ ಸಭೆಗಳಲ್ಲಿ ಸಲ್ಲಿಕೆಯಾಗುವ ದೂರುಗಳನ್ನು ಸ್ಥಳೀಯ ಮಟ್ಟದಲ್ಲೇ ಬಗೆಹರಿಸಲು ಪ್ರಯತ್ನಿಸಬೇಕು ಎಂದು ಹೇಳಿದರು. ಕುಂದುಕೊರತೆಗಳ ಸಭೆಯಲ್ಲಿ ಕೈಗೊಂಡ ಕ್ರಮಗಳ ಬಗ್ಗೆ ಜಿಲ್ಲಾಡಳಿತಕ್ಕೆ ವರದಿ ಸಲ್ಲಿಸಬೇಕೆಂದು ತಿಳಿಸಿದ ಅವರು, ಪ್ರತಿ ತಾಲ್ಲೂಕು ಮಟ್ಟದಲ್ಲಿ ಪರಿಶಿಷ್ಟ ಜಾತಿ ಹಾಗೂ ಪಂಗಡಗಳ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸಲು ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ತಿಳಿಸಿದರು.

## ಭ್ರಷ್ಟಾಚಾರ ತೊಲಗಿಸಲು ಸಜ್ಜಾಗೋಣ: ಅಭಿಮನ್ಯು ಮಣಿ.ಪಿ




**ಬಂಗಾರಪೇಟೆ:** ಸುಹೇಲ್ ದೇವ್ ಭಾರತೀಯ ಸಮಾಜ ಪಕ್ಷ (ಎಸ್.ಬಿ.ಎಸ್.ಪಿ) ಉತ್ತರ ಪ್ರದೇಶದಲ್ಲಿ ಓಂ ಪ್ರಕಾಶ್ ರಾಜ್ ಅವರ ಸಾರಥ್ಯದಲ್ಲಿ ಉದಯವಾಗಿದ್ದು, ಕರ್ನಾಟಕ ರಾಜ್ಯದ ಅಧ್ಯಕ್ಷರಾಗಿ ಅಭಿಮನ್ಯು ಮಣಿ.ಪಿ ಅವರನ್ನು ಆಯ್ಕೆ ಮಾಡಲಾಗಿದೆ.

ಬಂಗಾರಪೇಟೆ ನಗರದ ಹೊರವಲಯದಲ್ಲಿರುವ ಪಕ್ಷದ ಕಚೇರಿಯಲ್ಲಿ ಅಭಿಮಾನಿಗಳು, ಹಿತೈಷಿಗಳು ಹಾಗೂ ದಲಿತಪರ ಸಂಘಟನೆಗಳ ಮುಖಂಡರುಗಳು ಅಭಿಮನ್ಯು ಮಣಿ.ಪಿ ಅವರ ರಾಜ್ಯಾಧ್ಯಕ್ಷರಾಗಿ ಆಯ್ಕೆಯ ಹಿನ್ನೆಲೆ ಅಭಿನಂದನಾ ಕಾರ್ಯಕ್ರಮವನ್ನು ಹಮ್ಮಿಕೊಂಡು ಶುಭಾಶಯ ಕೋರಿದರು.

ಈ ವೇಳೆ ಮಾತನಾಡಿದ ರಾಜ್ಯಾಧ್ಯಕ್ಷ ಅಭಿಮನ್ಯು ಮಣಿ.ಪಿ ಅವರು, ಬಂಗಾರಪೇಟೆಯಲ್ಲಿ ಭ್ರಷ್ಟಾಚಾರ ಎಲ್ಲೆ ಮೀರಿದೆ.

ಈ ವ್ಯವಸ್ಥೆಯನ್ನು ಬದಲಾಯಿಸಲು ನಾವು ಎಲ್ಲರೂ ಒಗ್ಗಟ್ಟಾಗಿ ಸಜ್ಜಾಗಬೇಕು, ಎಂದು ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಮುಖಂಡರಾದ ಓಂ ಪ್ರಕಾಶ್, ಲಂಕೇ ಗೌಡ, ರಮಣ್ ಕುಮಾರ್, ಬನಹಳ್ಳಿ ಜಿ. ಚಿಕ್ಕನಾರಾಯಣ, ಪಿ.ವಿ.ಸಿ ಮಣಿ, ಬನಹಳ್ಳಿ ಜಿ. ರಾಮಚಂದ್ರ, ವರದಪುರ ಯಲ್ಲಪ್ಪ, ಮಾಗೊಂದಿ ನಾರಾಯಣಸ್ವಾಮಿ, ಸಕ್ಕನಹಳ್ಳಿ ಮುನಿರಾಜ್, ಖಾದ್ರಿಪುರ ಮಂಜುನಾಥ್, ಕೆರೆಕೋಡಿ ಮುನಿವೆಂಕಟಪ್ಪ, ಹೆಚ್.ಜಿ.ಪ್ರಕಾಶ್, ಹುಣಸನಹಳ್ಳಿ ವೆಂಕಟೇಶ್, ಬಾವರಹಳ್ಳಿ ಮುನಿಯಪ್ಪ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

# ಶ್ರೀ ಹುಣಸಮ್ಮ ತಾಯಿ ದೇವರ ಸಿಡಿ ಉತ್ಸವ ಫೆ.27ರಂದು ಹಾಗೂ ಫೆ.28ರಂದು ಜಾತ್ರಾ ಮಹೋತ್ಸವ


**ಕೆ.ಆರ್.ನಗರ:** ಸಾಲಿಗ್ರಾಮ ತಾಲೂಕಿನ ಮಿರ್ಲೆ ಗ್ರಾಮದ ಶ್ರೀ ಹುಣಸಮ್ಮ ತಾಯಿ ದೇವರ ಸಿಡಿ ಉತ್ಸವ ಫೆ.27ರಂದು ಹಾಗೂ ಫೆ.28ರಂದು ಜಾತ್ರಾ ಮಹೋತ್ಸವ ನಡೆಯಲಿದೆ.

ದೇವಸ್ಥಾನದ ಆಡಳಿತ ಮಂಡಳಿಯವರು ದೇವರ ಹಬ್ಬದ ಹಿನ್ನೆಲೆಯಲ್ಲಿ ಸಕಲ ಸಿದ್ಧತೆಗನ್ನು ನಡೆಸುತ್ತಿದ್ದಾರೆ.

ಶ್ರೀ ಹುಣಸಮ್ಮ ತಾಯಿಯ ಹಬ್ಬದ ಅಂಗವಾಗಿ ದೇವಸ್ಥಾನ, ಮಿರ್ಲೆ ಗ್ರಾಮ ಸೇರಿದಂತೆ ಸುತ್ತಮುತ್ತಲ ಗ್ರಾಮಗಳು ನವ ವಧುವಿನಂತೆ ಶೃಂಗಾರಗೊಳ್ಳುತ್ತಿವೆ. ದೇವಾಲಯದ ಸುತ್ತ ಸ್ವಚ್ಛತಾ ಕಾರ್ಯವು ಭರದಿಂದ ಸಾಗುತ್ತಿದೆ.

ಫೆ.27ರಂದು ಶ್ರೀ ಹುಣಸಮ್ಮ ತಾಯಿಯ ರಥೋತ್ಸವದ ಅಂಗವಾಗಿ ನವಗ್ರಾಮಗಳಲ್ಲಿ ಹಬ್ಬವು ನಡೆಯಲಿದ್ದು. ಈ ಹಬ್ಬಕ್ಕೆ ತವರಿಗೆ ಆಗಮಿಸುವ ಹೆಣ್ಣುಮಕ್ಕಳು ದೇವಸ್ಥಾನಕ್ಕೆ ತೆರಳಿ ದೇವರಿಗೆ ಮಡಿಲು ತುಂಬಿಸುವ ಶಾಸ್ತ್ರ, ತಂಬಿಟ್ಟಿನ ಆರತಿ ಮಾಡಿಸಿ ವಿಶೇಷ ಪೂಜೆ ಸಲ್ಲಿಸಿಸುತ್ತಾರೆ. ಇದು

ಹಿಂದಿನಿಂದಲೂ ಮಾಡಿಕೊಂಡು ಬರುತ್ತಿರುವ ಪದ್ಧತಿಯಾಗಿದೆ. ದೇವರಿಗೆ ಆರತಿ ಮಾಡಿ ಪೂಜೆ ಸಲ್ಲಿಸಿ ಮಹಾಮಂಗಳಾರತಿ ಮಾಡಿ ನಂತರ ಪ್ರಸಾದ ವಿನಿಯೋಗ ಮಾಡಲಾಗುತ್ತದೆ.



ಫೆ..28ರಂದು ಶ್ರೀ ಹುಣಸಮ್ಮ ತಾಯಿಯ ರಥೋತ್ಸವಕ್ಕೆ ನವಗ್ರಾಮಗಳಾದ ಮಿರ್ಲೆ,

ಹಳೆಮಿರ್ಲೆ, ನಾಟನಹಳ್ಳಿ, ಶಾಬಾಳು, ಕೊಡಿಯಾಲ, ಹನುಮನಹಳ್ಳಿ, ಬೀಚನಹಳ್ಳಿ, ಬೀಚನಹಳ್ಳಿಕೊಪ್ಪಲು, ನರಚನಹಳ್ಳಿ, ಮಾಳನಾಯಕನಹಳ್ಳಿ, ಮಾಳನಾಯಕನಹಳ್ಳಿ ಕೊಪ್ಪಲು ಗ್ರಾಮಗಳಿಂದ ಐದು ಸಿಡಿಗಳು ಮತ್ತು ನಾಲ್ಕು ರಥಗಳು ಆಗಮಿಸಲಿದ್ದು ನಂತರ ವಿಶೇಷ ಪೂಜೆ ಸಲ್ಲಿಸಿ ಮಿರ್ಲೆ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆಯು ನಡೆಯಲಿದೆ.

ಶ್ರೀ ಹುಣಸಮ್ಮ ತಾಯಿ ದೇವಾಲಯದ ಆವರಣಕ್ಕೆ ರಥವನ್ನು ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಎಳೆದು ತರಲಿದ್ದಾರೆ. ರಥೋತ್ಸವದ ದಿನದಂದು ದೇವಸ್ಥಾನದಲ್ಲಿ ಬೆಳಿಗ್ಗೆಯಿಂದಲೇ ವಿವಿಧ ಪೂಜಾ ಕಾರ್ಯಗಳು ನಡೆಯಲಿವೆ.

ಜಾತ್ರಾ ಮಹೋತ್ಸವ ಮುಗಿದ ನಂತರ ದೇವಸ್ಥಾನದ ಮುಂಭಾಗ ಇರುವ ಉಯ್ಯಾಲೆಯಲ್ಲಿ ಶ್ರೀ ಹುಣಸಮ್ಮ ತಾಯಿ ಆಟವಾಡುತ್ತಾಳೆ ಎಂಬ ನಂಬಿಕೆಯಿಂದ ರಾತ್ರಿ 8 ಗಂಟೆಯ ನಂತರ ದೇವಸ್ಥಾನದ ಕಡೆಗೆ ಯಾರು ಹೋಗುವುದಿಲ್ಲ. ಇದು ಹಿಂದಿನಿಂದ ನಡೆದುಕೊಂಡು ಬರುತ್ತಿರುವ ಪದ್ಧತಿಯಾಗಿದೆ.

ಸಿಡಿ ಉತ್ಸವ ಹಾಗೂ ಜಾತ್ರಾ ಮಹೋತ್ಸವದಲ್ಲಿ ಮೈಸೂರು, ಚಾಮರಾಜನಗರ, ಬೆಂಗಳೂರು, ಮಂಡ್ಯ, ರಾಮನಗರ, ಹಾಸನ, ಕೊಡಗು ಸೇರಿದಂತೆ ಹಲವು ಭಾಗಗಳಿಂದ ಸಾವಿರಾರು ಸಂಖ್ಯೆಯಲ್ಲಿ ಸಾರ್ವಜನಿಕರು ಪಾಲ್ಗೊಳ್ಳಲಿದ್ದಾರೆ.

## ಸುಸ್ಥಿರ ಕೃಷಿ ಟ್ರಸ್ಟ್‌ನಿಂದ ಸಮಗ್ರ ಕೃಷಿ ಜನಜಾಗೃತಿ ಅಭಿಯಾನ

**ಮಂಡ್ಯ:** ಸಮಗ್ರ ಸಾವಯವ ಸುಸ್ಥಿರ ಕೃಷಿ ಟ್ರಸ್ಟ್ ವತಿಯಿಂದ ಸಮಗ್ರ ಕೃಷಿ ಜನಜಾಗೃತಿ ಅಭಿಯಾನವನ್ನು ಮಾ.3ರಂದು ಬೆಳಿಗ್ಗೆ 10ರಿಂದ 4.30ರವರೆಗೆ ಮಳವಳ್ಳಿ ತಾಲೂಕಿನ ಕಿರುಗಾವಲು ಹೋಬಳಿಯ ಕಾಗೇಪುರ ಗ್ರಾಮದ ಲಕ್ಷ್ಮೀ ವೆಂಕಟೇಶ್ವರ ಸಮುದಾಯ ಭವನದಲ್ಲಿ ಆಯೋಜಿಸಲಾಗಿದೆ ಎಂದು ಟ್ರಸ್ಟ್‌ನ ಅಧ್ಯಕ್ಷ ಜೋಗಿಗೌಡ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೃಷಿ ಲಾಭದಾಯವಲ್ಲ ಎಂಬ ಎಂಬ ಮನಸ್ಥಿತಿಯಿಂದ ರೈತರು ಹೊರಬರಬೇಕಾಗಿದೆ. ಈ ನಿಟ್ಟಿನಲ್ಲಿ ಈ ಅಭಿಯಾನ ಆಯೋಜಿಸಲಾಗಿದೆ ಎಂದರು.

ಕಾರ್ಯಕ್ರಮವನ್ನು ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷ, ಶಾಸಕ ಪಿ.ಎಂ.ನರೇಂದ್ರಸ್ವಾಮಿ ಉದ್ಘಾಟಿಸುವರು. ಜಿ.ಪಂ ಸಿಇಓ ಕೆ.ಆರ್.ನಂದಿನಿ ಕೃಷಿ ತ್ಯಾಜ್ಯ ಪುನರ್ ಬಳಕೆ ಅಭಿಯಾನಕ್ಕೆ ಚಾಲನೆ ನೀಡುವರು, ಟ್ರಸ್ಟ್‌ನ ಅಧ್ಯಕ್ಷ ಜೋಗಿಗೌಡ ಅಧ್ಯಕ್ಷತೆ ವಹಿಸುವರು ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ತೋಟಗಾರಿಕೆ ಇಲಾಖೆಯ ಉಪನಿರ್ದೇಶಕಿ ಕೆ.ಎನ್.ರೂಪಶ್ರೀ, ಜಂಟಿ ಕೃಷಿ ನಿರ್ದೇಶಕ ವಿ.ಎಸ್.ಅಶೋಕ, ರೇಷ್ಮೆ ಉಪ ನಿರ್ದೇಶಕ ಎಸ್.ಸುಂದರ್, ಇಡಿಎಸ್ ಸುರೇಶ್, ರೇಷ್ಮೆ ಬೆಳೆಗಾರರ ಕ್ಷೇಮಾಭಿವೃದ್ಧಿ ಟ್ರಸ್ಟ್ ಅಧ್ಯಕ್ಷ ಕೆ.ಬಿ.ಶಿವಕುಮಾರ್, ಸಮಗ್ರ ಕೃಷಿಕ



ಬಿ.ರಾಧಾಕೃಷ್ಣ, ಸಮಗ್ರ ಸಾವಯವ ಸುಸ್ಥಿರ ಕೃಷಿ ಟ್ರಸ್ಟ್‌ನ ಖಜಾಂಚಿ ಡಿ.ಪಿ.ಧರ್ಮಲಿಂಗು, ಹಿರಿಯ ಸದಸ್ಯ ಎನ್.ಡಿ.ಹರಿಪ್ರಸಾದ್, ಮೈಕ್ರೋಬಿ ಫೌಂಡೇಷನ್ ಎ.ಜಿ.ಚಂದ್ರಶೇಖರ್ ಉಪಸ್ಥಿತರಿರುವರು ಎಂದರು.

ಬೆಳಿಗ್ಗೆ 11.30ಕ್ಕೆ ಕೃಷಿ ಸಂಬಂಧಿಸಿದ ಸಮಗ್ರ ಕೃಷಿ ಬೆಳೆ ಪದ್ಧತಿ ಹಾಗೂ ಮಾರುಕಟ್ಟೆ ವ್ಯವಸ್ಥೆ ಬಗ್ಗೆ ರೈತರು ಹಾಗೂ ಇಲಾಖೆ ಅಧಿಕಾರಿಗಳು ಹಾಗೂ ರೈತ ಮುಖಂಡರುಗಳ ಸಮ್ಮುಖದಲ್ಲಿ ಚರ್ಚಿಸಿ ರೈತರ ಜತೆ ಸಂವಾದ ಮಾಡಲಾಗುವುದು. ರಾಜ್ಯ ರೈತ ಮೋರ್ಚ ಪ್ರಧಾನ ಕಾರ್ಯದರ್ಶಿ ಡಾ.ಎಚ್.ವಿ.ನವೀನ್‌ಕುಮಾರ್, ಮೈಕ್ರೋಬಿ ಫೌಂಡೇಷನ್ ಸಾವಯವ ತಜ್ಞ ಡಾ.ಕೆ.ಆರ್. ಹುಲ್ಲುನಾಚೇಗೌಡ, ರೇಷ್ಮೆ ಇಲಾಖೆಯ ಜಂಟಿ ನಿರ್ದೇಶಕ ಬಿ.ಆರ್.ಪ್ರತಿಭಾ, ರೈತ ಹೋರಾಟಗಾರ ಹೊನ್ನೂರು ಪ್ರಕಾಶ್, ಸುವರ್ಣ ಸಾವಯವ ಕೃಷಿ ಸಂಘದ ಅಧ್ಯಕ್ಷ ಎಂ.ಎನ್.ಮಹೇಶ್‌ಕುಮಾರ್ ಭಾಗವಹಿಸುವರು ಎಂದು ವಿವರಿಸಿದರು.

ಮಧ್ಯಾಹ್ನ 2.30ಕ್ಕೆ ಸಮಾರೋಪ ಕಾರ್ಯಕ್ರಮ ನಡೆಯಲಿದ್ದು, ಮಾಜಿ ಉಪಮುಖ್ಯಮಂತ್ರಿ, ಶಾಸಕ ಡಾ.ಸಿ.ಎನ್. ಅಶ್ವಥ್ ನಾರಾಯಣ್ ಸಮಾರೋಪ ಭಾಷಣ ಮಾಡುವರು, ಭಗವಾನ್ ಬುದ್ಧ ಸಮೂಹ ಶಿಕ್ಷಣ ಸಂಸ್ಥೆಗಳ ಸಂಸ್ಥಾಪಕ ಡಾ.ಯಮದೂರು ಸಿದ್ದರಾಜು, ಮುಖ್ಯ ಅತಿಥಿಗಳಾಗಿ ನಿವೃತ್ತ ವಾಣಿಜ್ಯ ಅಧಿಕಾರಿ ಡಾ.ಸಿದ್ದರಾಮಯ್ಯ, ರೈತ ಮುಖಂಡ ಶ್ರೀನಿವಾಸ್, ಗ್ರೀನ್ ಲೈಫ್ ಕರಾಪ್ ಟೆಕ್ ಪ್ರೈ.ಲಿನ ವ್ಯವಸ್ಥಾಪಕ ನಿರ್ದೇಶಕ ವಸಂತ್‌ಕುಮಾರ್, ಎಚ್.ಆರ್. ಅಶೋಕ್‌ಕುಮಾರ್, ಜಯಸ್ವಾಮಿ, ಹಂದಿ ನಾಗಣ್ಣ, ಬಿ.ಪಿ.ಅಪ್ಪಾಜಿ, ಕೃಷ್ಣ, ಭಾಗವಹಿಸುವರು. ಜಿಲ್ಲಾ ಮಟ್ಟದ ಪ್ರಗತಿ ಪರ ರೈತರಾದ ಡಿ.ಚಿಕ್ಕಲಿಂಗಯ್ಯ, ಎಸ್.ಪುಟ್ಟಸ್ವಾಮಿ, ಎಸ್. ರಾಜಣ್ಣ, ಕೃಷ್ಣೇಗೌಡ, ತಾಲೂಕು ಮಟ್ಟದ ಪ್ರಗತಿ ಪರ ರೈತರಾದ ಮಹದೇವಯ್ಯ, ನಂಜುಂಡಸ್ವಾಮಿ, ಡಾಬಾ ನಾಗಣ್ಣ, ಬಿ.ಎಸ್.ಮಲ್ಲಿಕಾರ್ಜುನ, ಲೋಕೇಶ್, ಮಲ್ಲೇಶ್ ಅವರನ್ನು ಅಭಿನಂದಿಸಿ ಸನ್ಮಾನಿಸಲಾಗುವುದು ಎಂದು ಮಾಹಿತಿ ನೀಡಿದರು.

ಗೋಷ್ಠಿಯಲ್ಲಿ ಟ್ರಸ್ಟ್‌ನ ಸಹೆಗಾರ ಡಾ.ಯಮದೂರು ಸಿದ್ದರಾಜು, ತಾಲೂಕು ಸಂಚಾಲಕರಾದ ಅಶೋಕ್, ಶಶಿಕುಮಾರ್, ಸದಸ್ಯರಾದ ರಮೇಶ್, ವೈರಮುಡಿ ಇದ್ದರು.

## ಮಲ್ಲೈ ಮಹದೇಶ್ವರ ಸ್ವಾಮಿಯ 41ನೇ ಜಾತ್ರಾ ಮಹೋತ್ಸವ

**ಮಂಡ್ಯ:** ಮದ್ದೂರು ತಾಲೂಕಿನ ಕೊಪ್ಪ ಹೋಬಳಿಯ ಚೊಟ್ಟನಹಳ್ಳಿ ಗ್ರಾಮದಲ್ಲಿ ಮಲ್ಲೈ ಮಹದೇಶ್ವರ ಸ್ವಾಮಿಯ 41ನೇ ಜಾತ್ರಾ ಮಹೋತ್ಸವದ ಹಾಗೂ 5ನೇ ವರ್ಷದ ಬಾರಿ ದನಗಳ ಜಾತ್ರೆಯನ್ನು ಮಾ.9ರಿಂದ 5 ದಿನಗಳ ಕಾಲ ಆಯೋಜಿಸಲಾಗಿದೆ ಎಂದು ಜಾತ್ರಾ ಸಮಿತಿಯ ಜಿ.ಪಿ.ಮಹೇಶ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಿಗ್ಗೆ 5 ರಿಂದ ಜಾತ್ರೆಯ ಹಿನ್ನಲೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ. ಮಧ್ಯಾಹ್ನ 2 ಗಂಟೆಗೆ ಮಹಾಮಂಗಳಾರತಿ, ಸಂಜೆ 5ಕ್ಕೆ ಅನ್ನ ಸಂತರ್ಪಣೆ ನಡೆಯಲಿದೆ ಎಂದರು.

ಮಾ.9ರಂದು ಜಾತ್ರೆ ಆರಂಭಗೊಳ್ಳಲಿದೆ. 10ರ ರಾತ್ರಿ 12ರೊಳಗೆ ಬಹುಮಾನದ ಸ್ಪರ್ಧೆಯಲ್ಲಿ ಭಾಗವಹಿಸುವ ರಾಸುಗಳನ್ನು ಜಾತ್ರೆಯಲ್ಲಿ ಹಾಜರುಪಡಿಸತಕ್ಕದ್ದು, 11ರಂದು ದೇಶಹಳ್ಳಿ ಶ್ರೀಕೊಳ್ಳಿಕೊಡುಗೆ ಆದಿಶಕ್ತಿ ಬಸವಣ್ಣನವರ ಮೆರವಣಿಗೆ, 12ರಂಉದ ಜಾತ್ರಾಮಹೋತ್ಸವದ ಸಮಿತಿಯಿಂದ ಸ್ಪರ್ಧೆಯ ವಿಜೇತರ ರಾಸುಗಳ ಆಯ್ಕೆ. 13ರಂದು ಸ್ಪರ್ಧೆಯಲ್ಲಿ ವಿಜೇತ ರಾಸುಗಳಿಗೆ ಬಹುಮಾನ ವಿತರಣೆ ಮಾಡಲಾಗುವುದು ಎಂದು ಹೇಳಿದರು.

ಸ್ಪರ್ಧೆಯಲ್ಲಿ ಭಾಗವಹಿಸುವ ಎಲ್ಲ ರಾಸುಗಳಿಗೆ 500 ರೂ. ಪ್ರವೇಶ ಶುಲ್ಕ ಪಾವತಿಸಬೇಕು. ಸೀಮೆ ಗೂಳಿ ರಾಸುಗಳಿಗೆ



ಪ್ರಥಮ 10 ಸಾವಿರ, ದ್ವಿತೀಯ 7,500, ತೃತೀಯ 5 ಸಾವಿರ ಬಹುಮಾನ ನೀಡಲಿದ್ದು, ನಾಲ್ಕು ಹಲ್ಲು ಸೀಮೆ ಗೂಳಿ, ಆರು ಹಲ್ಲು ಸೀಮೆ ಗೂಳಿ, ಕಡೆ ಹಲ್ಲು ಸೀಮೆ ಗೂಳಿ ವಿಭಾಗಗಳಿಗೆ ಮೂರೂ ಪ್ರಶಸ್ತಿ ನೀಡಲಾಗುವುದು. ಹಳ್ಳಿಕಾರ್ ಎತ್ತುಗಳು ಹಾಗೂ ಹಳ್ಳಿಕಾರ್ ಹಸುಗಳಿಗೆ ಪ್ರಥಮ 20 ಸಾವಿರ, ದ್ವಿತೀಯ 15 ಸಾವಿರ, ತೃತೀಯ 7,500 ರೂ ಬಹುಮಾನ ನೀಡಲಿದ್ದು, ಹಲ್ಲು ಆಗದ ಕರುಗಳು ಹಾಗೂ ಕಡಸುಗಳು, ಎರಡು ಹಲ್ಲು ಕರುಗಳು ಹಾಗೂ ಕಡಸುಗಳು, ನಾಲ್ಕು ಹಲ್ಲು ಕಸುಗಳು ಹಾಗೂ ಕಡಸುಗಳು, ಆರು ಹಲ್ಲು ಎತ್ತುಗಳು ಹಾಗೂ ಹಸುಗಳ, ಕಡೆ ಹಲ್ಲು ಎತ್ತುಗಳು ಹಾಗೂ ಹಸುಗಳ ವಿಭಾಗಕ್ಕೆ ತಲಾ ಮೂರು ಪ್ರಶಸ್ತಿ, ಹಳ್ಳಿಕಾರ್ ಬೀಜದ ಹೋರಿಗಳಿಗೆ ಪ್ರಥಮ ಬಹುಮಾನ 10 ಸಾವಿರ, ದ್ವಿತೀಯ ಬಹುಮಾನ 5 ಸಾವಿರ ರೂಗಳಿರಲಿದ್ದು, ಆರು ಹಲ್ಲು ಹಳ್ಳಿಕಾರ್ ಹೋರಿಗೆ, ಕಡೆ ಹಲ್ಲು ಹಳ್ಳಿಕಾರ್ ಹೋರಿಗೆ ತಲಾ ಎರಡೂ ಬಹುಮಾನ ನೀಡಲಾಗುವುದು ಎಂದು ವಿವರಿಸಿದರು. ಹೆಚ್ಚಿನ ಮಾಹಿತಿಗೆ 6362155889, 9902894398, 9743022989, 9380760358, 9164396565,8050640756,7338556173, 9743723002, 7676959663 ಸಂಖ್ಯೆಯನ್ನು ಸಂಪರ್ಕಿಸುವಂತೆ ಮನವಿ ಮಾಡಿದರು.

ಗೋಷ್ಠಿಯಲ್ಲಿ ಯಶ್ವಂತ್, ಕೆಂಪಣ್ಣ, ಉಮೇಶ್, ಜೀವನ್‌ಗೌಡ, ಸೋಮೇಶ್ ಇದ್ದರು.

## ಜೆನ್‌ಝೀ ಹೋರಾಟ ಸಿದ್ದರಾಮಯ್ಯ ಆಡಳಿತ ವ್ಯವಸ್ಥೆಗೆ ಹಿಡಿದ ಕೈಗನ್ನಡಿ

**ಮಂಡ್ಯ:** ರಾಜ್ಯದಲ್ಲಿ ಉದ್ಯೋಗಕ್ಕಾಗಿ ನಡೆಯುತ್ತಿರುವ ಜೆನ್‌ಝೀ ಹೋರಾಟವು ಸಿದ್ದರಾಮಯ್ಯ ಅವರ ಆಡಳಿತ ವ್ಯವಸ್ಥೆಗೆ ಹಿಡಿದ ಕೈಗನ್ನಡಿಯಾಗಿದೆ ಎಂದು ಬಿಜೆಪಿ ರಾಜ್ಯ ವಕ್ತಾರ ಅಶೋಕ್‌ಕುಮಾರ್ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 16 ಬಜೆಟ್ ಮಂಡನೆ ಮಾಡಿದ್ದು, 17ನೇ ಬಜೆಟ್ ಮಂಡನೆಗೆ ಮುಂದಾಗಿದ್ದಾರೆ. ಅವರ ಬಜೆಟ್ ಮಂಡನೆಗೆ ಹಿಡಿದ ಕೈಗನ್ನಡಿಯೇ ಈ ಜೆನ್‌ಝೀ ಗಲಾಟೆ ಎಂದು ಬಣ್ಣಿಸಿದರು.

ಸಿದ್ದರಾಮಯ್ಯ ಅವರು 2013ರಿಂದ 2018ರವರೆಗೆ ಹಾಗೂ 2023ರಿಂದ ಪ್ರಸ್ತುತ ಮುಖ್ಯಮಂತ್ರಿಯಾಗಿದ್ದಾರೆ. ರಾಜ್ಯ ಸರಕಾರದಲ್ಲಿ 2013-18ರ ಅವಧಿಯಲ್ಲಿ ನಿವೃತ್ತಿ ಹೊಂದಿದ ಸರಕಾರಿ ಹುದ್ದೆಗಳ ನೇಮಕಾತಿಗೆ ಯಾವುದೇ ಕ್ರಮ ಕೈಗೊಂಡಿರಲಿಲ್ಲ. ಇದು ರಾಜ್ಯದಲ್ಲಿ ನಿರುದ್ಯೋಗ ಸಮಸ್ಯೆಗೆ ಪ್ರತಿಬಿಂಬವಾಗಿದೆ ಎಂದರು.

ರಾಜ್ಯದಲ್ಲಿ 7,85,000 ಉದ್ಯೋಗಗಳಿವೆ. 2018ರ ಮೇ.26ಕ್ಕೆ ಅವರ ಪದಚುತ್ಯದ ವೇಳೆಗೆ 1,73,000 ಉದ್ಯೋಗಗಳು ಭರ್ತಿಯಾಗದೇ ಉಳಿದಿದೆ. ನಂತರ 2018ರಲ್ಲಿ ಬಿಜೆಪಿ ಸರಕಾರಕ್ಕೆ ಕೋವಿಡ್ ಶಾಪಗ್ರಸ್ಥವಾಗಿ ಕಾಡಿತ್ತು. 26 ತಿಂಗಳು ಸಮಸ್ಯೆಗಳ್ನು ಎದುರಿಸಬೇಕಾಯಿತು. ಆದರೂ ಸರಕಾರಿ ನಿರುದ್ಯೋಗ ನಿವಾರಣೆಗೆ ಬಸವರಾಜ ಬೊಮ್ಮಾಯಿ ಅವಧಿಯಲ್ಲಿ 15 ಸಾವಿರ ಶಿಕ್ಷಕರು, ಕಲ್ಯಾಣ ಕರ್ನಾಟಕದಲ್ಲಿ 14 ಸಾವಿರ ನೇಮಾತಿ, 13 ಸಾವಿರ ಪೌರಕಾರ್ಮಿಕರನ್ನು ನೇರ ನೇಮಕ ಮಾಡಲಾಗಿತ್ತು ಎಂದು ಮಾಹಿತಿ ನೀಡಿದರು.




2011, 2014, ಹಾಗೂ 2017ನೇ ಅವಧಿಯಲ್ಲಿ ಬಾಕಿ ಇದ್ದ ಕೆಪಿಎಸ್‌ಸಿಯ ಹುದ್ದೆಗಳನ್ನು 2020ರಲ್ಲಿ ಬಿಜೆಪಿ ಸರಕಾರ ಭರ್ತಿ ಮಾಡಿತ್ತು. ರಾಜ್ಯದ ಪ್ರೌಢಶಾಲಾ ಶಿಕ್ಷಣ ಇಲಾಖೆಯಲ್ಲಿ 71 ಸಾವಿರ, ಆರೋಗ್ಯ-ವೈದ್ಯಕೀಯ ಇಲಾಖೆಯಲ್ಲಿ 37 ಸಾವಿರ, ಪೊಲೀಸ್ ಇಲಾಖೆಯಲ್ಲಿ 28 ಸಾವಿರ, ಉನ್ನತ ಶಿಕ್ಷಣ ಇಲಾಖೆಯಲ್ಲಿ 13 ಸಾವಿರ, ಕಾಂದಾಯ ಇಲಾಖೆಯಲ್ಲಿ 10 ಸಾವಿರ, ಗ್ರಾಮೀಣ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ 10 ಸಾವಿರ, ಪಶುಸಂಗೋಪನಾ ಇಲಾಖೆಯಲ್ಲಿ 11ಸಾವಿರ, ಕೃಷಿ ಇಲಾಖೆಯಲ್ಲಿ 6 ಸಾವಿರ, ಸಹಕಾರ ಇಲಾಖೆಯಲ್ಲಿ 8 ಸಾವಿರ, ಆರ್ಥಿಕ ಇಲಾಖೆಯಲ್ಲಿ 7ಸಾವಿರ, ಅರಣ್ಯ ಇಲಾಖೆಯಲ್ಲಿ 6ಸಾವಿರ, ಸಮಾಜ ಕಲ್ಯಾಣ ಇಲಾಖೆಯಲ್ಲಿ 9 ಸಾವಿರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಲ್ಲಿ 3 ಸಾವಿರ ಸೇರಿ ರಾಜ್ಯದಲ್ಲಿ 2.83 ಲಕ್ಷ ಸರಕಾರಿ ನೌಕರಿಗಳು ಖಾಲಿ ಇವೆ ಎಂದು ಅಂಕಿ ಅಂಶ ನೀಡಿದರು.

ರಾಜ್ಯದಲ್ಲಿ ವಾಣಿಜ್ಯ ತೆರಿಗೆ ಹೆಚ್ಚಳದಿಂದಾಗಿ ಉದ್ಯಮಗಳು ತೆರಿಗೆ ರಹಿತ, ಉಚಿತ ಸವಲತ್ತು ನೀಡುವ ತಮಿಳುನಾಡಿಗೆ ಮೊರೆ ಹೋಗುತ್ತಿದ್ದಾರೆ. ಟಾಟಾ ಮೊಬೈಲ್ ಉತ್ಪಾದನಾ ಘಟಕಕ್ಕೆ ಸೂಕ್ತ ಸೌಲಭ್ಯ ಕಲ್ಪಿಸದ ಕಾರಣ ತಮಿಳುನಾಡಿನ ಸರಕಾರ ಹೊಸೂರಿನಲ್ಲಿ 750 ಎಕರೆ ಸ್ಥಳ ನೀಡಿದ್ದು, 40 ಸಾವಿರ ಮಂದಿಗೆ ಉದ್ಯೋಗ ನೀಡಿದ ಸಂಸ್ಥೆಯು 2030ರೊಳಗೆ 3 ಲಕ್ಷ ಉದ್ಯೋಗ ನೀಡಲಿದೆ. ಇದರಿಂದ ರಾಜ್ಯಕ್ಕೆ ಉದ್ಯೋಗದ ನಷ್ಟವಾಗಿದೆ ಎಂದು ಆರೋಪಿಸಿದರು.

ರಾಜ್ಯದ ಸರಕಾರಿ ಉದ್ಯೋಗಿಗಳಾದ ವೇತನವನ್ನು ನೀಡುತ್ತಿಲ್ಲ. ಪೌರಕಾರ್ಮಿಕರು, ಶವಾಗಾರ ಸಿಬ್ಬಂದಿ, ವೈದ್ಯರು, ನರ್ಸಿಂಗ್, ಡಿ.ಗ್ರೂಪ್‌ನೌಕರರು, ಗ್ರಾಮೀಣ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಿಬ್ಬಂದಿಗೂ ವೇತನ ನೀಡಿಲ್ಲ. ರಾಜ್ಯಕ್ಕೆ ಇವರ ಆಡಳಿತದಲ್ಲಿ 78 ಸಾವಿರ ಕೋಟಿ ಆದಾಯ ಬಂದಿದೆ, 3.15 ಲಕ್ಷ ಕೋಟಿ ರೂ ಸಾಲ ಮಾಡಿರುವ ಹಣ ಎಲ್ಲಿ ಹೋಯಿತು. ಮಂತ್ರಿಗಳು ಹೋಟೆಲ್‌ನಲ್ಲಿ ಮೋಜು ಮಾಡಲು, ಜಾರಿಯಾಗದ ಗ್ಯಾರಂಟಿಗೆ ನೇಮಕ ಮಾಡಿರುವ ಕಾರ್ಯಕರ್ತರಿಗೆ ಹಣ ಪೋಲು ಮಾಡಲಾಗುತ್ತಿದೆ ಎಂದು ಖಂಡಿಸಿದರು.



ಸಿನಿಮಾ ವರದಿ: ಬಿ.ಜಿ.ರವಿಕುಮಾರ್



## ಮೋಷನ್ ಪೋಸ್ಟರ್ ನಲ್ಲಿ `ಶಿಖಂಡಿ'

ನಿರ್ದೇಶಕ ಗುರುಮೂರ್ತಿ ವಿ, ಈಗ ವಿಭಿನ್ನ ಕಥಾಹಂದರ ಹೊಂದಿರುವ "ಶಿಖಂಡಿ" ಚಿತ್ರವನ್ನು ನಿರ್ದೇಶಿಸಿದ್ದಾರೆ. ಪೋಲಾ ಪ್ರವೀಣ್ ಕುಮಾರ್ ಅವರು ಪೋಲಾ ಮೂವೀಸ್ ಮೂಲಕ ಈ ಚಿತ್ರವನ್ನು ನಿರ್ಮಿಸಿದ್ದಾರೆ. ಇತ್ತೀಚೆಗೆ ಈ ಚಿತ್ರದ ಮೋಷನ್ ಪೋಸ್ಟರ್ ಅನಾವರಣವಾಯಿತು. ನಿರ್ಮಾಪಕ ಸಂಜಯ್ ಗೌಡ ಹಾಗೂ ನಿರ್ದೇಶಕರಾದ ಜಡೇಶ್ ಕೆ ಹಂಪಿ, ನವೀನ್ ರೆಡ್ಡಿ "ಶಿಖಂಡಿ" ಚಿತ್ರದ ಮೋಷನ್ ಪೋಸ್ಟರ್ ಅನಾವರಣ ಮಾಡಿ ಚಿತ್ರತಂಡಕ್ಕೆ ಶುಭ ಕೋರಿದರು. ಚಿತ್ರ ಯಶಸ್ವಿಯಾಗಲೆಂದು ಹಾರೈಸಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

ಮಹಾಭಾರತದಲ್ಲಿ ಬರುವ "ಶಿಖಂಡಿ" ಪಾತ್ರವೇ ನಮ್ಮ ಚಿತ್ರದ ಕಥೆಗೆ ಸ್ಫೂರ್ತಿ ಎಂದು ಮಾತನಾಡಿದ ನಿರ್ದೇಶಕ ಗುರುಮೂರ್ತಿ, ಮಹಾಭಾರತದಲ್ಲಿ ಶಿಖಂಡಿ ಪುನರ್ಜನ್ಮ ಪಡೆದು ತನ್ನ ಸೇಡನ್ನು ತೀರಿಸಿಕೊಳ್ಳುವುದನ್ನು ನಾವೆಲ್ಲಾ ಕೇಳಿದ್ದೇವೆ. ಈ ಅಂಶವನ್ನೇ ಪ್ರಧಾನವಾಗಿಟ್ಟುಕೊಂಡು "ಶಿಖಂಡಿ" ಚಿತ್ರದ ಕಥೆ ಹೆಣೆಯಲಾಗಿದೆ. ಸಸ್ಪೆನ್ಸ್, ಥ್ರಿಲ್ಲರ್, ಹಾರಾರ್, ಕಾಮಿಡಿ ಸೇರಿದಂತೆ ಎಲ್ಲಾ ಅಂಶಗಳು ಇರುವ ಕೌಟುಂಬಿಕ ಕಥಾಹಂದರ ಹೊಂದಿರುವ ಚಿತ್ರವಿದು. ಕಥೆ ಕೇಳಿದ ತಕ್ಷಣ ಮೆಚ್ಚಿಕೊಂಡ ನಿರ್ಮಾಪಕ ಪೋಲಾ ಪ್ರವೀಣ್ ಕುಮಾರ್ ಅವರು ನಿರ್ಮಾಣಕ್ಕೆ ಮುಂದಾದರು. ತಂತ್ರಜ್ಞರ ಹಾಗೂ ಕಲಾವಿದರ ಸಹಕಾರದಿಂದ ಚಿತ್ರ ಚೆನ್ನಾಗಿ ಮೂಡಿಬಂದಿದೆ. ಚಿತ್ರೀಕರಣ ಮುಗಿದಿದೆ. ಮೋಷನ್ ಪೋಸ್ಟರ್ ಬಿಡುಗಡೆಯಾಗಿದೆ. ಮೇ ವೇಳೆಗೆ ಸಿನಿಮಾ ಬಿಡುಗಡೆ ಮಾಡುವ ಯೋಜನೆ ಇದೆ. ಮೋಷನ್ ಪೋಸ್ಟರ್ ಬಿಡುಗಡೆ ಮಾಡಿಕೊಟ್ಟ ಗಣ್ಯರಿಗೆ ಧನ್ಯವಾದ ಎಂದರು.

ನಾನು ಬಳ್ಳಾರಿಯವನು. ಇದು ಮೊದಲ ನಿರ್ಮಾಣದ ಚಿತ್ರ. ಚಿತ್ರ ನಿರ್ಮಾಣ ಮಾಡಲು ಎರಡು ಕಾರಣ. ಒಂದು ಕಥೆ . ಮತ್ತೊಂದು ವಿಶೇಷ ಚೇತನರಾಗಿದ್ದರೂ ನಿರ್ದೇಶಕ ಗುರುಮೂರ್ತಿ ಅವರಿಗೆ ಸಿನಿಮಾ ಮೇಲಿರುವ ಪ್ರೀತಿ. ಒಂದೊಳ್ಳೆ ಚಿತ್ರ ನಿಮ್ಮ ಮುಂದೆ ತರುತ್ತಿದ್ದೇವೆ. ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದು ನಿರ್ಮಾಪಕ ಪೋಲಾ ಪ್ರವೀಣ್ ಕುಮಾರ್ ತಿಳಿಸಿದರು. ಉತ್ತಮ ಪಾತ್ರದಲ್ಲಿ ನಟಿಸಿರುವುದಕ್ಕೆ ಖುಷಿಯಾಗಿದೆ ಎಂದು ನಟಿ ನಿಖಿತಾಸ್ವಾಮಿ ಹೇಳಿದರು.



## ವೀರ ಕಂಬಳ ಚಿತ್ರ ಫೆಬ್ರವರಿ 27 ರಂದು ತೆರೆಗೆ!

ದಕ್ಷಿಣ ಕನ್ನಡ ಭಾಗದ ಜೀವನಾಡಿಯಂತಿರುವ ಕಂಬಳದ ರೋಚಕ ವಿಚಾರಗಳನ್ನೊಳಗೊಂಡಿರುವ ಚಿತ್ರ 'ವೀರ ಕಂಬಳ'. ಹಿರಿಯ ನಿರ್ದೇಶಕ ರಾಜೇಂದ್ರ ಸಿಂಗ್ ಬಾಬು ನಿರ್ದೇಶನದಲ್ಲಿ ಮೂಡಿ ಬಂದಿರುವ ಈ ಸಿನಿಮಾ ಫೆಬ್ರವರಿ 27ರಂದು ರಾಜ್ಯಾದ್ಯಂತ ಬಿಡುಗಡೆ ಗೊಳ್ಳಲಿದೆ. ದೊಡ್ಡ ತಾರಾಗಣ, ಸಂಕೀರ್ಣವಾದ ಕಥೆ ಯಿರುವ ಈ ಸಿನಿಮಾ ತುಳುವಿನಲ್ಲಿ 'ಬಿರ್ದುದ ಕಂಬುಳ' ಎಂಬ ಶೀರ್ಷಿಕೆಯಲ್ಲಿ ತೆರೆಗಾಣಲಿರುವುದು ವಿಶೇಷ.



ದಕ್ಷಿಣ ಕನ್ನಡ ಭಾಗದಲ್ಲಿ ಗ್ರಾಮ್ಯ ಕ್ರೀಡೆಯಾಗಿದ್ದ ಕಂಬಳಕ್ಕೆ ಸರಿಸುಮಾರು ಎಂಟುನೂರು ವರ್ಷಗಳಿಗೂ ಹೆಚ್ಚಿನ ಇತಿಹಾಸವಿದೆ. ಎಪ್ಪತ್ತರ ದಶಕದ ಹೊತ್ತಿಗೆಲ್ಲ ದೊಡ್ಡ ಮಟ್ಟದಲ್ಲಿ ಕಂಬಳ ಆಯೋಜನೆ ಮಾಡುವ ಮೂಲಕ ತುಳುನಾಡಿನ ಈ ಕ್ರೀಡೆ ರಾಷ್ಟ್ರ ಮಟ್ಟದಲ್ಲಿ ಹೆಸರುವಾಸಿಯಾಗಿದೆ. ಪತ್ರಿಕೆಯಲ್ಲಿ ಪ್ರಕಟವಾಗಿದ್ದ ಕಂಬಳದ ಬಗೆಗಿನ ಲೇಖನವೊಂದನ್ನು ಓದಿ ಪ್ರಭಾವಿತರಾಗಿದ್ದ ರಾಜೇಂದ್ರ ಸಿಂಗ್ ಬಾಬು ಅವರು, ಪ್ರಾಜ್ಞರ ಸಲಹೆ ಸೂಚನೆ, ಮಾಹಿತಿ ಪಡೆದು, ಎರಡು ವರ್ಷಗಳ ಕಾಲ ಶ್ರಮ ವಹಿಸಿ ಈ ಕಥೆಯನ್ನು ಸಿದ್ಧಪಡಿಸಿದ್ದಾರೆ. ತುಳು ರಂಗಭೂಮಿಯ ಹೆಸರಾಂತ ನಿರ್ದೇಶಕ ವಿಜಯ್‌ಕುಮಾರ್ ಕೊಡಿಯಾಲ್‌ಬೈಲ್ ಚಿತ್ರಕಥೆ ಸಂಭಾಷಣೆಯ ಮೂಲಕ ಜೊತೆಯಾಗಿದ್ದಾರೆ.

ಈ ಚಿತ್ರವನ್ನು ಬಾಬಾ'ಸ್ ಬ್ಲೆಸಿಂಗ್ ಫಿಲ್ಮ್ಸ್ ಬ್ಯಾನರಿನಡಿಯಲ್ಲಿ ಡಾ. ವಿನಿತ ವಿಜಯ್ ಕುಮಾರ್ ರೆಡ್ಡಿ ಹಾಗೂ ಅರುಣ್ ರೈ ತೊಡಾರ್ ನಿರ್ಮಾಣ ಮಾಡಿದ್ದಾರೆ. ರಾಜೇಶ್ ಕುಡ್ಲ ಕಾರ್ಯಕಾರಿ ನಿರ್ಮಾಪಕರಾಗಿ ಜೊತೆಯಾಗಿದ್ದಾರೆ. ಪ್ರಕಾಶ್ ರೈ, ರವಿಶಂಕರ್ ಪ್ರಧಾನ ಪಾತ್ರಗಳಲ್ಲಿ ನಟಿಸಿದ್ದರೆ, ರಾಧಿಕಾ ನಾರಾಯಣ್ ವಿಶೇಷ ಪಾತ್ರಕ್ಕೆ ಜೀವ ತುಂಬಿದ್ದಾರೆ. ಈ ಚಿತ್ರದಲ್ಲಿ ನವೀನ್ ಪಡೀಲ್, ಗೋಪಿನಾಥ್ ಭಟ್, ಭೋಜರಾಜ್ ವಾಮಂಜೂರು ಸೇರಿದಂತೆ ಪ್ರಸಿದ್ಧ ತುಳು ರಂಗಭೂಮಿ ಹಿನ್ನೆಲೆಯ ನಟರು ನಟಿಸಿದ್ದಾರೆ. ಮಣಿಕಾಂತ್ ಕದ್ರಿ ಸಂಗೀತ ನಿರ್ದೇಶನ, ಆರ್.ಗಿರಿ ಛಾಯಾಗ್ರಹಣ, ಶ್ರೀನಿವಾಸ್ ಎಸ್ ಬಾಬು ಸಂಕಲನ, ಚಂದ್ರಶೇಖರ್ ಸುವರ್ಣ ಮುಲ್ಕಿ ಕಲಾ ನಿರ್ದೇಶನ, ಕಾಂತ ಪ್ರಸಾದನ ಹಾಗೂ ಭಾಷಾ ಅವರ ವಸ್ತ್ರವಿನ್ಯಾಸ ಈ ಚಿತ್ರಕ್ಕಿದೆ.

## 'ರಾಯರ ದರ್ಶನ ' ಟೀಸರ್ ಬಿಡುಗಡೆ



ಲಕ್ಷ್ಮೀ ಗಣೇಶ ಪ್ರೊಡಕ್ಷನ್ ಮತ್ತು ದಿ ನ್ಯೂ ಇಂಡಿಯನ್ ಟೈಮ್ಸ್ ಸಂಸ್ಥೆ ಪ್ರಸೆಂಟ್ಸ್ ನಲ್ಲಿ ಮಂತ್ರಾಲಯದ ಗುರು ರಾಘವೇಂದ್ರ ಸ್ವಾಮಿಗಳ ಆಲ್ಬಮ್ ಸಾಂಗ್ " ರಾಯರ ದರ್ಶನ " ದ ಟೀಸರ್ ಬಿಡುಗಡೆ ಮಾಡಲಾಯಿತು. ಪ್ರೊಡಕ್ಷನ್ ಸಂಸ್ಥೆ ಅಂದುಕೊಂಡಂತೆ ರಾಯರ ವರ್ಧಂತಿಯಂದೇ ಟೀಸರ್ ಹಾಗೂ ಪೋಸ್ಟರ್ ರಿಲೀಸ್ ಮಾಡಲಾಯಿತು.

ಮಂತ್ರಾಲಯದ ಈಗಿನ ಯತಿಗಳಾದ ಶ್ರೀ ಸುಬು ದೇಂದ್ರ ತೀರ್ಥರು ಟೀಸರ್ ಹಾಗೂ ಪೋಸ್ಟರ್ ರಿಲೀಸ್ ಮಾಡಿದರು.

ಈ ಸಂದರ್ಭದಲ್ಲಿ ನಟ ರಾಜ್ಯ ಸಭಾ ಸದಸ್ಯ ಜಗ್ಗೇಶ್, ಕಾಂತಾರ ಖ್ಯಾತಿಯ ರಿಷಭ್ ಶೆಟ್ಟಿ , ಲಕ್ಷ್ಮೀ ಗಣೇಶ ಹಾಗೂ ಟಿಎನ್ ಐಟಿ ಸಂಸ್ಥೆಯ ಎಂಡಿ ಸುಗುಣಾ ರಘು, ಸಿಇಓ ಆಗಿರುವ ರಘು ಭಟ್ ಉಪಸ್ಥಿತರಿದ್ದರು.

ಟೀಸರ್ ಹಾಗೂ ಪೋಸ್ಟರ್ ಬಿಡುಗಡೆ ಮಾಡಿ ಮಾತನಾಡಿದ ಸ್ವಾಮೀಜಿ ಒಂದು ಚಿತ್ರವನ್ನ ನೋಡಿ ಚನ್ನಾಗಿಲ್ಲ ಎನ್ನುವುದು ಸುಲಭ.

## ಹನುಮನ ಜನ್ಮಸ್ಥಳ ಅಂಜನಾದ್ರಿಯಲ್ಲಿ ರಿಷಬ್ ಶೆಟ್ಟಿ ನಟನೆಯ 'ಜೈ ಹನುಮಾನ್' ಚಿತ್ರಕ್ಕೆ ಅದ್ದೂರಿ ಚಾಲನೆ




ಬಹು ನಿರೀಕ್ಷಿತ ಪ್ಯಾನ್-ಇಂಡಿಯಾ ಚಿತ್ರ 'ಜೈ ಹನುಮಾನ್' ಚಿತ್ರದ ಚಿತ್ರೀಕರಣಕ್ಕೆ ಭಾನುವಾರ ಪವಿತ್ರ ತಾಣವಾದ ಹಂಪಿಯ ಸಮೀಪದ ಅಂಜನಾದ್ರಿ ಬೆಟ್ಟದಲ್ಲಿ ಅದ್ದೂರಿಯಾಗಿ ಚಾಲನೆ ನೀಡಲಾಯಿತು. ಹನುಮಂತನ ಜನ್ಮಸ್ಥಳವೆಂದೇ ಪ್ರಸಿದ್ಧಿಯಾಗಿರುವ ಈ ಪುಣ್ಯಕ್ಷೇತ್ರದಲ್ಲಿ ಚಿತ್ರತಂಡವು ವಿಶೇಷ ಪೂಜೆ ಸಲ್ಲಿಸುವ ಮೂಲಕ ಸಿನಿಮಾ ಪ್ರಕ್ರಿಯೆಗೆ ಚಾಲನೆ ನೀಡಿತು.

ಚಿತ್ರದ ನಾಯಕ ನಟ ರಿಷಬ್ ಶೆಟ್ಟಿ ಮತ್ತು ಪ್ರತಿಭಾವಂತ ನಿರ್ದೇಶಕ ಪ್ರಶಾಂತ್ ವರ್ಮ ಅವರು ದೈವಿಕ ಆಶೀರ್ವಾದವನ್ನು ಕೋರಿ ಶಾಸ್ತ್ರೋಕ್ತವಾಗಿ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಚಿತ್ರದ ತಾಂತ್ರಿಕ ವರ್ಗ ಹಾಗೂ ಚಿತ್ರರಂಗದ ಗಣ್ಯರು ಉಪಸ್ಥಿತರಿದ್ದು, ಒಂದು ಆಧ್ಯಾತ್ಮಿಕ ಮತ್ತು ಸಂಭ್ರಮದ ವಾತಾವರಣ ನಿರ್ಮಾಣವಾಗಿತ್ತು.

ಚಿತ್ರದ ಮೊದಲ ದೃಶ್ಯಕ್ಕೆ ಖ್ಯಾತ ನಿರ್ಮಾಪಕ ಭೂಷಣ್ ಕುಮಾರ್ ಅವರು ಕ್ಲಾಪ್ ಮಾಡುವ ಮೂಲಕ ಚಾಲನೆ ನೀಡಿದರೆ, ಹೆಸರಾಂತ ವಿತರಕ ಅನಿಲ್ ತಡಾನಿ ಅವರು ಕ್ಯಾಮೆರಾ ಸ್ವಿಚ್ ಆನ್ ಮಾಡಿದರು. ವಿಶೇಷವಾಗಿ, 'ಹನುಮಾನ್' ಚಿತ್ರದ ಯಶಸ್ವಿ ನಟ ತೇಜ ಸಜ್ಜ ಅವರು ಮೊದಲ ದೃಶ್ಯಕ್ಕೆ ಆ?ಯಕ್ಷನ್ ಕಟ್ ಹೇಳುವ ಮೂಲಕ ತಂಡಕ್ಕೆ ಶುಭ ಹಾರೈಸಿದರು.

ಕಾರ್ಯಕ್ರಮದ ಪ್ರಮುಖ ಘಟ್ಟವಾಗಿ ನಿರ್ಮಾಪಕರಾದ ನವೀನ್ ಯೆರ್ನೇನಿ, ರವಿಶಂಕರ್ ಯಲಮಂಚಿಲಿ, ಅನಿಲ್ ತಡಾನಿ ಮತ್ತು ಭೂಷಣ್ ಕುಮಾರ್ ಅವರು ಚಿತ್ರದ ಸ್ಕ್ರಿಪ್ಟ್ ಅನ್ನು ನಿರ್ದೇಶಕ ಪ್ರಶಾಂತ್ ವರ್ಮ ಅವರಿಗೆ ಹಸ್ತಾಂತರಿಸುವ ಮೂಲಕ ಅಧಿಕೃತವಾಗಿ ಚಿತ್ರದ ಕೆಲಸಗಳಿಗೆ ನಾಂದಿ ಹಾಡಿದರು.

**ಚಿತ್ರದ ತಾಂತ್ರಿಕ ವಿವರ:** ಈ ಪ್ಯಾನ್ ಇಂಡಿಯಾ ಚಿತ್ರದಲ್ಲಿ ರಿಷಬ್ ಶೆಟ್ಟಿ ನಾಯಕನಾಗಿ ನಟಿಸುತ್ತಿದ್ದರೆ, ಪ್ರಶಾಂತ್ ವರ್ಮ ನಿರ್ದೇಶನವಿರಲಿದೆ. ಆಸ್ಕರ್ ವಿಜೇತ ಸಂಯೋಜಕ ಎಂ. ಎಂ. ಕೀರವಾಣಿ ಅವರ ಸಂಗೀತ, ಎಸ್. ತಿರುನಾವಕ್ಕರಸು ಛಾಯಾಗ್ರಹಣವಿರಲಿದೆ.

ಮೈತ್ರಿ ಮೂವಿ ಮೇಕರ್ಸ್ ನಿರ್ಮಿಸುತ್ತಿರುವ ಈ ಚಿತ್ರವು 'ಪ್ರಶಾಂತ್ ವರ್ಮ ಸಿನಿಮಾಟಿಕ್ ಯುನಿವರ್ಸ್' (ಕಗಿಅಗ) ಅಡಿಯಲ್ಲಿ ಅದ್ದೂರಿ ವೆಚ್ಚದಲ್ಲಿ ಮೂಡಿಬರಲಿದೆ. ಹನುಮಂತನ ಪಾತ್ರದಲ್ಲಿ ರಿಷಬ್ ಶೆಟ್ಟಿ ಅವರನ್ನು ನೋಡಲು ಅಭಿಮಾನಿಗಳು ತುದಿಗಾಲಿನಲ್ಲಿ ಕಾಯುತ್ತಿದ್ದಾರೆ.





## `ಹಯಗ್ರೀವ' ಈ ವಾರ ತೆರೆಗೆ

ಕೆ.ವಿ.ಸಿ ಪ್ರೊಡಕ್ಷನ್ಸ್ ಲಾಂಛನದಲ್ಲಿ ಶ್ರೀಮತಿ ಪದ್ಮ ಸಮೃದ್ಧಿ ಮಂಜುನಾಥ್ ನಿರ್ಮಿಸಿರುವ, ರಘುಕುಮಾರ್ ಓ.ಆರ್ ನಿರ್ದೇಶನದ ಹಾಗೂ ಧನ್ವೀರ್ ನಾಯಕರಾಗಿ ನಟಿಸಿರುವ "ಹಯಗ್ರೀವ" ಚಿತ್ರ ಈ ವಾರ ಬಿಡುಗಡೆಯಾಗುತ್ತಿದೆ. ಚಿತ್ರದ ಟ್ರೇಲರ್ ಗೆ ಮೆಚ್ಚುಗೆ ಹರಿದು ಬರುತ್ತಿದೆ.

"ಹಯಗ್ರೀವ" ನಮ್ಮ ಸಂಸ್ಥೆಯ ಮೂರನೇ ಚಿತ್ರ ಎಂದ ನಿರ್ಮಾಪಕ ಸಮೃದ್ಧಿ ಮಂಜುನಾಥ್, ರಘುಕುಮಾರ್ ನಿರ್ದೇಶಿಸಿದ್ದ ಕಿರುಚಿತ್ರ ನೋಡಿದ್ದೆ. ಬಹಳ ಇಷ್ಟವಾಗಿತ್ತು. ಅವರ ನಿರ್ದೇಶನ ದಲ್ಲಿನ ಕನ್ನಡದಲ್ಲಿ ತೀರ ಅಪರೂಪದ ಕಥೆ ಇದು. ಪ್ರೇಕ್ಷಕ ಕೊಟ್ಟ ದುಡ್ಡಿಗೆ ಮೋಸವಾಗದ ಚಿತ್ರವಿದು. ಎಂದರು.

ನಿರ್ದೇಶಕ ರಘುಕುಮಾರ್ ಮಾತನಾಡಿ ನಮ್ಮ ಚಿತ್ರದ ಕಥೆಯನ್ನು ಇಂಡಿಯನ್ ಮೈಥಾಲಜಿನ್ನು ಪ್ರಮುಖವಾಗಿಟ್ಟುಕೊಂಡು ಹೆಣೆಯಲಾಗಿದೆ. ಈ ರೀತಿಯ ಕಥೆ ಕನ್ನಡದಲ್ಲಿ ಅಪರೂಪ ಎನ್ನಬಹುದು. ಧನ್ವೀರ್ ನಾಯಕರಾಗಿ ನಟಿಸಿರುವ ಈ ಚಿತ್ರದ ನಾಯಕಿಯಾಗಿ ಸಂಜನಾ ಆನಂದ್ ಅಭಿನಯಿಸಿದ್ದಾರೆ. ಸಾಧುಕೋಕಿಲ, ಶರತ್ ಲೋಹಿತಾಶ್ವ , ಶೋಭ್ ರಾಜ್, ಅಶ್ವಿನಿ ಗೌಡ, ಗಿಲ್ಲಿ ನಟ ಮುಂತಾದವರು ತಾರಾಬಳಗದಲ್ಲಿದ್ದಾರೆ. ಜ್ಯೂಡಾ ಸ್ಯಾಂಡಿ ಸಂಗೀತ ನಿರ್ದೇಶನ, ಗಿರೀಶ್ ಆರ್ ಗೌಡ ಛಾಯಾಗ್ರಹಣ ಹಾಗೂ ಕೆ.ಎಂ.ಪ್ರಕಾಶ್ ಸಂಕಲನವಿರುವ ಈ ಚಿತ್ರಕ್ಕೆ ಶೈಲೇಶ್ ಕುಮಾರ್ ಹಾಗೂ ಚೇತನ್ ಸಿದ್ ಸಂಭಾಷಣೆ ಬರೆದಿದ್ದಾರೆ ಎಂದರು. ಹಿರಿಯ ಕಲಾವಿದರ ಜೊತೆಗೆ ಅಭಿನಯಿಸಿದ್ದು ಬಹಳ ಖುಷಿಯಾಯಿತು. ಮೊದಲಿನಿಂದಲೂ ನೀವೆಲ್ಲರೂ ನೀಡುತ್ತಾ ಬಂದಿರುವ ಪ್ರೋತ್ಸಾಹ ಈ ಚಿತ್ರಕ್ಕೂ ಇರಲಿ ಎಂದರು.

ನಾಯಕಿ ಸಂಜನಾ ಆನಂದ್, ನಟ ಅಶ್ವಿನ್ ಹಾಸನ್ ಹಾಗೂ ನಟಿ ಆಶಾರಾಣಿ ಮಾತಾಡಿದರು



## ಮಾರ್ಚ್ 9 ರಂದು ತೆರೆಗೆ `ಗಾರ್ಜಿಯಸ್ ರಾಸ್ಕಲ್'

ಕನ್ನಡದಲ್ಲಿ ಹೊಸತಂಡದ ಹೊಸಪ್ರಯತ್ನವನ್ನು ಜನರು ಮೆಚ್ಚುಕೊಳ್ಳುತ್ತಿದ್ದಾರೆ. ಅದೇ ರೀತಿಯ ಹೊಸತಂಡವೊಂದರಿಂದ "ಗಾರ್ಜಿಯಸ್ ರಾಸ್ಕಲ್" ಎಂಬ ಚಿತ್ರ ಮೂಡಿಬಂದಿದೆ. ಇದೇ ಮಾರ್ಚ್ 6 ರಂದು ಚಿತ್ರ ತೆರೆಗೆ ಬರುತ್ತಿದೆ.

ಅದೃಷ್ಟಲಕ್ಷ್ಮೀ ಪ್ರೊಡಕ್ಷನ್ಸ್ ಲಾಂಛನದಲ್ಲಿ ಆರ್ ಚೇತನ್ ಕೃಷ್ಣ ಅವರು ಈ ಚಿತ್ರ ನಿರ್ಮಾಣ ಮಾಡಿದ್ದಾರೆ ಜೊತೆಗೆ ಸಂಗೀತವನ್ನು ಸಂಯೋಜಿಸಿದ್ದಾರೆ. ಚೇತನ್ ಕೃಷ್ಣ ಅವರು ಸಂಗೀತ ನೀಡಿರುವ ಎರಡು ಹಾಡುಗಳು ಈಗಾಗಲೇ ಬಿಡುಗಡೆಯಾಗಿದ್ದು, ತಮಿಳಿನ ಖ್ಯಾತ ಗಾಯಕ ವೇಲುಮುರುಗನ್ ಹಾಗೂ "ಸರಿಗಮಪ" ಖ್ಯಾತಿಯ ದರ್ಶನ್ ನಾರಾಯಣ್ ಹಾಡಿದ್ದಾರೆ. ಹಾಡುಗಳಿಗೆ ಕೇಳುಗರು ಫಿದಾ ಆಗಿದ್ದಾರೆ.

ಪ್ರಮೋದ್ ಜೋಯಿಸ್ ಕಥೆ, ಚಿತ್ರಕಥೆ ಬರೆದು ನಿರ್ದೇಶಿಸಿರುವ ಈ ಚಿತ್ರಕ್ಕೆ ಶಂಕು ಛಾಯಾಗ್ರಹಣ, ಅಕ್ಷಯ್ ಪಿ ರಾವ್ ಸಂಕಲನ, ನಂದು (ಕೆ.ಜಿ.ಎಫ್) ಅವರ ಶಬ್ದ ವಿನ್ಯಾಸ ಹಾಗೂ ಶ್ರೀನಿವಾಸ್ ಬೆಟ್ಟದಪುರ ಅವರ ಸಹ ನಿರ್ಮಾಣವಿದೆ. ಕ್ರಿಯೇಟಿವ್ ಹೆಡ್ ಆಗಿ ಚರಣ್ ಸುವರ್ಣ ಕಾರ್ಯ ನಿರ್ವಹಿಸಿದ್ದಾರೆ.

ಪ್ರೇರಣಾ ಭಟ್, ಯುವಿನ್, ರಾಜವೀರ್ ಸಿಂಗ್, ಚೇತನ್ ಮಹೇಶ್, ಶಕ್ತಿಕುಮಾರ್, ಸುನೀಲ್ ಪುರಾಣಿಕ್, ಸ್ವಾತಿ ಮುಂತಾದವರು ಚಿತ್ರದ ತಾರಾಬಳಗದಲ್ಲಿದ್ದಾರೆ.

ಶೀರ್ಷಿಕೆ ಯಿಂದಲೇ ಕುತೂಹಲ ಮೂಡಿಸಿರುವ ಹಾಗೂ ಡಾರ್ಕ್ ಕಾಮಿಡಿ ಕಥಾ ಹಂದರರದ ಜೊತೆಗೆ ನೋಡುಗರಿಗೆ ಬೇಕಾದ ಎಲ್ಲಾ ಅಂಶಗಳು ಇರುವ ನಮ್ಮ ಚಿತ್ರಕ್ಕೆ ಬೆಂಗಳೂರು ಹಾಗೂ ಮಹಾರಾಷ್ಟ್ರದಲ್ಲಿ ಚಿತ್ರೀಕರಣವಾಗಿದೆ. ಮಾರ್ಚ್ 6 ರಂದು "ಗಾರ್ಜಿಯಸ್ ರಾಸ್ಕಲ್" ತೆರೆಗೆ ಬರುತ್ತಿದೆ. ನನ್ನ ನಿರ್ಮಾಣದ ಮೊದಲ ಚಿತ್ರಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎನ್ನುತ್ತಾರೆ ನಿರ್ಮಾಪಕ ಹಾಗೂ ಸಂಗೀತ ನಿರ್ದೇಶಕ ಚೇತನ್ ಕೃಷ್ಣ ಆರ್.

## ಸೂಪರ್ ಹಿಟ್ ಚಿತ್ರ ಫೆಬ್ರವರಿ 27 ರಂದು ತೆರೆಗೆ!

ವಿ ಜಯಾನಂದ್ ನಿರ್ದೇಶನದಲ್ಲಿ ಮೂಡಿ ಬಂದಿರುವ, ಬಿಗ್ ಬಾಸ್ ವಿನ್ನರ್ ಗಿಲ್ಲಿನಟ ಮತ್ತು ಗೌರವ್ ಶೆಟ್ಟಿ ಮುಖ್ಯಭೂಮಿಕೆಯಲ್ಲಿರುವ 'ಸೂಪರ್ ಹಿಟ್' ಚಿತ್ರ ಫೆಬ್ರವರಿ 27ರಂದು ತೆರೆಗಾಣಲಿದೆ. ಇನ್ನೂರಕ್ಕೂ ಹೆಚ್ಚು ಚಿತ್ರಮಂದಿರಗಳಲ್ಲಿ ಅದ್ದೂರಿಯಾಗಿ ಪ್ರದರ್ಶನ ಆರಂಭಿಸಲಿರುವ ಸೂಪರ್ ಹಿಟ್ ಚಿತ್ರ ಈಗಾಗಲೇ ಟೀಸರ್, ಟ್ರೈಲರ್ ಮತ್ತು ಹಾಡುಗಳ ಮೂಲಕ ಪ್ರೇಕ್ಷಕರನ್ನು ಸೆಳೆದುಕೊಂಡಿದೆ.

ಕಾಮಿಡಿ ಸಸ್ಪೆನ್ಸ್ ಥ್ರಿಲ್ಲರ್ ಜಾನರಿನ ಈ ಸಿನಿಮಾ ಹಾಸ್ಯದ ರಸದೌತಣವನ್ನು ಉಣಬಡಿಸಲಿದೆ ಎಂಬ ಭರವಸೆಯನ್ನು ಚಿತ್ರತಂಡ ಹೊಂದಿದೆ. ಈ ಚಿತ್ರದ ನಿರ್ದೇಸಕ ವಿಜಯಾನಂದ್ ಅವರು ಕವಿರತ್ನ ಡಾ.ವಿ ನಾಗೇಂದ್ರ ಪ್ರಸಾದ್ ಅವರ ಸಹೋದರ. ನಾಗೇಂದ್ರ ಪ್ರಸಾದ್ ಅವರು ಈ ಚಿತ್ರಕ್ಕೆ ಸಾಹಿತ್ಯ ಮಾತ್ರವಲ್ಲದೇ ಸಂಗೀತದ ಜವಾಬ್ದಾರಿಯನ್ನೂ ನಿರ್ವಹಿಸಿದ್ದಾರೆ. ಒಂದು ವಿಶೇಷ ಪಾತ್ರಕ್ಕೂ ಜೀವ ತುಂಬಿದ್ದಾರೆ. ವಿಜಯಲಕ್ಷ್ಮಿ ಎಂಟರ್ ಪ್ರೈಸಸ್ ಬ್ಯಾನರಿನಡಿಯಲ್ಲಿ ಜಿ ಉಮೇಶ್ ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ.

ಗೌರವ್ ಶೆಟ್ಟಿ ಮತ್ತು ಗಿಲ್ಲಿ ನಟ ನಾಯಕರಾಗಿ ನಟಿಸಿದ್ದಾರೆ. ಶ್ವೇತಾ ನಾಯಕಿಯಾಗಿ ಜೊತೆಯಾಗಿದ್ದಾರೆ. ಇನ್ನುಳಿದಂತೆ, ಆರ್.ಡಿ ನಾಗಾರ್ಜುನ ಛಾಯಾಗ್ರಹಣ, ಶ್ರೀಕಾಂತ್ ಸಂಕಲನ, ವಿ ನಾಗೇಂದ್ರ ಪ್ರಸಾದ್ ಸಾಹಿತ್ಯ ಮತ್ತು ಸಂಗೀತ ನಿರ್ದೇಶನ ಈ ಚಿತ್ರಕ್ಕಿದೆ. ಡ್ರ್ಯಾಗನ್ ಮಂಜು, ಸಾಧು ಕೋಕಿಲ.ಆ, ಸೀನು ಭಾಯ್, ನಾಗವರ್ಧನ್, ಪ್ರಮೋದ್ ಶೆಟ್ಟಿ, ಜೀಜಿ, ಗಿರಿ, ಟೆನಿಸ್ ಕೃಷ್ಣ, ಕರಿಸುಬ್ಬು, ವಂಶಿ, ಮಂಜಣ್ಣ, ಬಿ.ಎನ್ ಮಂಗಳ, ಮಂಗಳೂರು ಮೀನನಾಥ ಮುಂತಾದವರ ತಾರಾಗಣವಿದೆ.



Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,